ಸಂಪುಟ: 01 ಸಂಚಿಕೆ: 46 ಪುಟ: 06 ಗುರುವಾರ 27-08-2026
VOLUVE 01 ISSUE: 46 PAGE: 06 THURSDAY 27-08-2026
VD
REG-PRGI NO KNKAN/26/A5239 ಮೋ: 9880010077
vkbharath25@gmail.com

# ವಿಜಯ ದುಂಬಿ

VIJAYA DUMBI KANNADA DAILY ವಿಶ್ವಾಸದ ಕನ್ನಡಿ ಕನ್ನಡ ದಿನಪತ್ರಿಕೆ Rs.3/-

2 ವಿಬಿ ಜಿ ರಾಮ್ ಜಿ ಯೋಜನೆಯಡಿ ವಯಕ್ತಿಕ ಕಾಮಗಾರಿಗಳ ಸದುಪಯೋಗ ಪಡೆಯಿರಿ: ಹನಮಂತರಾಯ ಯಂಕಂಚಿ
4 ಬೆಂಗಳೂರಿನ 8 ಕ್ಲಬ್‌ಗಳಲ್ಲಿ ಆಹಾರ ಸುರಕ್ಷತೆ ಕುರಿತ ನಿಯಮ ಉಲ್ಲಂಘನೆ, ನೋಟಿಸ್ ಜಾರಿ
6 ಆಹಾರ, ಇಂಧನ ಸಾಗಣೆಗೆ ನಿರ್ಣಾಯಕ ಸಮುದ್ರ ಮಾರ್ಗಗಳ ರಕ್ಷಣೆಗೆ ಸಾಮೂಹಿಕ ಕ್ರಮ ಅಗತ್ಯ: ಭಾರತ

## ತೆಲಂಗಾಣ :ಟ್ರಕ್‌ಗೆ ಬಸ್ ಅಪ್ಪಳಿಸಿ 6 ಪ್ರಯಾಣಿಕರ ದುರ್ಮರಣ

ವಿಜಯ ದುಂಬಿ ಸುದ್ದಿ....

**ಹೈದರಾಬಾದ್: ತೆಲಂಗಾಣದ ಸೂರ್ಯಪೇಟೆ ಜಿಲ್ಲೆಯಲ್ಲಿ ಖಾಸಗಿ ಬಸ್ ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಐವರು ಮಹಿಳೆಯರು ಸೇರಿದಂತೆ ಆರು ಮಂದಿ ಮೃತಪಟ್ಟಿದ್ದು, ಕನಿಷ್ಠ 12 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಹೈದರಾಬಾದ್-ವಿಜಯವಾಡ ರಾಷ್ಟ್ರೀಯ ಹೆದ್ದಾರಿಯ ಕೊಡಾಡ್ ಮಂಡಲದಲ್ಲಿ ಇಂದು ಬೆಳಿಗ್ಗೆ 5.15ರ ಸುಮಾರಿಗೆ ಅಪಘಾತ ಸಂಭವಿಸಿದೆ. ಹೈದರಾಬಾದ್‌ನಿಂದ ಆಂಧ್ರಪ್ರದೇಶದ ಏಲೂರಿಗೆ ತೆರಳುತ್ತಿದ್ದ ಖಾಸಗಿ ಟ್ರಾವೆಲ್ಸ್ ಬಸ್, ಮುಂದೆ ಸಾಗುತ್ತಿದ್ದ ಟ್ರಕ್‌ಗೆ ಹಿಂದಿನಿಂದ ಡಿಕ್ಕಿ ಹೊಡೆದಿದೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.**




ಅಪಘಾತದಲ್ಲಿ ಐವರು ಮಹಿಳೆಯರು ಸೇರಿದಂತೆ ಆರು ಮಂದಿ ಮೃತಪಟ್ಟಿದ್ದು, ಗಾಯಗೊಂಡ 12 ಮಂದಿಯನ್ನು ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಗಾಯಾಳುಗಳ ಪೈಕಿ ಇಬ್ಬರ ಸ್ಥಿತಿ ಗಂಭೀರವಾಗಿದ್ದು, ಅವರನ್ನು ಆಂಧ್ರಪ್ರದೇಶದ ವಿಜಯವಾಡದ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂದು ಸೂರ್ಯಪೇಟೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ನರಸಿಂಹ ತಿಳಿಸಿದ್ದಾರೆ. ಟ್ರಕ್ ಕೈಗಾರಿಕಾ ಉದ್ದೇಶಗಳಿಗೆ ಬಳಸುವ ಭಾರಿ ಗಾತ್ರದ ಕಂಬಗಳನ್ನು ಸಾಗಿಸುತ್ತಿತ್ತು. ಬಸ್ ಟ್ರಕ್‌ಗೆ ಡಿಕ್ಕಿ ಹೊಡೆದಾಗ ಕಂಬಗಳನ್ನು ಭದ್ರಪಡಿಸಲು ಕಟ್ಟಲಾಗಿದ್ದ ಸರಪಳಿ ತುಂಡಾಗಿ ಬಸ್‌ನ ಬಲಭಾಗಕ್ಕೆ ಅಪ್ಪಳಿಸಿದೆ. ಇದರಿಂದ ಮುಂಭಾಗದಲ್ಲಿ ಕುಳಿತಿದ್ದ ಪ್ರಯಾಣಿಕರು ಸಾವನ್ನಪ್ಪಿದ್ದಾರೆ ಎಂದು ಎಸ್ಪಿ ತಿಳಿಸಿದ್ದಾರೆ. ಅಪಘಾತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಸಂತಾಪ ಸೂಚಿಸಿದ್ದಾರೆ. ಗಾಯಾಳುಗಳಿಗೆ ಅಗತ್ಯ ವೈದ್ಯಕೀಯ ಚಿಕಿತ್ಸೆ ಒದಗಿಸಲು ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯದರ್ಶಿಗೆ ಸೂಚಿಸಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ. ಪ್ರಾಥಮಿಕ ತನಿಖೆಯ ಪ್ರಕಾರ ಅತಿವೇಗವೇ ಅಪಘಾತಕ್ಕೆ ಕಾರಣವಾಗಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಬಸ್ ಡಿಕ್ಕಿ ಹೊಡೆಯುವ ಮೊದಲು ಟ್ರಕ್ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದಿರುವ ಸಾಧ್ಯತೆಯೂ ಇದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಕುರಿತು ಹೆಚ್ಚಿನ ತನಿಖೆ ಮುಂದುವರಿದಿದೆ.

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ವಂದೇ ಮಾತರಂ 2 ಚರಣ ಮಾತ್ರ ಹಾಡುವ

## ‘ಕೈ’ಕಮಾಂಡ್ ನಿರ್ಧಾರಕ್ಕೆ ಸಿಎಂ ಡಿಕೆಶಿ ಸಮರ್ಥನೆ

**ಬೆಂಗಳೂರು: ಸರ್ಕಾರಿ ಹಾಗೂ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ರಾಷ್ಟ್ರಗೀತೆಯಾದ ವಂದೇ ಮಾತರಂನ ಮೊದಲ ಎರಡು ಚರಣಗಳನ್ನು ಮಾತ್ರ ಹಾಡಬೇಕು ಎಂಬ ಕಾಂಗ್ರೆಸ್ ಪಕ್ಷದ ನಿಲುವಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದ್ದಾರೆ. ಪಕ್ಷದ ನಿರ್ಧಾರಕ್ಕೆ ತಾವು ಬದ್ಧರಾಗಿರುವುದಾಗಿ ಅವರು ಸ್ಪಷ್ಟಪಡಿಸಿದ್ದಾರೆ. ಇಂಡಿಯಾ ಟುಡೇ ದುಂಡುಮೇಜಿನ ಸಭೆಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಸಿದ್ಧಾಂತ ಹಾಗೂ 1937ರ ನಿರ್ಣಯದ ಬಗ್ಗೆ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು.**

ನಮ್ಮ ಪಕ್ಷದ ಸಿದ್ಧಾಂತದಲ್ಲಿ ನನಗೆ ನಂಬಿಕೆ ಇದೆ. ನಾವು ಯಾವುದೇ ನಿರ್ಧಾರ ಕೈಗೊಂಡಿದ್ದರೂ ಅದಕ್ಕೆ ನಾನು ಬದ್ಧನಾಗಿರುತ್ತೇನೆ.



ಭವಿಷ್ಯದಲ್ಲಿ ಹಾಗೂ ಯಾವುದೇ ಸರ್ಕಾರಿ ಕಾರ್ಯಕ್ರಮಗಳಲ್ಲೂ ಈ ಹಿಂದೆ ನಿರ್ಧರಿಸಿರುವ ವಂದೇ ಮಾತರಂನ ಎರಡು ಚರಣಗಳಿಗೆ ಮಾತ್ರ ಬದ್ಧರಾಗಿರುತ್ತೇವೆ ಎಂದು ಹೇಳಿದರು. ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ವಂದೇ ಮಾತರಂನ ಎಲ್ಲಾ ಚರಣಗಳನ್ನು ಹಾಡುವುದನ್ನು ಕಡ್ಡಾಯಗೊಳಿಸುವ ಪ್ರಸ್ತಾವನೆ ಹಾಗೂ ಈ ವಿಚಾರವಾಗಿ ಬಿಜೆಪಿ-ಕಾಂಗ್ರೆಸ್ ನಡುವೆ ನಡೆಯುತ್ತಿರುವ ರಾಜಕೀಯ ವಾಕ್ಸಮರದ ಹಿನ್ನೆಲೆಯಲ್ಲಿ ಶಿವಕುಮಾರ್ ಅವರ ಹೇಳಿಕೆ ಮಹತ್ವ ಪಡೆದಿದೆ.

ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಕಳೆದ ವಾರ ಸಾರ್ವಜನಿಕ ಹಾಗೂ ರಾಷ್ಟ್ರೀಯ ಸಭೆಗಳಲ್ಲಿ ವಂದೇ ಮಾತರಂನ

6ನೇ ಪುಟಕ್ಕೆ

# ಹಾಲಿನ ಡೈರಿ ಕಟ್ಟಡ ನಿರ್ಮಾಣ ರೈತರಿಗೆ ಅನುಕೂಲ :ಬೈರೇಗೌಡ

## ಬಾವಿಕೆರೆ ಮಹಿಳಾ ಡೈರಿ ನೂತನ ಕಟ್ಟಡ ಉದ್ಘಾಟನೆ

ವಿಜಯ ದುಂಬಿ ಸುದ್ದಿ....

**ನೆಲಮಂಗಲ: ಗ್ರಾಮೀಣ ಭಾಗದಲ್ಲಿ ಹಾಲಿನ ಡೈರಿಗಳ ಹೊಸ ಕಟ್ಟಡಗಳು ನಿರ್ಮಾಣವಾಗಿರುವುದು ಸ್ವಾಗತಾರ್ಹ, ಮುಂದಿನ ದಿನಗಳಲ್ಲಿ ಮತ್ತಷ್ಟುಡೈರಿಗಳ ನಿರ್ಮಾಣ ಮಾಡಲಾಗುತ್ತದೆ ಎಂದು ಬಮೂಲ್ ನಿರ್ದೇಶಕ ಭವಾನಿಶಂಕರ್ ಬೈರೇಗೌಡ ತಿಳಿಸಿದರು. ತಾಲೂಕಿನ ಬಾವಿಕೆರೆ ಗ್ರಾಮದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ನೂತನ ಕಟ್ಟಡವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.**

ರೈತರಿಗೆ ಹಾಲು ಉತ್ಪಾದನೆ ಪ್ರಮುಖ ಆರ್ಥಿಕ ಮೂಲವಾಗಿದೆ. ಆದರೆ ಇತ್ತೀಚಿಗೆ ಮೇವು ಹಾಗೂ ವಿವಿಧ ಆಹಾರ ಪದಾರ್ಥಗಳ ದರ ಏರಿಕೆ ಪರಿಣಾಮ, ಲಾಭ ಗಳಿಸುವುದು ಬಹಳಷ್ಟುಕಷ್ಟವಾಗಿದೆ. ಆದ್ದರಿಂದ ನಮ್ಮ ಆಡಳಿತ ಮಂಡಳಿ ಮುಂದೆ



ದರ ಏರಿಕೆ ಮಾಡುವ ಪ್ರಸ್ತಾವನೆ ಮಾಡಿ ಒತ್ತಾಯ ಮಾಡಲಾಗಿದೆ. ಬಮೂಲ್ ಅಧ್ಯಕ್ಷ ಡಿ.ಕೆ ಸುರೇಶ್‌ರವರ ಸಹೋದರರೇ ಮುಖ್ಯಮಂತ್ರಿಗಳಾಗಿರುವ ಕಾರಣ ಹಾಲಿನ ದರ ಏರಿಕೆ ಮಾಡಬೇಕು.ಈಗಗಾಲೇ ನಾವು ಪ್ರತಿಭಟನೆ ಮಾಡಿದ್ದೇವೆ ಮುಂದೆಯೂ ಹೋರಾಟ ಮಾಡಲಿದ್ದೇವೆ ಎಂದರು. ಯಂಟಗಾನಹಳ್ಳಿ ಗ್ರಾಮಪಂಚಾಯಿತಿ ಮಾಜಿ ಸದಸ್ಯ ಮಹಂಥೇಶ್ ಮಾತನಾಡಿ ಬಾವಿಕೆರೆ ಗ್ರಾಮದಲ್ಲಿ ಸುವ್ಯವಸ್ಥಿತ ಹಾಲಿನ ಡೈರಿ ನಿರ್ಮಾಣ ಮಾಡುವ ಕನಸು ನನಸಾಗಿದೆ.

ಧರ್ಮಸ್ಥಳ ,ಬಮೂಲ್ ಅನೇಕರ ಸಹಕಾರದಿಂದ ಡೈರಿ ನಿರ್ಮಾಣವಾಗಿದ್ದು ಬಮೂಲ್ ನಿರ್ದೇಶಕರಾದ ಬೈರೇಗೌಡರು ಉದ್ಘಾಟನೆ ಮಾಡಿದ್ದಾರೆ. ಮಹಿಳಾ ಡೈರಿಗೆ ಹೆಚ್ಚಿನ ಪ್ರೋತ್ಸಾಹ ನೀಡಿರುವುದು ಸಂತೋಷವಾಗಿದೆ ಎಂದರು. ಸಂದರ್ಭದಲ್ಲಿ ಗ್ರಾಮಪಂಚಾಯಿತಿ ಮಾಜಿ ಸದಸ್ಯರಾದ ಮೈಲಾರಪ್ಪ, ರೇಣುಕಮ್ಮ, ಬಮೂಲ್ ಮೇಲ್ವಿಚಾರಕ ರಮೇಶ್, ಮಹಿಳಾ ಹಾಲಿನ ಡೈರಿ ಅಧ್ಯಕ್ಷೆ ನರಸಮ್ಮಕೃಷ್ಣಪ್ಪ, ಕಾರ್ಯದರ್ಶಿ ನಾಗರತ್ನ, ಉಪಾಧ್ಯಕ್ಷ ಗಂಗಮ್ಮ, ಮುಖಂಡರಾದ ರಮೇಶ್, ಅಭಿಷೇಕ್ ಸೇರಿದಂತೆ ಡೈರಿ ನಿರ್ದೇಶಕರು, ಗ್ರಾಮಸ್ಥರು ಉಪಸ್ಥಿತರಿದ್ದರು.

# ನಾಗಮಂಗಲದಲ್ಲಿ ಆ. 28ರಿಂದ ಶ್ರೀ ರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವ

ವಿಜಯ ದುಂಬಿ ಸುದ್ದಿ....

**ನಾಗಮಂಗಲ: ಪಟ್ಟಣದ ಶ್ರೀ ಭುವನೇಶ್ವರಿ ದೇವಸ್ಥಾನದ ಬಳಿಯಿರುವ ಶ್ರೀ ರಾಘವೇಂದ್ರ ಸ್ವಾಮಿ ಸೇವಾ ಸಮಿತಿ ವತಿಯಿಂದ ಶ್ರೀ ರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವವನ್ನು ಆಗಸ್ಟ್ 28 ರಿಂದ 31 ರವರೆಗೆ ವಿಜೃಂಭಣೆಯಿಂದ ಹಮ್ಮಿಕೊಳ್ಳಲಾಗಿದೆ.**

ಆಗಸ್ಟ್ 28ರ ಶುಕ್ರವಾರ (ಪೂರ್ಣಿಮಾ) ಬೆಳಿಗ್ಗೆ 10.30ಕ್ಕೆ ಸಾಮೂಹಿಕ ಶ್ರೀ ಸತ್ಯನಾರಾಯಣ ಸ್ವಾಮಿ ಪೂಜೆಯೊಂದಿಗೆ ಧಾರ್ಮಿಕ ಕಾರ್ಯಕ್ರಮಗಳು ಆರಂಭಗೊಳ್ಳಲಿವೆ. ತದನಂತರ ಧ್ವಜಾರೋಹಣ, ಗೋಪೂಜೆ, ಧನ-ಧಾನ್ಯ ಲಕ್ಷ್ಮಿ ಪೂಜೆ, ಸ್ವಾಸ್ತಿವಚನ, ಮಹಾಮಂಗಳಾರತಿ ಹಾಗೂ ಪ್ರಸಾದ ವಿನಿಯೋಗ ನಡೆಯಲಿದೆ. ಆರಾಧನಾ ಮಹೋತ್ಸವದ ವಿವರ: ಆಗಸ್ಟ್ 29 (ಶನಿವಾರ): ಪೂರ್ವಾರಾಧನೆ



ಆಗಸ್ಟ್ 30 (ಭಾನುವಾರ): ಮಧ್ಯಾರಾಧನೆ ಆಗಸ್ಟ್ 31 (ಸೋಮವಾರ): ಉತ್ತರಾಧನೆ ದಿನನಿತ್ಯದ ಧಾರ್ಮಿಕ ಪೂಜಾ ಕೈಂಕರ್ಯಗಳು: ಆರಾಧನೆಯ ದಿನಗಳಲ್ಲಿ ಪ್ರತಿದಿನ ಬೆಳಿಗ್ಗೆ 5:30ಕ್ಕೆ ಸುಪ್ರಭಾತ ಮತ್ತು ನಿರ್ಮಾಲ್ಯ ವಿಸರ್ಜನೆ, 7:30ಕ್ಕೆ ಕ್ಷೀರಾಭಿಷೇಕ ಹಾಗೂ ಫಲ ಪಂಚಾಮೃತಾಭಿಷೇಕ ಜರುಗಲಿದೆ.

ಬೆಳಿಗ್ಗೆ 8:30 ರಿಂದ 10:30 ರವರೆಗೆ ಪಾದಪೂಜೆ, ಕನಕಾಭಿಷೇಕ, ಮಹಾಪೂಜೆ ಮತ್ತು ಸರ್ವಸೇವೆಗಳು ನಡೆಯಲಿವೆ. ಮಧ್ಯಾಹ್ನ 12:30ಕ್ಕೆ ಅಲಂಕಾರ ಸೇವೆ, ಮಹಾನೈವೇದ್ಯ, ಮಹಾಮಂಗಳಾರತಿ ನಂತರ ಅನ್ನಸಂತರ್ಪಣೆ ನೆರವೇರಲಿದೆ. ವಿಶೇಷ ರಥೋತ್ಸವ ಹಾಗೂ ಪಲ್ಲಕ್ಕಿ ಸೇವೆ: ಆಗಸ್ಟ್ 31ರ ಉತ್ತರಾಧನೆಯಂದು ನಾಗಮಂಗಲದ ರಾಜಬೀದಿಗಳಲ್ಲಿ ವೇದಘೋಷಗಳೊಂದಿಗೆ ಶ್ರೀಗಳ ವೈಭವಯುತ ಪಲ್ಲಕ್ಕಿ ಉತ್ಸವ ಹಾಗೂ ಶ್ರೀಮಠದ ಆವರಣದಲ್ಲಿ ರಥೋತ್ಸವ ಸೇವೆ ಜರುಗಲಿದೆ.

ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು (ಸಂಜೆ 6:30 ರಿಂದ): ಆ. 29 (ಶನಿವಾರ): ನಂಜನಗೂಡಿನ ಶ್ರೀಮತಿ ರೇಖಾ ಭಟ್ ಮತ್ತು ತಂಡದವರಿಂದ ದಾಸರ ಪದಗಳ ಗಾಯನ. ಆ. 30 (ಭಾನುವಾರ): ‘ರಾಗ ತರಂಗ’ ಶ್ರೀಮತಿ ಆರತಿ ಭಾಸ್ಕರ್ ಮತ್ತು ತಂಡದವರಿಂದ ಗಾಯನ ಸುಧೆ. ಆ. 31 (ಸೋಮವಾರ): ಬೆಂಗಳೂರಿನ ‘ಭಾಗ್ಯಲಕ್ಷ್ಮಿ’ ಶ್ರೀ ಮಂಜುನಾಥ್ ಮತ್ತು ತಂಡದವರಿಂದ ದಾಸರ ಪದಗಳ ಗಾಯನ. ಆರಾಧನೆಯ ಮೂರೂ ದಿನಗಳ ಕಾಲ ಭಕ್ತಾದಿಗಳಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿದೆ. ಕಾಮಧೇನು, ಕಲ್ಪವೃಕ್ಷದಂತೆ ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ಶ್ರೀ ರಾಯರ ಕೃಪೆಗೆ ಪಾತ್ರರಾಗಲು ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಆಗಮಿಸಬೇಕಾಗಿ ಶ್ರೀಮಠದ ಅಧ್ಯಕ್ಷರಾದ ಡಾ. ವಿಷ್ಣುಮೂರ್ತಿ ಭಟ್ ಹಾಗೂ ಮಠದ ಅರ್ಚಕರಾದ ಭಾರತೀಶಾ ಚಾರ್ ಕೆ.ಎಂ. ಕೋರಿದ್ದಾರೆ.

# 600 ಕೋಟಿ ವೆಚ್ಚದ ಡಿ.ಎನ್ ಸೊಲ್ಯೂಷನ್ಸ್ ತಯಾರಿಕಾ ಘಟಕ ಸಚಿವ ಎಂ ಬಿ ಪಾಟೀಲ್ ಉದ್ಘಾಟನೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ದೇವನಹಳ್ಳಿ ತಾಲ್ಲೂಕಿನ ಕುಂದಾಣ ಸಾಮಾನ್ಯ ಕೈಗಾರಿಕಾ ಪ್ರದೇಶದಲ್ಲಿ ದಕ್ಷಿಣ ಕೊರಿಯಾ ಮೂಲದ ಡಿ.ಎನ್.ಸೊಲ್ಯೂಷನ್ಸ್ ಕಂಪನಿಯು 600 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ನೂತನ ತಯಾರಿಕೆ ಹಾಗೂ ಸಂಶೋಧನೆ ಮತ್ತು ಅಭಿವೃದ್ಧಿ (ಆರ್ & ಡಿ) ಘಟಕವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಬುಧವಾರ ಉದ್ಘಾಟಿಸಿದರು.**

ಈ ಸಂದರ್ಭದಲ್ಲಿ ಮಾತನಾಡಿದ ಅವರು, “ಮಶೀನ್ ಟೂಲ್ ತಯಾರಿಕೆಗೆ ಹೆಸರಾಗಿರುವ ಡಿ.ಎನ್.ಸೊಲ್ಯೂಷನ್ಸ್ ಕಂಪನಿಯೊಂದಿಗೆ ಎರಡು ವರ್ಷಗಳ ಹಿಂದೆ ನಾನು ಕೊರಿಯಾ ಪ್ರವಾಸ ಕೈಗೊಂಡಿದ್ದಾಗ ಈ ಒಡಂಬಡಿಕೆ ಆಗಿತ್ತು. ಇಷ್ಟು ಕ್ಷಿಪ್ರ ಅವಧಿಯಲ್ಲಿ ತಯಾರಿಕೆ ಮತ್ತು ಆರ್ & ಡಿ ಘಟಕಗಳು ಸಿದ್ಧವಾಗಿರುವುದು ದೊಡ್ಡ ದಾಖಲೆಯಾಗಿದೆ. ಹೀಗೆ ಎರಡೂ




ಸ್ಥಾವರಗಳು ಒಂದೆಡೆ ಸಾಕಾರಗೊಂಡಿರುವುದು ವಿಶಿಷ್ಟ ಸಂಗತಿಯಾಗಿದೆ” ಎಂದಿದ್ದಾರೆ. ರಾಜ್ಯವು ಸೇವಾಧಾರಿತ ಆರ್ಥಿಕತೆಯಿಂದ ಉತ್ಪಾದನೆ ಆಧರಿತ ಆರ್ಥಿಕತೆಯಾಗಿ ರೂಪಾಂತರಗೊಳ್ಳುತ್ತಿರುವ ಸಂಕ್ರಮಣಾವಸ್ಥೆಯಲ್ಲಿದೆ. ತಯಾರಿಕೆ ವಲಯದಲ್ಲಿ ಬರುವ ಆಟೋಮೊಬೈಲ್, ಹೆವಿ ಎಂಜಿನಿಯರಿಂಗ್, ಏರೋಸ್ಪೇಸ್, ರಕ್ಷಣೋದ್ಯಮ, ಪ್ರಿಸಿಷನ್ ತಯಾರಿಕೆ ಹೀಗೆ ಪ್ರತಿಯೊಂದರಲ್ಲೂ ಮಶೀನ್ ಟೂಲ್ಸ್ ನಿರ್ಣಾಯಕ ಪಾತ್ರ ವಹಿಸುತ್ತದೆ.

ನಾವು ಹೆಚ್ಚಾಗಿ ಈ ಸ್ವರೂಪದ ಬಂಡವಾಳ ಹೂಡಿಕೆಗೇ ಆದ್ಯತೆ ನೀಡುತ್ತಿದ್ದೇವೆ ಎಂದು ಅವರು ತಿಳಿಸಿದ್ದಾರೆ. ದೇಶದ ಒಟ್ಟಾರೆ ಮಶೀನ್ ಟೂಲ್ಸ್ ತಯಾರಿಕೆ ವಲಯಕ್ಕೆ ರಾಜ್ಯವು ಶೇ.52ರಷ್ಟು ಕೊಡುಗೆ ನೀಡುತ್ತಿದೆ. ಡಿ.ಎನ್.ಸೊಲ್ಯೂಷನ್ಸ್ ತನ್ನ ಹೂಡಿಕೆಗೆ ನಮ್ಮಲ್ಲಿಗೆ ಬರಲು ಇದು ಪ್ರಮುಖ ಕಾರಣವಾಗಿದೆ. ಇಲ್ಲಿ ಈಗಾಗಲೇ 350 ಮಂದಿ ಉದ್ಯೋಗನಿರತರಾಗಿರುವುದು ಸಂತಸದ ಸಂಗತಿಯಾಗಿದೆ. ಕಂಪನಿಯು ಇಲ್ಲಿಂದಲೇ ತನ್ನ ಜಾಗತಿಕ ಮಟ್ಟದ ಪೂರೈಕೆಯನ್ನು ನಿರ್ವಹಿಸಬೇಕು.

ಜತೆಗೆ ನಮ್ಮಲ್ಲಿರುವ ತಾಂತ್ರಿಕ ಶಿಕ್ಷಣ ಸಂಸ್ಥೆಗಳು, ಪ್ರಶಿಕ್ಷಣ, ತರಬೇತಿ ಮತ್ತು ಉದ್ಯಮಸಂಬಂಧಿ ಕಾರ್ಯಕ್ರಮಗಳಲ್ಲಿ ಕಂಪನಿಯು ಸಕ್ರಿಯ ಭಾಗವಾಗಬೇಕು ಎಂದು ಅವರು ನುಡಿದಿದ್ದಾರೆ. ಸರಕಾರವು ಕೈಗಾರಿಕಾಸ್ನೇಹಿ ನೀತಿಗಳಲ್ಲಿ ಮುಂಚೂಣಿಯಲ್ಲಿದೆ. ಏಕಗವಾಕ್ಷಿ ವ್ಯವಸ್ಥೆ ಮತ್ತು ತಿದ್ದುಪಡಿಯ ಮೂಲಕ ರೂಪಿಸಿರುವ ಕೈಗಾರಿಕಾ ಸೌಲಭ್ಯ ವಿಧೇಯಕಗಳು ಹೂಡಿಕೆದಾರರಿಗೆ ಬೆರಳತುದಿಯಲ್ಲಿ ಸೇವೆ ಒದಗಿಸುತ್ತಿವೆ. ಇದು ನಮ್ಮ ಸುಗಮ ವಾಣಿಜ್ಯ ಸಂಸ್ಕೃತಿಯ ಭಾಗವಾಗಿದ್ದು, ಅಗತ್ಯ ಪ್ರಕ್ರಿಯೆಗಳನ್ನೆಲ್ಲ ತುಂಬಾ ಸರಳಗೊಳಿಸಲಾಗಿದೆ ಎಂದು ಪಾಟೀಲ ಅಭಿಪ್ರಾಯಪಟ್ಟಿದ್ದಾರೆ. ಡಿ ಎನ್ ಸಲ್ಯೂಷನ್ಸ್ ಕಂಪನಿಯ ಅಧ್ಯಕ್ಷ ವೊನ್ ಜಾಂಗ್ ಕಿಮ್ ಅವರು ಸಂಸ್ಥೆ ನಡೆದು ಬಂದ ಹಾದಿ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ವಿವರಿಸಿದರು. ಮಿಷಿನ್ ಟೂಲ್ ಉತ್ಪಾದನೆಯಲ್ಲಿ 2035ರ ವೇಳೆಗೆ ದೇಶದಲ್ಲೇ ಮೊದಲ ಸ್ಥಾನಕ್ಕೇರುವ ವಿಶ್ವಾಸ ಇದ್ದು, ಈ ನಿಟ್ಟಿನಲ್ಲಿ ನಮ್ಮ ಪ್ರಯತ್ನಗಳು ಸಾಗಲಿವೆ ಎಂದು ಜಾಂಗ್ ಹೇಳಿದರು.

# ಸಂಗಾಪುರದಲ್ಲಿ ಶ್ರದ್ಧಾ-ಭಕ್ತಿಯಿಂದ ನವಗ್ರಹ ಪ್ರತಿಷ್ಠಾಪನೆ ಹಾಗೂ ಹೋಮ

**ವಿಜಯ ದುಂಬಿ ಸುದ್ದಿ....**

**ಗಂಗಾವತಿ: ತಾಲೂಕಿನ ಸಂಗಾಪುರ ಗ್ರಾಮದ ಶ್ರೀ ಶಿವಲಿಂಗೇಶ್ವರ ದೇವಸ್ಥಾನದಲ್ಲಿ ನೂತನ ನವಗ್ರಹ ಪ್ರತಿಷ್ಠಾಪನೆ ಹಾಗೂ ವಿಶೇಷ ಹೋಮ ಕಾರ್ಯಕ್ರಮವು ಶ್ರದ್ಧಾ?ಭಕ್ತಿಯಿಂದ ಹಾಗೂ ಧಾರ್ಮಿಕ ವಿಧಿವಿಧಾನಗಳೊಂದಿಗೆ ವಿಜೃಂಭಣೆಯಿಂದ ಜರುಗಿತು.**

ನವಗ್ರಹ ಪ್ರತಿಷ್ಠಾಪನೆ ಅಂಗವಾಗಿ ದೇವಸ್ಥಾನದಲ್ಲಿ ವಿಶೇಷ ಪೂಜೆ, ಧಾರ್ಮಿಕ ವಿಧಿವಿಧಾನಗಳು ಹಾಗೂ ಹೋಮವನ್ನು ನೆರವೇರಿಸಲಾಯಿತು. ಹೆಬ್ಬಾಳ ಬ್ರಹ್ಮ ಮಠದ ನಾಗಭೂಷಣ ಮಹಾಸ್ವಾಮಿಗಳು ಹಾಗೂ ಪದ್ಮಯ್ಯ ಸ್ವಾಮಿಗಳ ನೇತೃತ್ವದಲ್ಲಿ ನವಗ್ರಹ ಪ್ರತಿಷ್ಠಾಪನೆ ಕಾರ್ಯಕ್ರಮವು ನೆರವೇರಿತು. ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ನಡೆದ ಪೂಜಾ ಕೈಂಕರ್ಯಗಳಲ್ಲಿ ಗ್ರಾಮಸ್ಥರು ಹಾಗೂ ಭಕ್ತರು ಭಕ್ತಿಭಾವದಿಂದ ಪಾಲ್ಗೊಂಡರು. ಹೋಮ ಕಾರ್ಯಕ್ರಮವನ್ನು ಕಂಪ್ಲಿಯ ಸಾಗಂತ ಪಾಠಶಾಲೆಯ ಶಶಿಧರ ಸ್ವಾಮಿಗಳ ನೇತೃತ್ವದಲ್ಲಿ ಶಾಸ್ತ್ರೋಕ್ತವಾಗಿ ನಡೆಸಲಾಯಿತು. ವಿವಿಧ ಧಾರ್ಮಿಕ ವಿಧಿವಿಧಾನಗಳ ಬಳಿಕ ಹೋಮ ಹಾಗೂ ಪೂರ್ಣಾಹುತಿ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಶ್ರೀ ಶಿವಲಿಂಗೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ, ನವಗ್ರಹ ದೇವತೆಗಳಿಗೆ ಪ್ರಾರ್ಥನೆ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ದೇವಸ್ಥಾನ ಕಮಿಟಿಯ ಗೌರವ ಅಧ್ಯಕ್ಷ ಸಿದ್ದರಾಮಯ್ಯ ಸ್ವಾಮಿ, ಅಧ್ಯಕ್ಷ ವಿರೂಪಾಕ್ಷಯ್ಯ ಸ್ವಾಮಿ, ಪ್ರಧಾನ ಕಾರ್ಯದರ್ಶಿ ವೀರಭದ್ರಯ್ಯ ಸ್ವಾಮಿ, ಸಂಜೀವ ಕುಮಾರ, ದಂಡಿನ್ ಮಠದ ಘನಮಠ ಸ್ವಾಮಿ, ಪ್ರಭು ಸ್ವಾಮಿ, ಯಶವಂತ ಸ್ವಾಮಿ, ಪಂಪಾಪತಿ, ನೀಲವಾತಿ, ದೇವರಾಜ ಸೇರಿದಂತೆ ಗ್ರಾಮದ ಗುರು ಹಿರಿಯರು, ದೇವಸ್ಥಾನ ಕಮಿಟಿಯ ಪದಾಧಿಕಾ-ರಿಗಳು ಹಾಗೂ ಭಕ್ತಾದಿಗಳು ಉಪಸ್ಥಿತರಿದ್ದರು.



ನವಗ್ರಹ ಪ್ರತಿಷ್ಠಾಪನೆ ಹಾಗೂ ಹೋಮ ಕಾರ್ಯಕ್ರಮದ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ವಿಶೇಷ ಭಕ್ತಿಮಯ ವಾತಾವರಣ ನಿರ್ಮಾಣವಾಗಿತ್ತು. ಗ್ರಾಮದ ವಿವಿಧ ಭಾಗಗಳಿಂದ ಆಗಮಿಸಿದ್ದ ಭಕ್ತರು ಪೂಜಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಶ್ರೀ ಶಿವಲಿಂಗೇಶ್ವರ ಸ್ವಾಮಿಯ ದರ್ಶನ ಪಡೆದು ಆಶೀರ್ವಾದ ಪಡೆದರು. ಕಾರ್ಯಕ್ರಮದ ನಂತರ ಭಕ್ತರಿಗೆ ಪ್ರಸಾದ ವಿತರಿಸಲಾಯಿತು. ಗ್ರಾಮಸ್ಥರು ಹಾಗೂ ದೇವಸ್ಥಾನ ಕಮಿಟಿಯವರು ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲು ಸಹಕರಿಸಿದರು. ನೂತನ ನವಗ್ರಹ ಪ್ರತಿಷ್ಠಾಪನೆಯಿಂದ ಗ್ರಾಮದ ಆಧ್ಯಾತ್ಮಿಕ ಹಾಗೂ ಧಾರ್ಮಿಕ ಪರಂಪರೆಗೆ ಮತ್ತಷ್ಟು ಮೆರುಗು ಬಂದಂತಾಗಿದೆ ಎಂದು ಭಕ್ತರು ಸಂತಸ ವ್ಯಕ್ತಪಡಿಸಿದರು.

## ಗಾಂಧಿ ಭವನದಲ್ಲಿ ಕಾರಟಗಿಯ ಎಸ್‌ಡಿಎಂ ಕೋಚಿಂಗ್ ಸೆಂಟರ್ ಸಂಸ್ಥಾಪಕ ಸಿದ್ದು ಒಳಕಲದಿನ್ನಿ ಅವರಿಗೆ ಭವ್ಯ ಸನ್ಮಾನ

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ರಾಜ್ಯ ಹಿಂದುಳಿದ ವರ್ಗಗಳ ಮಾನ್ಯತೆ ಪಡೆದ ಸಂಪಾದಕರು ಹಾಗೂ ವರದಿಗಾರರ ಸಂಘ (ರಿ) ಬೆಂಗಳೂರು ಇವರ ಆಶ್ರಯದಲ್ಲಿ ನಗರದ ಐತಿಹಾಸಿಕ ಗಾಂಧಿ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾ ಸಂಪಾದಕರು ಹಾಗೂ ವರದಿಗಾರರ ರಾಜ್ಯಮಟ್ಟದ ಸಮ್ಮೇಳನವು ಅತ್ಯಂತ ಯಶಸ್ವಿಯಾಗಿ ಜರುಗಿತು.**



ಈ ಸಮ್ಮೇಳನಕ್ಕೆ ಕೊಪ್ಪಳ ಜಿಲ್ಲೆಯ ಕಾರಟಗಿ ತಾಲೂಕಿನ ಪ್ರಸಿದ್ಧ ಎಸ್‌ಡಿಎಂ ಕೋಚಿಂಗ್ ಸೆಂಟರ್‌ನ ಸಂಸ್ಥಾಪಕ ಹಾಗೂ ಅಧ್ಯಕ್ಷರಾದ ಶ್ರೀ ಸಿದ್ದು ಒಳಕಲದಿನ್ನಿ ಅವರನ್ನು ಮುಖ್ಯ ಅತಿಥಿಗಳಾಗಿ ಆಹ್ವಾನಿಸಲಾಗಿತ್ತು. ಗ್ರಾಮೀಣ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ನೀಡುವ ಮೂಲಕ ಶೈಕ್ಷಣಿಕ ಕ್ರಾಂತಿ ಮಾಡುತ್ತಿರುವ ಅವರ ಸೇವೆಯನ್ನು ಗುರುತಿಸಿ ಕಾರ್ಯಕ್ರಮದ ಆಯೋಜ-ಕರಾದ ಮಣಿ ಸರ್ ಹಾಗೂ ನೂರಾರು ಮಾಧ್ಯಮ ಮಿತ್ರರು ಹಾಗೂ ಸಿರಿವಾರ ತಾಲೂಕಿನ ಕರ್ನಾಟಕ ಪತ್ರಕರ್ತರ ಸಂಘದ ಅಧ್ಯಕ್ಷ ವಿರುಪಾಕ್ಷಿ ಗೌಡ ಸೇರಿ ಮಾಧ್ಯಮ ಮಿತ್ರರು ಸನ್ಮಾನಿತರಿಗೆ ಶಾಲು, ಮೈಸೂರು ಪೇಟ, ಸ್ಮರಣಿಕೆ ನೀಡಿ ಗೌರವಿಸಿದರು. ಸನ್ಮಾನಿಸಿದರು ಅದೇ ರೀತಿ ಈ ಪತ್ರಿಕಾ ಸಮ್ಮೇಳನದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಿರಿವಾರ ತಾಲೂಕಿನ ಕರ್ನಾಟಕ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಶ್ರೀ ವಿರೂಪಾಕ್ಷಿ ಗೌಡ ಮರಾಠ ಅವರಿಗೂ ಸಹ ಶಾಲು ಹೊದಿಸಿ, ಪುಷ್ಪಮಾಲೆ ಹಾಕಿ ಆತ್ಮೀಯವಾಗಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಆಯೋಜಕರು ಮಾತನಾಡಿ, "ಮಾಧ್ಯಮ ರಂಗವು ಸಮಾಜದ ತಪ್ಪುಗಳನ್ನು ತಿದ್ದುವ ಕೆಲಸ ಮಾಡಿದರೆ, ಸಿದ್ದು ಒಳಕಲದಿನ್ನಿ ಅವರಂತಹ ಸಾಧಕರು ಯುವ ಪೀಳಿಗೆಗೆ ಜ್ಞಾನದ ಬೆಳಕು ನೀಡುತ್ತಿದ್ದಾರೆ. ಇಂತಹ ಸಾಧಕರನ್ನು ಗೌರವಿಸುವುದು ಹೆಮ್ಮೆಯ ವಿಷಯ" ಎಂದರು.

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ವಿಬಿ ಜಿ ರಾಮ್ ಜಿ ಯೋಜನೆಯಡಿ ವಯಕ್ತಿಕ ಕಾಮಗಾರಿಗಳ ಸದುಪಯೋಗ ಪಡೆಯಿರಿ: ಹನಮಂತರಾಯ ಯಂಕಂಚಿ

**ವಿಜಯ ದುಂಬಿ ಸುದ್ದಿ....**

**ಯಲಬುರ್ಗಾ: ಗ್ರಾಮೀಣ ಭಾಗದ ರೈತರ, ಕೂಲಿಕಾರರ ಮತ್ತು ಜೀವನೋಪಾಯ ಚಟುವಟಿ-ಕೆಗಳ ಮೂಲಕ ಆರ್ಥಿಕ ಸದೃಢಕ್ಕಾಗಿ ಜಾರಿಯಾದ ವಿಬಿ ಜಿ ರಾಮ್ ಜಿ ಯೋಜನೆಯಿಂದ ಗ್ರಾಮದ ಕೂಲಿಕಾರರ ಸರ್ವಾಂಗೀಣ ಅಭಿವೃದ್ಧಿಯಾಗಲಿದೆ. ಹೀಗಾಗಿ ಎಲ್ಲರೂ ವೈಯಕ್ತಿಕ ಕಾಮಗಾ-ರಿಗಳ ಸದುಪಯೋಗ ಪಡೆಯಬೇಕು ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಹನಮಂತರಾಯ ಯಂಕಂಚಿ ಹೇಳಿದರು.**

ಯಲಬುರ್ಗಾ ತಾಲೂಕಿನ ವಜ್ರಬಂಡಿ ಗ್ರಾಮ ಪಂಚಾಯತಿಯ ಜರಕುಂಟಿ ಗ್ರಾಮದ ಕೂಲಿಕಾರರು 2026-27ನೇ ಸಾಲಿನ ವಿಬಿ ಜಿ ರಾಮ್ ಜಿ ಯೋಜನೆಯಡಿ ಕೈಗೊಂಡಿರುವ ತಲ್ಲೂರ ಕೆರೆ ಪುನಶ್ಚೇತನ ಕಾಮಗಾರಿ ಸ್ಥಳದಲ್ಲಿ ಜಾಬ್ ಕಾರ್ಡ್ ಮೇಳ ಹಾಗೂ ಐಇಸಿ ಚಟುವಟಿ-



ಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವಿಬಿ ಜಿ ರಾಮ್ ಜಿ ಯೋಜನೆಯಡಿ ನಿರ್ದಿಷ್ಟಪಡಿಸಿದ 318 ಕಾಮಗಾರಿಗಳ ಕು-ರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಜುಲೈ 1 ರಿಂದ ಪ್ರತಿಯೊಬ್ಬ ಕೂಲಿಕಾರ-ರಿಗೂ 382 ರೂಪಾಯಿ ಕೂಲಿಮೊತ್ತ ಹಾಗೂ 125 ದಿನಗಳ ಕೆಲಸ ಸಿಗಲಿದೆ. ಇದರ ಸದುಪಯೋಗ ಎಲ್ಲರೂ ಪಡೆದುಕೊಳ್ಳಬೇಕು. ಗ್ರಾಪಂಗಳಲ್ಲಿ ಯೋಜನೆಯಡಿ ನಿರಂತರ ಕೆಲಸ ನೀಡಲಾಗುವುದು. ಕಾಯಕ ಬಂಧುಗಳು ನಮೂನೆ 6 ನೀಡಿ ಕೆಲಸ ಪಡೆಯಬೇಕು. ವಯಕ್ತಿಕ ಕಾಮಗಾರಿಗಳನ್ನು ರೈತರು ತಮ್ಮ ಜಮಿನುಗಳಲ್ಲಿ ಮಾಡಿಕೊಂಡು ಆರ್ಥಿಕವಾಗಿ ಸದೃಡರಾಗಬೇಕೆಂದು ತಿಳಿಸಿದರು. ತಾಲೂಕು ಐಇಸಿ ಸಂಯೋಜಕರಾದ ಶರಣಪ್ಪ ಹಾಳಕೇರಿ ಮಾತನಾಡಿ, ಆಗಸ್ಟ್ 15ರಿಂದ ಸೆಪ್ಟೆಂಬರ್ 15ರವರೆಗೆ ನಡೆಯಲಿರುವ ಜಾಬ್ ಕಾರ್ಡ್ ಮೇಳ ಅಭಿಯಾನದಡಿ ತಾಲೂಕಿನ ಎಲ್ಲ ಗ್ರಾಮ ಪಂಚಾಯತಿಗಳಲ್ಲಿ ಜಾಬ್ ಕಾರ್ಡ್ ಗಳನ್ನು ವಿತರಿಸಲು ಈಗಾಗಲೇ ಪಿಡಿಒರವರಿಗೆ ತಿಳಿಸಲಾಗಿದೆ. ಅದರಂತೆ ಇಂದು ಜರಕುಂಟಿ ಗ್ರಾಮದ ಕೂಲಿಕಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿ, ಕಾಯಕ ಬಂಧುಗಳು, 70 ಕೂಲಿಕಾರರು ಹಾಜರಿದ್ದರು.

# ಬನ್ನಿಕೊಪ್ಪ ಬಳಿ ಭೀಕರ ಅಪಘಾತ: ಬೈಕ್‌ನಲ್ಲಿದ್ದ ಮೂವರ ಸಾವು

**ವಿಜಯ ದುಂಬಿ ಸುದ್ದಿ....**

**ಕುಕನೂರು: ಕುಕನೂರು ತಾಲೂಕಿನ ಬನ್ನಿಕೊಪ್ಪ ರಾಷ್ಟ್ರೀಯ ಹೆದ್ದಾರಿ ಮೂಲಕ ಬೈಕ್ ನಲ್ಲಿ ನರಗುಂದಕಡೆಯಿಂದಕೊಪ್ಪಳದತ್ತತೆರಳುತ್ತಿದ್ದಾಗ ಬುಧವಾರ ಮಧ್ಯಾಹ್ನ ಘಟನೆ ಸಂಭವಿಸಿದೆ. ಪಲ್ಸರ್ ಬೈಕ್‌ನಲ್ಲಿ ಮೂವರು ಪ್ರಯಾಣಿಸುತ್ತಿದ್ದ ವೇಳೆ ಬನ್ನಿಕೊಪ್ಪ ಗ್ರಾಮದ ಸಮೀಪ ರಾಷ್ಟ್ರೀಯ ಹೆದ್ದಾರಿಯಲ್ಲಿ ರಸ್ತೆಯ ಬದಿಯಲ್ಲಿ ನಿಂತ-ದ್ದ ಗೂಡ್ಸ್ ವಾಹನಕ್ಕೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.**

ಮೃತರನ್ನು ಮಾಬೂಸಾಬ್



ಬುಡನ್ ಸಾಬ್ ಮಟಗೇರಿ, (17)ಫಕ್ರುಸಬ್ ಹಸನಸಾಬ್ ಮಾರನಬಸರಿ (19) ಶಾನುಸಾಬ್ ಮಕ್ತುಮ್ ಬಾಷ ಬಾಸ ಪುರ (15 ) ಸಾ :ನರಗುಂದ. ಎಂದು ಗುರುತಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಇದ್ ಮಿಲಾದ್ ಹಬ್ಬಕ್ಕೆ ನರಗುಂದ್ ದಲ್ಲಿ ಡಿಜೆ ಮೆರವಣಿಗೆ ನಿಷೇದಿಸಲಾಗಿತ್ತು ಹಾಗಾಗಿ ಡಿಜೆ ಮೆರವಣಿಗೆ ನೋಡಲು ಕೊಪ್ಪಳ ಕ್ಕೆ ಹೊರಟಾಗ ಬನ್ನಿಕೊಪ್ಪ ಬಳಿ ನಿಂತ ಟಾ ಟಾ ಎ. ಸಿ. ಗೆ ವೇಗವಾಗಿ ಬಂದು ಬೈಕ್ ಡಿಕ್ಕಿ ಹೊಡೆದು ಸ್ಥಳದಲ್ಲಿಯೇ ಮೃತ ರಾಗಿದ್ದಾರೆ. ಮಾಹಿತಿ ತಿಳಿಯುತ್ತಿದ್ದಂತೆ ಕುಕನೂರು ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ, ಮೃತದೇಹಗಳನ್ನು ಆಸ್ಪತ್ರೆಗೆ ಸಾಗಿಸುವ ಕ್ರಮ ಕೈಗೊಂಡಿದ್ದಾರೆ. ಘಟನೆ ಕ ಘಟನಾ ಸ್ಥಳಕ್ಕೆ ಎಸ್. ಪಿ. ರಾಮ್ ಅರಸಿದ್ದಿ, ಸಿ.ಪಿ. ಆಯ್ ಮೌನೇಶ್, ಪಿ ಎಸ್ ಅಯ್ ಎಸ್. ಪಿ. ನಾಯ್ಕ್ ಅವರು ಸ್ಥಳ ಪರಿಶೀಲಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಜನಪರ ಕಾಳಜಿ, ಸಾಮಾಜಿಕ ಬದ್ಧತೆಯ ಮೂಲಕ ಜನಮನ ಗೆದ್ದ ನಾಯಕ

**ವಿಜಯ ದುಂಬಿ ಸುದ್ದಿ....**

**ಯಲಬುರ್ಗಾ: ಯಲಬುರ್ಗಾ ಮತ್ತು ಕುಕನೂರ ಅವಳಿ ನಗರಗಳ ಯಲಬುರ್ಗಾ ತಾಲೂಕು ಪಂಚಾಯಿತಿ ಮಾಜಿ ಉಪಾಧ್ಯಕ್ಷರು ಹಾಗೂ ಸಮಾಜ ಸೇವಕರಾದ ಶ್ರೀ ಕಳಕಪ್ಪ ವಿ. ಕಂಬಳಿ ಅವರು ಯಲಬುರ್ಗಾ ವಿಧಾನಸಭಾ ಕ್ಷೇತ್ರದಲ್ಲಿ ಸಮಾಜಮುಖಿ ಚಟುವಟಿಕೆಗಳ ಮೂಲಕ ಜನರೊಂದಿಗೆ ನಿರಂತರವಾಗಿ ಬೆರೆತು, ಜನಪರ ಸೇವೆಗೆ ತಮ್ಮದೇ ಆದ ಕೊಡುಗೆ ನೀಡುತ್ತಿದ್ದಾರೆ.**

ಸಮಾಜದ ಬಡವರು, ದುರ್ಬಲರು ಹಾಗೂ ಅಗತ್ಯವಿರುವ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವ ಹೊಂದಿರುವ ಕಳಕಪ್ಪ ವಿ. ಕಂಬಳಿ ಅವರು, ಜನರ ಸಂಕಷ್ಟಗಳಿಗೆ ಸ್ಪಂದಿಸುವುದರ ಜೊತೆಗೆ ಸಾಮಾಜಿಕ, ಶೈಕ್ಷಣಿಕ ಹಾಗೂ ಸಾರ್ವಜನಿಕ ಕ್ಷೇತ್ರಗಳಲ್ಲಿ ತಮ್ಮ ಸೇವಾ ಮನೋಭಾವವನ್ನು



ಮುಂದುವರಿಸಿಕೊಂಡು ಬಂದಿದ್ದಾರೆ. ತಾಲೂಕು ಪಂಚಾಯಿತಿ ಉಪಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ ಸಂದರ್ಭದಲ್ಲಿ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿ ಹಾಗೂ ಸಾರ್ವಜನಿಕ ಸಮಸ್ಯೆಗಳ ಪರಿಹಾರಕ್ಕೆ ಆದ-ೄತೆ ನೀಡಿದ್ದ ಅವರು, ಅಧಿಕಾರದ ಅವಧಿ ಮುಗಿದ ನಂತರವೂ ಜನಸೇವೆಯಿಂದ ಹಿಂದೆ ಸರಿಯದೆ ಸಮಾಜದೊಂದಿಗೆ ನಿರಂತರ ಸಂಪರ್ಕದಲ್ಲಿದ್ದಾರೆ. ಯಲಬುರ್ಗಾ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳ ಜನರೊಂದಿಗೆ ಆತ್ಮೀಯವಾಗಿ ಬೆರೆಯುವ ಅವರು, ಸ್ಥಳೀಯ ಸಮಸ್ಯೆಗಳನ್ನು ಆಲಿಸಿ ಸಂಬಂಧಪಟ್ಟವರ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸುತ್ತಿದ್ದಾರೆ.

ಯುವಕರಿಗೆ ಪ್ರೋತ್ಸಾಹ ನೀಡುವುದು, ಸಾಮಾಜಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ಬೆಂಬಲ ನೀಡುವುದು ಸೇರಿದಂತೆ ವಿವಿಧ ಜನಪರ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ. "ಜನರ ಸೇವೆಯೇ ನಿಜವಾದ ಸಮಾಜ ಸೇವೆ. ಅಧಿಕಾರ ಇರಲಿ, ಇಲ್ಲದಿರಲಿ ಜನರ ಕಷ್ಟಗಳಿಗೆ ಸ್ಪಂದಿಸುವುದು ಪ್ರತಿಯೊಬ್ಬರ ಕರ್ತವ್ಯ" ಎಂಬ ಆಶಯದೊಂದಿಗೆ ಕಳಕಪ್ಪ ವಿ. ಕಂಬಳಿ ಅವರು ಸಮಾಜ ಸೇವೆಯನ್ನು ಮುಂದುವರಿಸುತ್ತಿದ್ದಾರೆ. ಅವರ ಸರಳತೆ, ಜನಪರ ಕಾಳಜಿ ಹಾಗೂ ಸಮಾಜಮುಖಿ ಚಿಂತನೆಗೆ ಕ್ಷೇತ್ರದ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗುತ್ತಿದ್ದು, ಮುಂದಿನ ದಿನಗಳಲ್ಲಿಯೂ ಅವರು ಇನ್ನಷ್ಟು ಜನಪರ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲಿ ಎಂಬ ಆಶಯವನ್ನು ಸಾರ್ವಜನಿಕರು ವ್ಯಕ್ತಪಡಿಸಿದ್ದಾರೆ.

# ಜಾತಿಗಿಂತ ಪ್ರೀತಿ ಮುಖ್ಯ' ಇದೇ ಪ್ರವಾದಿಗಳ ಸಂದೇಶ: ಶ್ರೀ ವಿಜಯಮಹಾಂತ ಮಹಾಸ್ವಾಮಿಗಳು

**ವಿಜಯ ದುಂಬಿ ಸುದ್ದಿ....**

**ಕುಕನೂರು: ಸಮೀಪದ ಕುದರಿಮೋತಿ ಗ್ರಾಮದಲ್ಲಿ ಮಿಲಾದ್-ಉನ್-ನಬಿ ಪ್ರಯುಕ್ತ ಈದ್ ಮಿಲಾದ್ ಹಬ್ಬವನ್ನು ಸಂಭ್ರಮ, ಸಡಗರ ಹಾಗೂ ಹಿಂದು-ಮುಸ್ಲಿಂ ಭಾವೈಕ್ಯತೆಯ ಸಂದೇಶದೊಂದಿಗೆ ಆಚರಿಸಲಾಯಿತು. ಮೊಹರಂ ಹಬ್ಬದ ಆಚರಣೆಗೆ ಹೆಸರುವಾಸಿಯಾಗಿರುವ ಕುದರಿಮೋತಿ ಗ್ರಾಮದಲ್ಲಿ ಮುಸ್ಲಿಂ ಸಮಾಜದವರು ರಾಜಬೀದಿಯಲ್ಲಿ ಜುಲೂಸ್ (ಮೆರವಣಿಗೆ) ನಡೆಸಿ ಗ್ರಾಮದ ವಿವಿಧ ಗುಡಿ, ಮಠ ಮಂದಿರಗಳಿಗೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಹೂಮಾಲೆ ಹಾಕಿ ಗೌರವ ಸಲ್ಲಿಸುವ ಮೂಲಕ 'ನಾವೂ ನಿಮ್ಮವರೇ' ಎಂಬ ಭಾವನೆಯನ್ನು ಸಾರಿದರು. ಗ್ರಾಮದ ವಿವಿಧ ಸಮಾಜಗಳ ಹಿರಿಯರು ಹಾಗೂ ಮುಖಂಡರನ್ನು ಒಗ್ಗೂಡಿಸಿಕೊಂಡು ಹಬ್ಬ ಆಚರಿಸಿದ್ದು ವಿಶೇಷವಾಗಿತ್ತು.**

ಕಾರ್ಯಕ್ರಮದಲ್ಲಿ ಶ್ರೀ ನಿ.ಪ್ರ.ಸ್ವ ಜಗದ್ಗುರು ವಿಜಯಮಹಾಂತ ಮಹಾಸ್ವಾಮಿಗಳು ವಿಶೇಷವಾಗಿ



ಭಾಗವಹಿಸಿ ಆಶೀರ್ವಚನ ನೀಡಿದರು. "ಶ್ರೇಷ್ಠ ಸಂತ ಪೈಗಂಬರರ ಸಂದೇಶ ಕೇವಲ ಮುಸಲ್ಮಾನ-ರಿಗೆ ಮಾತ್ರ ಸೀಮಿತವಲ್ಲ. ಜಾತಿಗಿಂತ ಪ್ರೀತಿ ಮುಖ್ಯ ಎಂಬುದೇ ಪ್ರವಾದಿಗಳ ಸಂದೇಶ. ಎಲ್ಲರೂ ಪರಸ್ಪರ ಪ್ರೀತಿ, ವಿಶ್ವಾಸ ಹಾಗೂ ಸಹೋದರತ್ವದಿಂದ ಬದುಕಬೇಕು. ಹಿಂದು?ಮುಸ್ಲಿಂ ಎಂಬ ಭೇದವಿಲ್ಲದೆ ಮಾನವೀಯತೆಯೇ ಎಲ್ಲರನ್ನೂ ಒಂದುಗೂಡಿಸುವ ಶಕ್ತಿ" ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾತನಾಡಿದ ಗ್ರಾಮದ ದಳಪತಿ ಹನುಮಗೌಡ ಕೆ. ಪೊಲೀಸ್ ಪಾಟೀಲ್, ಕುದರಿಮೋತಿ ಗ್ರಾಮದ ಹಿಂದಿನಿಂದಲೂ ನಡೆದುಕೊಂಡು ಬಂದಿರುವ ಹಿಂದು-ಮುಸ್ಲಿಂ ಭಾವೈಕ್ಯತೆಯ ಪರಂಪರೆಯನ್ನು ಮುಂದುವರಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಹಬ್ಬಗಳು ಕೇವಲ ಒಂದು ಸಮಾಜಕ್ಕೆ ಸೀಮಿತವಾಗದೆ, ಎಲ್ಲರೂ ಒಟ್ಟಾಗಿ ಸೇರಿ ಸಂತೋಷ ಹಂಚಿಕೊಳ್ಳುವಂತಾಗಬೇಕು. ನಮ್ಮ ಗ್ರಾಮದಲ್ಲಿ ಎಲ್ಲ ಸಮಾಜದವರು ಪರಸ್ಪರ ಗೌರವ, ಪ್ರೀತಿ ಮತ್ತು ಸಹೋದರತ್ವದಿಂದ ಬದುಕುತ್ತಿರುವುದು ಹೆಮ್ಮೆಯ ಸಂಗತಿ. ಇದೇ ಸೌಹಾರ್ದತೆ ಮುಂದಿನ ಪೀಳಿಗೆಗೂ ಮಾದರಿಯಾಗಬೇಕು" ಎಂದು ತಿಳಿಸಿದರು. ನಂತರ ಮಾತನಾಡಿದ ಸೈಲಾನ್ ಸಾಬ ಮಕಾಂದರ್ ನಮ್ಮ ಊರಿನ ಎಲ್ಲಾ ಸಮಾಜದ ಗುರು ಹಿರಿಯರು ಮತ್ತು ಯುವಕರು ಸಂಪೂರ್ಣ ಸಪೋರ್ಟ್ ಮಾಡುವ ಮೂಲಕ ಕುದರಿಮೋತಿ ಗ್ರಾಮದಲ್ಲಿ ಯಾವುದೇ ಸಮಾಜದ ಜಯಂತಿ ಮತ್ತು ಜಾತ್ರೆ ಇದ್ರೇ ಎಲ್ಲಾ ಸಮಾಜದವರು ಸಹಕಾರದಿಂದ ಆಚರಣೆ ಮಾಡುತ್ತೇವೆ ಎಂದರು.

ಈ ಸಂದರ್ಭದಲ್ಲಿ ಮಾಜಿ ತಾಲೂಕು ಪಂಚಾಯಿತಿ ಅಧ್ಯಕ್ಷ ಕಳಕಪ್ಪ ಕಂಬಳಿ, ಗ್ರಾಮದ ದಳಪತಿ ಹನುಮಗೌಡ ಪೊ. ಪಾಟೀಲ್, ಬಸಪ್ಪ ದೊಡ್ಡಮನಿ, ಮಹಾಂತಪ್ಪ ಶಿಡ್ನಳ್ಳಿ, ಮಂಜುನಾಥ ಗಟ್ಟೆಪ್ಪನವರ, ಶಿವಪ್ಪ ಬೇವಿನಗಡ, ಹಾಸೀಮಸಾಬ ಮಕಾಂದರ್, ಮಾಬುಸಾಬ ಮಕಾಂದರ್, ಡಾ. ಹುಸೇನ್ ಬಾಷ, ದ್ಯಾಮಣ್ಣ ಉಚ್ಚಲಕುಂಟಿ, ಮಂಜುನಾಥ ಸಜ್ಜನ್, ಬುಡ್ನೇಸಾಬ ನವಲಿ. ಶಿವಪ್ಪ ಬೇವಿನಗಿಡದ್, ಸೋಮಣ್ಣ ಮೂಲಿಮನಿ, ಅಶೋಕ ಗಟ್ಟೆಪ್ಪನವರ, ಶ್ರೀಕಾಂತ್ ಸಜ್ಜನ್, ಹುಸೇನಬಾಷ ಚಂಡಿನಾಳ, ಮಂಜುನಾಥ ನಾಗಲಿಕರ್, ನಾಗರಾಜ ಕೆಂಗಾರ್, ಮಂಜುನಾಥ ಕನ್ನೇಳ ಸೇರಿದಂತೆ ಇತರರು ಇದ್ದರು.

# ಮಾನವೀಯ ಮೌಲ್ಯ ಪ್ರತಿಪಾದಿಸಿದ ಪ್ರವಾದಿ ಮಹ್ಮದ್: ಮಾಜಿ ಶಾಸಕ ದಢೇಸೂಗೂರು



**ವಿಜಯ ದುಂಬಿ ಸುದ್ದಿ....**

**ಕನಕಗಿರಿ: ಪ್ರವಾದಿ ಮಹ್ಮದರು, ಬುದ್ಧ, ಬಸವಣ್ಣ, ಅಂಬೇಡ್ಕರ್ ಇತರೆ ಸೂಫಿ ಸಂತರು, ವಚನಕಾರರು ಮಾನವೀಯ ಮೌಲ್ಯಗಳನ್ನು ಪ್ರತಿಪಾದಿಸಿದ್ದಾರೆ ಎಂದು ಮಾಜಿ ಶಾಸಕ ಬಸವರಾಜ ದಢೇಸೂಗೂರು ಹೇಳಿದರು. ಪಟ್ಟಣದ ಮುಸ್ಲಿಂ ಸಮಾಜದ ಈದ-ಮಿಲಾದ್ ಸಮಿತಿ ವತಿಯಿಂದ ಹಟೇಲಬಾಷ ಮಸೀದಿ ಆವರಣದಲ್ಲಿ ಬುಧವಾರ ಆಯೋಜಿಸಿದ್ದ ಈದ್-ಮಿಲಾದ್ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.**

ಧರ್ಮ ಸಮನ್ವತೆಯನ್ನು ದೇಶದ ಪ್ರತಿಯೊಬ್ಬರು ಪಾಲಿಸಬೇಕು.ಎಲ್ಲಾ ಧರ್ಮಗಳ ಸಾರ ಒಂದೆ ಇದೆ, ಪ್ರತಿಯೊಬ್ಬರು ಮಾನವ ಧರ್ಮವನ್ನು ಪ್ರೀತಿಸಬೇಕೆಂದು ಹೇಳಿದರು. ಜಾಮೀಯಾ ಮಸೀದಿಯ ಮೌಲಾನ್ ಮಹ್ಮದ ಸಜ್ಜಾದ ರಜಾ ನೂರಿ ಮಾತನಾಡಿ ಪೈಗಂಬರರ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ತಿಳಿಸಿದರು.

ಜಿಪಂ ಮಾಜಿ ಸದಸ್ಯ ವೀರೇಶ್ ಸಮಗಂಡಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗಂಗಾಧರ ಸ್ವಾಮಿ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಮಹಾಂತೇಶ ಸಜ್ಜನ್, ಮಂಡಲ ಅಧ್ಯಕ್ಷ ಸಣ್ಣ ಕನಕಪ್ಪ, ಪಟ್ಟಣ ಪಂಚಾಯಿತಿ ಮಾಜಿ ಅಧ್ಯಕ್ಷ ರವಿ ಭಜಂತ್ರಿ ಮಾತನಾಡಿದರು.

ಸಚಿವ ಶಿವರಾಜ ತಂಗಡಗಿ ಸಹೋದರ ರವಿ ತಂಗಡಗಿ, ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ಕಂಠಿರಂಗ, ತಾಪಂ ಮಾಜಿ ಅಧ್ಯಕ್ಷ ಹೊನ್ನುರಸಾಬ ಮೇಸ್ತ್ರಿ, ಈದ್ ಮಿಲಾದ ಸಮಿತಿ ಅಧ್ಯಕ್ಷ ಬಾಬುಸಾಬ ಸುಳೇಕಲ್, ಮೌಲಾನಾ ಅಬ್ದುಲ್ ಹಫೀಜ್ ಕ್ವಾಟಿ, ಪ್ರಮುಖರಾದ ಇಮಾಮಸಾಬ ಎಲಿಗಾರ, ತಬರೇಜ್ ಬಳ್ಳಾರಿ, ಶೌಕತ್ ನಡಲಮನಿ, ಮೌಲಾಸಾಬ ಸಿರಿವಾರ, ಪಾಷ ಮುಲ್ಲಾರ, ಮಹ್ಮದ್‌ಸಾಬ ಅಗರಬತ್ತಿ,ಅನ್ನು ಚಳ್ಳಮರದ ಪಪಂ ಸದಸ್ಯರು, ಈದ್ ಮಿಲಾದ ಸಮಿತಿಯ ಪದಾಧಿಕಾರಿಗಳು ಸೇರಿದಂತೆ ಅನೇಕರು ಇದ್ದರು.

ಅದ್ದೂರಿ ಮೆರವಣಿಗೆ: ಈದ್-ಮಿಲಾದ್ ಹಬ್ಬದ ನಿಮಿತ್ತ ನಡೆದ ಜೂಲೂಸ್ ಮೆರವಣಿಗೆ ಅದ್ದೂರಿಯಾಗಿ ನಡೆಯಿತು.ಪೈಗಂಬರರ ಜೀವನ ಸಂದೇಶ ಸಾರುವ ಗೀತೆಗಳಿಗೆ ಯುವಕರು ಕುಣಿದು ಕುಪ್ಪಣಿಸಿದರು. ರಾಜಬೀದಿ, ಹಳೆಯ ಪೋಲಿಸ್ ಠಾಣೆ ರಸ್ತೆ, ಅಂಬೇಡ್ಕರ್ ವೃತ್ತ, ಇಂದಿರಾ ಕ್ಯಾಂಪ್, ವಾಲ್ಮೀಕಿ ವೃತ್ತದಿಂದ ಶಾದಿಮಹಲ್ ವರೆಗೆ ನಡೆಯಿತು. ಶ್ರೀಕನಕದಾಸ ವೃತ್ತ, ಡಾ. ಬಾಬು ಜಗಜೀವನರಾವ್, ಅಂಬೇಡ್ಕರ್ ವೃತ್ತ, ಛತ್ರಪತಿ ಶಿವಾಜಿ, ವಾಲ್ಮೀಕಿ ವೃತ್ತ, ಸೇರಿದಂತೆ ಕನಕಾಚಲಪತಿ ದೇವರಿಗೆ ಮಾಲಾರ್ಪಣೆ ಮಾಡುವ ಮೂಲಕ ಭಾವೈಕ್ಯತೆ ಮೆರೆಯಲಾಯಿತು. ಶಾದಿ ಮಹಲ್ ನಲ್ಲಿ ಅನ್ನ ಸಂತರ್ಪಣೆ ನಡೆಯಿತು. ಈದ್ ಮಿಲಾದ್ ಪ್ರಯುಕ್ತ ವಿವಿಧಡೆ ಯುವಕರು ಶಬೀರ್, ಅಲ್ಲಾಸ ಗೋರಳ್ಳಿ, ಬಾಬುಸಾಬ ಆಸ್ಪತ್ರೆಯಲ್ಲಿ, ಬಸ್ ನಿಲ್ದಾಣದಲ್ಲಿ ಹಣ್ಣು ಹಂಪುಲ ವಿತರಣೆ ಮಾಡಿದರು.

## ಹೊಸ ಕ್ರಿಮಿನಲ್ ಕಾನೂನುಗಳ ಜಾರಿಗೆ ಅಮಿತ್ ಶಾ ಒಂದು ವರ್ಷದ ಗಡುವು ನಿಗದಿಪಡಿಸಿದ್ದಾರೆ.

**ವಿಜಯ ದುಂಬಿ ಸುದ್ದಿ....**

**ನವದೆಹಲಿ: ಮೂರು ಹೊಸ ಕ್ರಿಮಿನಲ್ ಕಾನೂನುಗಳ ಸಂಪೂರ್ಣ ಅನುಷ್ಠಾನಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಒಂದು ವರ್ಷದ ಗಡುವು ವಿಧಿಸಿದ್ದಾರೆ. ಹೊಸ ಕಾನೂನುಗಳ ಸಂಪೂರ್ಣ ಅನುಷ್ಠಾನದೊಂದಿಗೆ, ಸುಪ್ರೀಂ ಕೋರ್ಟ್‌ವರೆಗಿನ ಕ್ರಿಮಿನಲ್ ಪ್ರಕರಣಗಳನ್ನು ಮೂರು ವರ್ಷಗಳಲ್ಲಿ ವಿಲೇವಾರಿ ಮಾಡಲು ಮತ್ತು ಶಿಕ್ಷೆಯನ್ನು 25% ಹೆಚಿಸಲು ಸಾಧ್ಯವಾಗುತದೆ ಎಂದು ಅವರು ಹೇಳಿದರು.**



ಗುಪ್ತಚರ ಬ್ಯೂರೋದ ಎರಡು ದಿನಗಳ 9ನೇ ರಾಷ್ಟ್ರೀಯ ಭದ್ರತಾ ತಂತ್ರಗಳು (ಎನ್‌ಎಸ್‌ಎಸ್) ಸಮ್ಮೇಳನ-2026 ರ ಸಮಾರೋಪ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಶಾ, ಎನ್‌ಎಸ್‌ಎಸ್ ವೇದಿಕೆಯು ಮುಂದಿನ 15-20 ವರ್ಷಗಳಲ್ಲಿ ಉದ್ಭವಿಸಬಹುದಾದ ಭದ್ರತಾ ಸವಾಲುಗಳನ್ನು ಮುಂಚಿತವಾಗಿ ಗುರುತಿಸಬೇಕು ಮತ್ತು ಅವು ಪ್ರಮುಖ ಬೆದರಿಕೆಗಳಾಗದಂತೆ ತಡೆಯಲು ಕಾರ್ಯತಂತ್ರಗಳನ್ನು ರೂಪಿಸಬೇಕು ಎಂದು ಹೇಳಿದರು. ಭಾರತೀಯ ದಂಡ ಸಂಹಿತೆ (ಐಪಿಸಿ), ಭಾರತೀಯ ನಾಗರಿಕ ಭದ್ರತಾ ಸಂಹಿತೆ (ಐಸಿಎಸ್) ಮತ್ತು ಭಾರತೀಯ ಸಾಕ್ಷ್ಯ ಕಾಯ್ದೆ (ಬಿಎಸ್‌ಎ) ಜುಲೈ 1, 2024 ರಿಂದ ಜಾರಿಗೆ ಬಂದಿವೆ. ಈ ಮೂರು ಕಾನೂನುಗಳು ಕ್ರಮವಾಗಿ ಬ್ರಿಟಿಷ್ ಯುಗದ ಭಾರತೀಯ ದಂಡ ಸಂಹಿತೆ, ಅಪರಾಧ ಪ್ರಕ್ರಿಯಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯ ಕಾಯ್ದೆಯನ್ನು ಬದಲಾಯಿಸಿವೆ. "ಮುಂದಿನ ಒಂದು ವರ್ಷದಲ್ಲಿ ಮೂರು ಹೊಸ ಕಾನೂನುಗಳ 100% ಅನುಷ್ಠಾನ ಪೂರ್ಣಗೊಳ್ಳುತ್ತದೆ. "ಇದು ಮೂರು ವರ್ಷಗಳಲ್ಲಿ ಸುಪ್ರೀಂ ಕೋರ್ಟ್‌ವರೆಗಿನ ಕ್ರಿಮಿನಲ್ ಪ್ರಕರಣಗಳನ್ನು ವಿಲೇವಾರಿ ಮಾಡಲು ಅನುವು ಮಾಡಿಕೊಡುತ್ತದೆ. ಇದು ಶಿಕ್ಷೆಯನ್ನು ಶೇ. 25 ರಷ್ಟು ಹೆಚ್ಚಿಸುತ್ತದೆ" ಎಂದು ಗೃಹ ಸಚಿವರು ಹೇಳಿದರು. ಅಪರಾಧ ಮತ್ತು ಅಪರಾಧಿಗಳ ಟ್ರ್ಯಾಕಿಂಗ್ ನೆಟ್‌ವರ್ಕ್ ಮತ್ತು ಸಿಸ್ಟಮ್ಸ್ (ಸಿಸಿಟಿಎನ್‌ಎಸ್), ಪರಸ್ಪರ ಕಾರ್ಯನಿರ್ವಹಿಸಬಹುದಾದ ಕ್ರಿಮಿನಲ್ ನ್ಯಾಯ ವ್ಯವಸ್ಥೆ ಮತ್ತು ರಾಷ್ಟ್ರೀಯ ಸ್ವಯಂಚಾಲಿತ ಫಿಂಗರ್‌ಪ್ರಿಂಟ್ ಗುರುತಿಸುವಿಕೆ ವ್ಯವಸ್ಥೆಯ ಸಮಗ್ರ ಡೇಟಾಬೇಸ್ ಅನ್ನು ರಚಿಸಲಾಗಿದೆ ಎಂದು ಅವರು ಹೇಳಿದರು. ಭವಿಷ್ಯದ ಭದ್ರತಾ ಸವಾಲುಗಳನ್ನು ಎದುರಿಸಲು ದತ್ತಾಂಶ ಏಕೀಕರಣ, ವಿಶ್ಲೇಷಣೆ ಮತ್ತು ಕಾರ್ಯವಿಧಾನಗಳ ಗುರುತಿಸುವಿಕೆಯ ಮೂಲಕ ಕಾರ್ಯಸಾಧ್ಯ ಗುಪ್ತಚರವನ್ನು ಅಭಿವೃದ್ಧಿಪಡಿಸಲು ಶಾ ಯುವ ಅಧಿಕಾರಿಗಳಿಗೆ ಕರೆ ನೀಡಿದರು. ಸರ್ಕಾರವು ಮೂರು ಪ್ರಮುಖ ಆಂತರಿಕ ಭದ್ರತಾ ಸವಾಲುಗಳನ್ನು ಬಹುತೇಕ ತೆಗೆದುಹಾಕಿದೆ ಎಂದು ಶಾ ಹೇಳಿದರು – ನಕ್ಸಲಿಸಂ, ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದನೆ ಮತ್ತು ಈಶಾನ್ಯದಲ್ಲಿನ ದಂಗೆ. ಈ ಸಾಧನೆಗೆ ಎಲ್ಲಾ ರಾಜ್ಯಗಳ ಪೊಲೀಸ್ ಪಡೆಗಳು, ಕೇಂದ್ರ ತನಿಖಾ ಸಂಸ್ಥೆಗಳು ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಕೊಡುಗೆ ಕಾರಣ ಎಂದು ಅವರು ಹೇಳಿದರು. ಹಿಂದಿನ ಸರ್ಕಾರಗಳು ಮಾದಕ ದ್ರವ್ಯಗಳು, ನಕ್ಸಲಿಸಂ ಮತ್ತು ಈಶಾನ್ಯದ ಸಮಸ್ಯೆಗಳನ್ನು ಉಲ್ಬಣಗೊಳ್ಳುವ ಮೊದಲು ಗುರುತಿಸಿ ಅಗತ್ಯ ಕ್ರಮ ಕೈಗೊಂಡಿದ್ದರೆ, ದೇಶವು ದಶಕಗಳ ಕಾಲ ಅವುಗಳ ಪರಿಣಾಮಗಳನ್ನು ಎದುರಿಸಬೇಕಾಗಿಲ್ಲ ಎಂದು ಅವರು ಹೇಳಿದರು. "ಒಂದೇ ರಾತ್ರಿಯಲ್ಲಿ ಇಡೀ ಕಾರ್ಯಕರ್ತರನ್ನು ನಾಶಪಡಿಸುವುದು ಮತ್ತು ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾ (ಪಿಎಫ್‌ಐ) ಅನ್ನು ನಿಷೇಧಿಸುವುದು ಕೇಂದ್ರ ಮತ್ತು ರಾಜ್ಯಗಳ ನಡುವಿನ ಸಮನ್ವಯಕ್ಕೆ ಒಂದು ಉತ್ತಮ ಉದಾಹರಣೆಯಾಗಿದೆ" ಎಂದು ಶಾ ಹೇಳಿದರು. ಕಳೆದ ಎಂಟು ತಿಂಗಳಲ್ಲಿ ದೇಶದ ಎಲ್ಲಾ ಭೂ ಗಡಿ ರಾಜ್ಯಗಳಿಗೆ ಭೇಟಿ ನೀಡಿದ್ದೇನೆ ಮತ್ತು ಗಡಿ ಭದ್ರತೆಗೆ ಸಂಬಂಧಿಸಿದ ನಾಲ್ಕು ಅಂಶಗಳ ಕಾರ್ಯತಂತ್ರವನ್ನು ವಿವರಿಸುವ ದಾಖಲೆಯನ್ನು ಆಯಾ ರಾಜ್ಯಗಳೊಂದಿಗೆ ಹಂಚಿಕೊಂಡಿದ್ದೇನೆ ಎಂದು ಅವರು ಹೇಳಿದರು. "ಸಾಧ್ಯವಾದಷ್ಟು ಕಡಿಮೆ ಸಮಯದಲ್ಲಿ ದೇಶವನ್ನು ಒಳನುಸುಳುವವರಿಂದ ಮುಕ್ತಗೊಳಿಸುವುದು ನಮ್ಮ ಗುರಿಯಾಗಿದೆ" ಎಂದು ಶಾ ಹೇಳಿದರು. ಒಳನುಸುಳುವಿಕೆಯನ್ನು ರಾಷ್ಟ್ರೀಯ ಭದ್ರತೆ, ಆರ್ಥಿಕತೆ ಮತ್ತು ಜನಸಂಖ್ಯಾ ಬದಲಾವಣೆಗೆ ಬೆದರಿಕೆ ಎಂದು ವಿವರಿಸಿದ ಅವರು, ದೇಶದ ನಾಗರಿಕರು ಮಾತ್ರ ಭಾರತದಲ್ಲಿ ವಾಸಿಸುವ ಹಕ್ಕನ್ನು ಹೊಂದಿದ್ದಾರೆ ಎಂದು ಹೇಳಿದರು.

# ವೃದ್ಧಾಶ್ರಮದಲ್ಲಿ ಜನ್ಮದಿನಾಚರಣೆ; ವೃದ್ಧರಿಗೆ ಊಟ, ಹಣ್ಣು-ಬಿಸ್ಕತ್ತು ವಿತರಣೆ



**ವಿಜಯ ದುಂಬಿ ಸುದ್ದಿ....**

**ಕುಕನೂರು: ಮುಹಮ್ಮದ್ ಪೈಗಂಬರ್ ಅವರು ಕರುಣೆ, ಮಮತೆ, ಪರಸ್ಪರ ಪ್ರೀತಿ, ವಿಶ್ವಾಸ ಹಾಗೂ ಮಾನವೀಯತೆಯ ಸಂದೇಶವನ್ನು ಸಾರುವ ಮೂಲಕ ಇಡೀ ವಿಶ್ವಕ್ಕೆ ಮಾದರಿಯಾಗಿದ್ದಾರೆ. ಅವರ ಆದರ್ಶ ತತ್ವಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹಿರಿಯ ಪತ್ರಕರ್ತ ಅಲ್ಲಾವುದ್ದೀನ ಯಮ್ಮಿ ಹೇಳಿದರು.**

ಪಟ್ಟಣದ ಸ್ಥಳೀಯ ವೃದ್ಧಾಶ್ರಮದಲ್ಲಿ ಮುಹಮ್ಮದ್ ಪೈಗಂಬರ್ ಅವರ ಜನ್ಮದಿನದ ಅಂಗವಾಗಿ ಅಂಜುಮನ್ ಕಮೀಟಿಯ ಯುವಕರು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವೃದ್ಧರಿಗೆ ಊಟ, ಹಣ್ಣು ಹಾಗೂ ಬಿಸ್ಕತ್ತುಗಳನ್ನು ವಿತರಿಸಿ ಅವರು ಮಾತನಾಡಿದರು.

ಮುಹಮ್ಮದ್ ಪೈಗಂಬರ್ ಅವರ ಜೀವನ ಸಂದೇಶಗಳು ಎಲ್ಲ ಕಾಲಕ್ಕೂ ದಾರಿದೀಪವಾಗಿವೆ. ಮನುಷ್ಯ ಪ್ರೇಮ ದಾರಿ ತಪ್ಪಿದಾಗ, ಮನುಷ್ಯರ ನಡುವೆ ಕಂದಕ ಸೃಷ್ಟಿಯಾದಾಗ ಹಾಗೂ ನೈತಿಕ ಮೌಲ್ಯಗಳು ಕುಸಿದಾಗ ಅನೇಕ ಸಂತರು, ಸೂಫಿಗಳು ಹಾಗೂ ಮಹಾತ್ಮರು ಮಾನವೀಯತೆಯ ಜಾಗೃತಿ ಮೂಡಿಸಲು ಶ್ರಮಿಸಿದ್ದಾರೆ.

ಜನರನ್ನು ಅಜ್ಞಾನದ ಕತ್ತಲೆಯಿಂದ ಜ್ಞಾನದ ಬೆಳಕಿನೆಡೆಗೆ ಕರೆದೊಯ್ದ ಮಹಾತ್ಮರ ಜೀವನ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ. ಅಂತಹ ಮಹಾನ್ ಮಾನವತಾವಾದಿಗಳಲ್ಲಿ ಮುಹಮ್ಮದ್ ಪೈಗಂಬರ್ ಅವರು ಮುಂಚೂಣಿಯಲ್ಲಿದ್ದಾರೆ ಎಂದರು. ಅಂಜುಮನ್ ಕಮೀಟಿಯ ಅಧ್ಯಕ್ಷ ರಷೀದ್ ಅಹ್ಮದ್ ಹಣಜಿಗಿರಿ ಮಾತನಾಡಿ, ಮುಹಮ್ಮದ್ ಪೈಗಂಬರ್ ಅವರು ಜಗತ್ತಿನಲ್ಲಿ ಸಮಾನತೆ ಹಾಗೂ ಮಾನವೀಯತೆಯ ಸಂದೇಶ ಸಾರಿದವರು. ಅನ್ಯಾಯ, ಅನೀತಿ ಹಾಗೂ ಅಧರ್ಮದ ವಿರುದ್ಧ ಮನುಷ್ಯ ಧರ್ಮದ ನೆಲಗಟ್ಟಿನ ಮೇಲೆ ನಿಂತು ಪ್ರೀತಿ ಮತ್ತು ಸಹೋದರತ್ವದ ಬದುಕಿಗೆ ಪ್ರೇರಣೆ ನೀಡಿದ ಮಹಾನ್ ಮಾನವತಾವಾದಿಗಳಾಗಿದ್ದಾರೆ. ಅವರ ಜನ್ಮದಿನದ ಅಂಗವಾಗಿ ಎಲ್ಲರಿಗೂ ಶುಭಾಶಯಗಳು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಅಂಜುಮನ್ ಕಮೀಟಿ ಅಧ್ಯಕ್ಷ ರಷೀದ್ ಸಾಬ್ ಮುಬಾರಕ್, ಮೂಮಿನ್, ಮೌಲಾಸಾಬ ಕೊಪ್ಪಳ, ಬಾಷಾ ಡಂಬಳ, ಉಪಾಧ್ಯಕ್ಷ ರಹೀಮಾನ್ ಸಾಬ್ ಮಕ್ಕಪ್ಪನವರ್, ಗುಡೂಷಾ ಮಕಾನದಾರ, ಹಾಜಿ ಲಾಲ್ ಸಾಬ್ ಗುಡಿಹಿಂದಲ್, ಮೆಹಬೂಬ್ ಗುಡಿಹಿಂದಲ್, ಮೆಹಬೂಬ್ ಪಾಷಾ ಕೊಪ್ಪಳ, ಮೊಹಮ್ಮದ್ ಗದ್ವಾಲ್, ಫಾರೂಕ್ ಬಳ್ಳಾರಿ, ಸಾಧೀಕ್ ಪಾಷಾ ಖಾಜಿ, ರಾಜಾಸಾಬ್ ದಫೇದಾರ್, ಅಜರುದ್ದೀನ್ ದ್ಯಾಂಪೂರ, ಚಾಂದ್ ಹುಸೇನ್ ಗಾಂಜಿ, ಶಫೀ ಯಮ್ಮಿ, ಮೌಲಾಸಾಬ ಮಕಾನದಾರ (ಮೇಸ್ತ್ರಿ), ಹುಸೇನ್ ಸಾಬ್ ನದಾಫ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ವರದಿ: ಚನ್ನಯ್ಯ ಹಿರೇಮಠ, ಕುಕನೂರು**

# ಮಾದಕ ವ್ಯಸನದ ವಿರುದ್ಧ ಕೆಜಿಎಫ್ ಪೊಲೀಸರ ಕಲಾತ್ಮಕ ಸಮರ: ವೈರಲ್ ಆಯ್ತು 'ಒಂದು ತಪ್ಪು ಹೆಜ್ಜೆ' ಬೀದಿನಾಟಕ



**ವಿಜಯ ದುಂಬಿ ಸುದ್ದಿ....**

**ಕೆಜಿಎಫ್: ಕೇವಲ ಲಾಠಿ, ಕಠಿಣ ಕಾನೂನು ಕ್ರಮಗಳಿಂದಷ್ಟೇ ಅಪರಾಧಗಳನ್ನು ತಡೆಯಲು ಸಾಧ್ಯವಿಲ್ಲ; ಕಲೆಯ ಮೂಲಕ ಜಾಗೃತಿ ಮೂಡಿಸಿಯೂ ಸಮಾಜವನ್ನು ತಿದ್ದಬಹುದು ಎಂಬುದನ್ನು ಕೆಜಿಎಫ್ ಜಿಲ್ಲಾ ಪೊಲೀಸ್ ಇಲಾಖೆ ಸಾಬೀತುಪಡಿಸಿದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಅವರ ಮಾರ್ಗದರ್ಶನದಲ್ಲಿ ಮೂಡಿಬಂದ "ಒಂದು ತಪ್ಪು ಹೆಜ್ಜೆ" ಎಂಬ ವಿಶಿಷ್ಟ ಬೀದಿನಾಟಕವು ಈಗ ಸಾರ್ವಜನಿಕ ವಲಯ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಮೆಚ್ಚುಗೆಗೆ ಪಾತ್ರವಾಗಿದೆ.**

ಸ್ವಾತಂತ್ರ್ಯ ದಿನಾಚರಣೆಯಂದು ನಗರಸಭೆ ಕ್ರೀಡಾಂಗಣದಲ್ಲಿ ಶಾಸಕಿ ರೂಪಕಲಾ ಹಾಗೂ ಗಣ್ಯರ ಸಮ್ಮುಖದಲ್ಲಿ ಪ್ರದರ್ಶನಗೊಂಡ ಈ ನಾಟಕ, ಯುವಜನತೆ ಮಾದಕ ವಸ್ತುಗಳ ವ್ಯಸನಕ್ಕೆ ಬಲಿಯಾದರೆ ಒಂದು ಸುಖೀ ಕುಟುಂಬ ಹೇಗೆ ನಾಶವಾಗುತ್ತದೆ ಎಂಬುದನ್ನು ಎಳೆಎಳೆಯಾಗಿ ಬಿಂಬಿಸಿದೆ. ಪ್ರತಿಭಾವಂತ ವಿದ್ಯಾರ್ಥಿ ಗೌತಮ್, ಸ್ನೇಹಿತರ ಒತ್ತಡಕ್ಕೆ ಮಣಿದು ಕುತೂಹಲಕ್ಕಾಗಿ ಇಡುವ ಒಂದು ತಪ್ಪು ಹೆಜ್ಜೆ ಆತನನ್ನು ಪೂರ್ಣಪ್ರಮಾಣದ ವ್ಯಸನಿಯನ್ನಾಗಿ ಮಾಡುತ್ತದೆ. ನಂತರ ಡ್ರಗ್ಸ್ ಖರೀದಿಸಲು ಹಣವಿಲ್ಲದೆ ಕಳ್ಳತನದ ಹಾದಿ ಹಿಡಿದು, ಮನೆಯ ನೆಮ್ಮದಿಯನ್ನೇ ಹಾಳುಮಾಡುತ್ತಾನೆ.

ಆಸ್ಪತ್ರೆ ವಾಸದ ಬಳಿಕ ಆತ ಬದಲಾಗಲು ಯತ್ನಿಸಿದರೂ, ತಂಗಿಯ ಮದುವೆ ನಿಶ್ಚಯವಾದ ಸಂದರ್ಭದಲ್ಲೇ ಆತನ ಹಳೆಯ ಕಳ್ಳತನದ ಪ್ರಕರಣಕ್ಕಾಗಿ ಪೊಲೀಸರು ಬಂಧಿಸುತ್ತಾರೆ. ಕಾನೂನು ಯಾರನ್ನೂ ಬಿಡುವುದಿಲ್ಲ ಎಂಬ ಕಟು ಸಂದೇಶದೊಂದಿಗೆ ನಾಟಕ ಮುಕ್ತಾಯವಾಗಿ ನೆರೆದಿದ್ದವರ ಕಣ್ಣಂಚಲ್ಲಿ ನೀರು ತರಿಸಿತು. ಉರಿಗಾಂ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಹರೀಶ್ ಅವರ ಕಥೆ, ಚಿತ್ರಕಥೆ, ನಿರ್ದೇಶನ ಹಾಗೂ ನಟನೆಯಲ್ಲಿ ಈ ನಾಟಕ ಮೂಡಿಬಂದಿದೆ. ಸೈಬರ್ ಕ್ರೈಂ ಠಾಣೆಯ ಮಣಿಕಂಠ ತಂದೆಯಾಗಿ, ಆಂಡರ್ಸನ್ ಪೇಟೆ ಠಾಣೆಯ ನಂದಿತಾ ತಾಯಿಯಾಗಿ ಅತ್ಯಂತ ನೈಜವಾಗಿ ಅಭಿನಯಿಸಿದ್ದಾರೆ. ಜೊತೆಗೆ ಡಾ. ಟಿ. ತಿಮ್ಮಯ್ಯ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳು ಗೌತಮ್ ಹಾಗೂ ತಂಗಿಯ ಪಾತ್ರಕ್ಕೆ ಜೀವ ತುಂಬಿದ್ದಾರೆ.

ಈ ನಾಟಕದ ವಿಡಿಯೋ ಈಗ ಇಲಾಖೆಯ ವಾಟ್ಸಾಪ್ ಗ್ರೂಪ್ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿದ್ದು, ಸಾರ್ವಜನಿಕರಲ್ಲಿ ದೊಡ್ಡ ಮಟ್ಟದ ಜಾಗೃತಿ ಮೂಡಿಸುತ್ತಿದೆ. ಈ ಕುರಿತು ಪ್ರತಿಕ್ರಿಯಿಸಿದ ಎಸ್ಪಿ ಶಿವಾಂಶು ರಜಪೂತ್, ಡ್ರಗ್ಸ್ ಮುಕ್ತ ಕೆಜಿಎಫ್ ನಿರ್ಮಾಣವೇ ತಮ್ಮ ಇಲಾಖೆಯ ಮುಖ್ಯ ಗುರಿಯಾಗಿದ್ದು, ಹರೀಶ್ ಹಾಗೂ ಅವರ ತಂಡದ ಈ ವಿನೂತನ ಪ್ರಯತ್ನಕ್ಕೆ ಅಭಿನಂದನೆ ಸಲ್ಲುವುದಾಗಿ ತಿಳಿಸಿದ್ದಾರೆ. ಯುವಜನರಿಗೆ ನೇರವಾಗಿ ತಲುಪುವ ಉದ್ದೇಶದಿಂದ ಕೇವಲ ಎರಡೇ ಮೂರು ದಿನಗಳಲ್ಲಿ ಎಸ್ಪಿ ಅವರ ಮಾರ್ಗದರ್ಶನ ಹಾಗೂ ಕಾಲೇಜು ವಿದ್ಯಾರ್ಥಿಗಳ ಸಹಕಾರದಿಂದ ಈ ನಾಟಕ ರೂಪಿಸಲು ಸಾಧ್ಯವಾಯಿತು ಎಂದು ಇನ್‌ಸ್ಪೆಕ್ಟರ್ ಹರೀಶ್ ಹರ್ಷ ವ್ಯಕ್ತಪಡಿಸಿದ್ದಾರೆ.

# ಈದ್ ಮಿಲಾದ್ ಅಂಗವಾಗಿ ಸರ್ಕಾರಿ ಆಸ್ಪತ್ರೆ ರೋಗಿಗಳಿಗೆ ಹಾಲು, ಹಣ್ಣು ವಿತರಣೆ

**ವಿಜಯ ದುಂಬಿ ಸುದ್ದಿ....**

**ಮುದಗಲ್: ಪವಿತ್ರ ಈದ್ ಮಿಲಾದ್ ಅಂಗವಾಗಿ ಮುದಗಲ್ ಪಟ್ಟಣದಲ್ಲಿ ಮುಸ್ಲಿಂ ಸಮುದಾಯದವರು ಸೌಹಾರ್ದತೆ ಹಾಗೂ ಸಂಭ್ರಮದಿಂದ ಹಬ್ಬ ಆಚರಿಸುವ ಮೂಲಕ ಭಾವೈಕ್ಯತೆಯ ಸಂದೇಶ ಸಾರಿದರು. ಈದ್ ಮಿಲಾದ್ ಪ್ರಯುಕ್ತ ಜುನೈದಿ ವೆಲ್ಫೇರ್ ಟ್ರಸ್ಟ್ ನೇತೃತ್ವದಲ್ಲಿ ಪಟ್ಟಣದ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆಗೆ ದಾಖಲಾಗಿದ್ದ ರೋಗಿಗಳಿಗೆ ಹಾಲು ಹಾಗೂ ಹಣ್ಣುಗಳನ್ನು ವಿತರಿಸುವ ಮೂಲಕ ಮಾನವೀಯ ಸೇವೆ ಸಲ್ಲಿಸಲಾಯಿತು.**



ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ವಿಶೇಷ ಕಾರ್ಯದರ್ಶಿ ಚಂದ್ರಶೇಖರ ಎಂ. ಗಂಗಣ್ಣ ಮಾತನಾಡಿ, ಮುದಗಲ್ ಪಟ್ಟಣವು ಹಿಂದಿನಿಂದಲೂ ಭಾವೈಕ್ಯತೆ ಮತ್ತು ಸೌಹಾರ್ದತೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು. ಹಿಂದೂ-ಮುಸ್ಲಿಂ ಸೇರಿದಂತೆ ವಿವಿಧ ಸಮುದಾಯದವರು ಮೊಹರಂ ಹಾಗೂ ಇತರ ಹಬ್ಬಗಳನ್ನು ಪರಸ್ಪರ ಸಹಕಾರ ಮತ್ತು ಒಗ್ಗಟ್ಟಿನಿಂದ ಆಚರಿಸುತ್ತಿರುವುದು ಮಾದರಿಯಾಗಿದೆ.

ಪ್ರವಾದಿ ಮಹಮ್ಮದ್ ಅವರ ಜನ್ಮದಿನದ ಅಂಗವಾಗಿ ಆಸ್ಪತ್ರೆಯ ರೋಗಿಗಳಿಗೆ ಹಾಲು, ಹಣ್ಣು ವಿತರಿಸುವ ಮೂಲಕ ಮುಸ್ಲಿಂ ಸಮುದಾಯದವರು ಸಹೋದರತ್ವ, ಸೇವಾ ಮನೋಭಾವ ಹಾಗೂ ಮಾನವೀಯತೆಯ ಸಂದೇಶ ಸಾರಿದ್ದಾರೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ಮುಖಂಡರಾದ ಗುರುಬಸಪ್ಪ ಸಜ್ಜನ್ ಹಾಗೂ ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಎಸ್.ಎ. ನಯಿಂ ಮಾತನಾಡಿ, ಧರ್ಮ ಯಾವುದೇ ಆಗಿರಲಿ, ಮಾನವೀಯತೆಯೇ ಎಲ್ಲಕ್ಕಿಂತ ಮುಖ್ಯ. ಸಂಕಷ್ಟದಲ್ಲಿರುವವರ ನೋವಿಗೆ ಸ್ಪಂದಿಸುವುದು ಹಾಗೂ ಪರಸ್ಪರ ಸಹಕಾರದಿಂದ ಬದುಕುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಪ್ರವಾದಿಯವರು ತೋರಿದ ಸನ್ಮಾರ್ಗದಲ್ಲಿ ನಡೆದು ಸಮಾಜದಲ್ಲಿ ಶಾಂತಿ, ಸಹಬಾಳ್ವೆ ಮತ್ತು ಸಹೋದರತ್ವವನ್ನು ಬೆಳೆಸುವ ಅಗತ್ಯವಿದೆ. ಮುದಗಲ್‌ನಲ್ಲಿ ಎಲ್ಲ ಸಮುದಾಯದವರು ಹಬ್ಬ-ಹರಿದಿನಗಳನ್ನು ಸೌಹಾರ್ದತೆಯಿಂದ ಆಚರಿಸುತ್ತಿರುವುದು ಭಾವೈಕ್ಯತೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ದೇವಿಂದ್ರ ವಕೀಲ್, ಎಸ್ಸೆನ್ ಖಾದ್ರಿ, ಮಂಜುನಾಥ ಬನ್ನಿಗೋಳ್ಕರ್, ಮೈಬೂಬು ಕಡ್ಡಿಪುಡಿ, ಹುಸೇನ್ ಪಾಶಾ, ಮಾಬು ಹುಸೇನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೆಂಗಳೂರಿನ 8 ಕ್ಲಬ್‌ಗಳಲ್ಲಿ ಆಹಾರ ಸುರಕ್ಷತೆ ಕುರಿತ ನಿಯಮ ಉಲ್ಲಂಘನೆ, ನೋಟಿಸ್ ಜಾರಿ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಬೆಂಗಳೂರು ನಗರ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಎಂಟು ಕ್ಲಬ್‌ಗಳಲ್ಲಿ ಆಹಾರ ಸುರಕ್ಷತೆ ಕುರಿತ ವಿಶೇಷ ತಪಾಸಣೆ ನಡೆಸಿ, ನಿಯಮ ಉಲ್ಲಂಘನೆ ಕಂಡುಬಂದ ಹಿನ್ನೆಲೆಯಲ್ಲಿ ನೋಟಿಸ್ ಜಾರಿ ಮಾಡಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ತಿಳಿಸಿದ್ದಾರೆ.**



ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಹಾರ ಸುರಕ್ಷತಾ ವಿಭಾಗದ ವತಿಯಿಂದ ವಿವಿಧ ಕ್ಲಬ್‌ಗಳಲ್ಲಿ ವಿಶೇಷ ತಪಾಸಣೆ ನಡೆಸಲು ಆಹಾರ ಸುರಕ್ಷತಾ ಅಧಿಕಾರಿಗಳ ತಂಡಗಳನ್ನು ರಚಿಸಿ ನಿಯೋಜಿಸಲಾಗಿತ್ತು ಎಂದು ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಬೌರಿಂಗ್ ಕ್ಲಬ್‌ನಲ್ಲಿ ಆಹಾರ ಸಂಗ್ರಹಣಾ ಸ್ಥಳದಲ್ಲಿ ಅಸ್ವಚ್ಛತೆ ಹಾಗೂ ಕೀಟಬಾಧೆ ಕಂಡುಬಂದಿದೆ. ಸೆಂಚುರಿ ಕ್ಲಬ್‌ನಲ್ಲಿ ತಪಾಸಣೆ ವೇಳೆ ಕೀಟಬಾಧೆ ಹಾಗೂ ಅಸ್ವಚ್ಛ ಮತ್ತು ಅನೈರ್ಮಲ್ಯಕರ ಪರಿಸ್ಥಿತಿ ಕಂಡುಬಂದ ಹಿನ್ನೆಲೆಯಲ್ಲಿ ಈ ಎರಡು ಕ್ಲಬ್‌ಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ.

ಕೆಎಸ್‌ಸಿಎ ಕ್ಲಬ್‌ನಲ್ಲಿ ವೈಯಕ್ತಿಕ ಸ್ವಚ್ಛತೆಯ ಕೊರತೆ, ಪ್ಲಾಸ್ಟಿಕ್ ಕಟಿಂಗ್ ಬೋರ್ಡ್ ಬಳಕೆ, ಡ್ರೈನೇಜ್ ವ್ಯವಸ್ಥೆಯಲ್ಲಿ ತಡೆ, ಆಹಾರ ಲೇಬಲಿಂಗ್ ನಿಯಮಗಳ ಉಲ್ಲಂಘನೆ, ಫ್ರೋಜನ್ ಸ್ಟೋರೇಜ್‌ನಲ್ಲಿ ಸ್ವಚ್ಛತೆಯ ಕೊರತೆ, ಸಸ್ಯಾಹಾರಿ ಮತ್ತು ಮಾಂಸಾಹಾರಿ ಆಹಾರ ಪದಾರ್ಥಗಳ ಅಸಮರ್ಪಕ ಸಂಗ್ರಹಣೆ ಹಾಗೂ ಪಾತ್ರೆ ತೊಳೆಯುವ ಸ್ಥಳದಲ್ಲಿ ಬಿಸಿನೀರಿನ ವ್ಯವಸ್ಥೆಯ ಕೊರತೆ ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ ಕ್ಲಬ್‌ಗೆ ನೋಟಿಸ್ ನೀಡಲಾಗಿದೆ. ಕ್ಯಾಥೋಲಿಕ್ ಕ್ಲಬ್‌ನಲ್ಲಿ ಆಹಾರ ಪದಾರ್ಥಗಳ ಲೇಬಲಿಂಗ್ ನಿಯಮ ಉಲ್ಲಂಘನೆ, ಕೀಟಬಾಧೆ, ಸ್ವಚ್ಛತೆ ಮತ್ತು ನೈರ್ಮಲ್ಯದ ಕೊರತೆ ಹಾಗೂ ಅವಧಿ ಮೀರಿದ 10 ಪ್ಯಾಕೆಟ್‌ಗಳ ಅಣಬೆ ಆಹಾರ ಪದಾರ್ಥಗಳು ಪತ್ತೆಯಾದ ಹಿನ್ನೆಲೆಯಲ್ಲಿ ನೋಟಿಸ್ ಜಾರಿ ಮಾಡಲಾಗಿದೆ.

ಕೆನ್ನಿಸ್ ಕ್ಲಬ್‌ನಲ್ಲಿ ಆಹಾರ ನಿರ್ವಹಣಾ ಸಿಬ್ಬಂದಿಗೆ ಸಂಬಂಧಿಸಿದ ವೈದ್ಯಕೀಯ ಪ್ರಮಾಣಪತ್ರಗಳು ಲಭ್ಯವಿಲ್ಲದಿರುವುದು ಕಂಡುಬಂದಿದೆ. ವಿಜಯನಗರ ಕ್ಲಬ್‌ನಲ್ಲಿ ಆಹಾರ ಪದಾರ್ಥಗಳ ಲೇಬಲಿಂಗ್ ನಿಯಮಗಳ ಉಲ್ಲಂಘನೆ ಹಾಗೂ ಸ್ವಚ್ಛತೆ ಮತ್ತು ನೈರ್ಮಲ್ಯದ ಕೊರತೆ ಕಂಡುಬಂದಿದೆ. ಮಹಾಲಕ್ಷ್ಮೀ ಲೇಔಟ್ ಕ್ಲಬ್‌ನಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯದ ಕೊರತೆ ಕಂಡುಬಂದಿದ್ದು, ಮಲ್ಲೇಶ್ವರಂ ಕ್ಲಬ್‌ನಲ್ಲಿ ಆಹಾರ ಪದಾರ್ಥಗಳ ಲೇಬಲಿಂಗ್ ಉಲ್ಲಂಘನೆ, ಕೀಟಬಾಧೆ ಹಾಗೂ ಸ್ವಚ್ಛತೆ ಮತ್ತು ನೈರ್ಮಲ್ಯದ ಕೊರತೆ ಕಂಡುಬಂದ ಹಿನ್ನೆಲೆಯಲ್ಲಿ ನೋಟಿಸ್ ನೀಡಲಾಗಿದೆ.

ತಪಾಸಣೆ ವೇಳೆ ಕುಡಿಯುವ ನೀರು ಹಾಗೂ ಬಳಸಿದ ಅಡುಗೆ ಎಣ್ಣೆಯ ಮಾದರಿಗಳನ್ನು ಸಂಗ್ರಹಿಸಿ, ಹೆಚ್ಚಿನ ವಿಶ್ಲೇಷಣೆಗಾಗಿ ಸರ್ಕಾರಿ ಆಹಾರ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಪ್ರಯೋಗಾಲಯದ ವಿಶ್ಲೇಷಣಾ ವರದಿ ಬಂದ ಬಳಿಕ ಅದರ ಫಲಿತಾಂಶದ ಆಧಾರದ ಮೇಲೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ–2006 ಹಾಗೂ ನಿಯಮಗಳು–2011ರ ಅನ್ವಯ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

## ಶಾಶ್ವತ ಗಣೇಶ ವಿಸರ್ಜನೆ ಹೊಂಡ ನಿರ್ಮಾಣ: ಸ್ಥಳ ಪರಿಶೀಲಿಸಿ

ವಿಜಯ ದುಂಬಿ ಸುದ್ದಿ....

**ವಿಜಯಪುರ: ನಗರ ವ್ಯಾಪ್ತಿಯಲ್ಲಿ ದಿನದಿಂದ ದಿನಕ್ಕೆ ಬೆಳೆಯುತ್ತಿರುವ ಅಗತ್ಯಕ್ಕೆ ತಕ್ಕಂತೆ ಗಣೇಶ ಮೂರ್ತಿಗಳ ವಿಸರ್ಜನೆಗಾಗಿ ಶಾಶ್ವತ ಹೊಂಡ ನಿರ್ಮಿಸಲು ಸೂಕ್ತ ಜಾಗ ಗುರುತಿಸಿ, ಸ್ಥಳ ವೀಕ್ಷಣೆ ನಡೆಸಿ ಅಂತಿಮ ತೀರ್ಮಾನ ಕೈಗೊಳ್ಳಲು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.**



ಮಹಾನಗರ ಪಾಲಿಕೆಯ ಕೇಂದ್ರ ಕಚೇರಿಯಲ್ಲಿ 2026–27ನೇ ಸಾಲಿನ ಗಣೇಶೋತ್ಸವದ ಹಿನ್ನೆಲೆಯಲ್ಲಿ ಬುಧವಾರ ಆಯೋಜಿಸಲಾಗಿದ್ದ ನಗರದ ವಿವಿಧ ಗಜಾನನ ಮಹಾಮಂಡಳಿಗಳು, ಜನಪ್ರತಿನಿಧಿಗಳು ಹಾಗೂ ಸಂಘ–ಸಂಸ್ಥೆಗಳ ಪದಾಧಿಕಾರಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿಜಯಪುರ ನಗರದ ಐತಿಹಾಸಿಕ ಸ್ಮಾರಕವಾದ ತಾಸಬಾವಡಿಯನ್ನು ಪ್ರಸ್ತುತ ಟಾಟಾ ಕನ್ಸಲ್ಟನ್ಸಿ ಸರ್ವಿಸಸ್ ಸಂಸ್ಥೆಯು ಪುನರುಜ್ಜೀವನಗೊಳಿಸುತ್ತಿದೆ. ಈ ಹಿನ್ನೆಲೆಯಲ್ಲಿ ತಾಸಬಾವಡಿಯಲ್ಲಿ ವಿಸರ್ಜನಾ ಹೊಂಡ ನಿರ್ಮಿಸಿದರೆ ಸ್ಥಳಾವಕಾಶ ಕಡಿಮೆಯಾಗುವ ಸಾಧ್ಯತೆ ಇರುವುದರಿಂದ, ನಗರದ ಬೇರೆ ಬೇರೆ ಸೂಕ್ತ ಸ್ಥಳಗಳಲ್ಲಿ ಶಾಶ್ವತ ಹೊಂಡ ನಿರ್ಮಿಸುವ ಕುರಿತು ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಲಾಯಿತು. ಗಜಾನನ ಮಹಾಮಂಡಳದ ಪದಾಧಿಕಾರಿಗಳು ಹಾಗೂ ಅಧಿಕಾರಿಗಳ ಜಂಟಿ ತಂಡವು ಆಗಸ್ಟ್ 27 ರಂದು ನಗರದ ವಿವಿಧ ಜಾಗಗಳಿಗೆ ಭೇಟಿ ನೀಡಿ, ಸ್ಥಳ ವೀಕ್ಷಣೆ ನಡೆಸಲಿದೆ. ಸೂಕ್ತ ಸ್ಥಳವನ್ನು ಅಂತಿಮವಾಗಿ ಗುರುತಿಸಿದ ನಂತರ, ಈ ವಿ?ಯವನ್ನು ವಿಜಯಪುರ ಮಹಾನಗರ ಪಾಲಿಕೆಯ ಮುಂಬರುವ ಸಾಮಾನ್ಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು ಅಂತಿಮ ತೀರ್ಮಾನ ಕೈಗೊಳ್ಳಲು ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯ ಸಭೆ ತೀರ್ಮಾನಿಸಿತು. ಈ ಸಭೆಯಲ್ಲಿ ಮಾಜಿ ಸಚಿವರಾದ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಮಹಾನಗರ ಪಾಲಿಕೆ ಮೇಯರ್ ಎಂ. ಎಸ್. ಕರಡಿ, ಉಪ ಮೇಯರ್ ಶ್ರೀಮತಿ ಸುಮಿತ್ರಾ ಜಾಧವ್, ಜಿಲ್ಲಾ ಪೊಲೀಸ್ ವರಿ?ಾಧಿಕಾರಿ ಲಕ್ಷ್ಮಣ ನಿಂಬರಗಿ, ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ, ಪಾಲಿಕೆಯ ಎಲ್ಲಾ ಗೌರವಾನ್ವಿತ ಸದಸ್ಯರು ಹಾಗೂ ನಗರದ ಗಜಾನನ ಮಹಾಮಂಡಳದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಹಿಜಾಬ್ ಸಮಸ್ಯೆಯನ್ನು ರಾಜಕೀಯಕ್ಕೆ ಬಳಸಿಕೊಳ್ಳಬಾರದು : ಮಾಯಾವತಿ

ವಿಜಯ ದುಂಬಿ ಸುದ್ದಿ....

**ಲಕ್ನೋ: ಹಿಜಾಬ್ ವಿವಾದದ ನಡುವೆಯೇ, ಇಂತಹ ವಿಷಯಗಳನ್ನು ಸ್ಥಳೀಯ ಮಟ್ಟದಲ್ಲೇ ಪರಿಹರಿಸಿಕೊಳ್ಳಬೇಕು ಹಾಗೂ ಸಂಕುಚಿತ ರಾಜಕೀಯಕ್ಕೆ ಬಳಸಿಕೊಳ್ಳಬಾರದು ಎಂದು ಬಿಎಸ್‌ಪಿ ಮುಖ್ಯಸ್ಥೆ ಮಾಯಾವತಿ ಹೇಳಿದ್ದಾರೆ. ಡಾ. ಬಿ.ಆರ್. ಅಂಬೇಡ್ಕರ್ ನೇತೃತ್ವದಲ್ಲಿ ರಚಿಸಲಾದ ಸಂವಿಧಾನವು ಎಲ್ಲ ಧರ್ಮಗಳು ಮತ್ತು ಸಮುದಾಯಗಳಿಗೆ ಸೇರಿದ ಜನರಿಗೆ ಸಮಾನ ಹಕ್ಕುಗಳನ್ನು ಖಾತರಿಪಡಿಸುತ್ತದೆ ಎಂದು ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಹೇಳಿದ್ದಾರೆ.**



ಧಾರ್ಮಿಕ ಗ್ರಂಥಗಳು, ಆಚರಣೆಗಳು ಮತ್ತು ನಂಬಿಕೆಗಳಿಗೆ ಅನುಗುಣವಾಗಿ ಶಾಂತಿಯುತ ಹಾಗೂ ಸಂತೋಷದ ಜೀವನ ನಡೆಸುವ ಹಕ್ಕು ಪ್ರತಿಯೊಬ್ಬರಿಗೂ ಇದೆ. ಆದ್ದರಿಂದ ಎಲ್ಲರೂ ಧಾರ್ಮಿಕ ನಂಬಿಕೆಗಳು ಮತ್ತು ಆಚರಣೆಗಳ ಪಾವಿತ್ರ್ಯವನ್ನು ಗೌರವಿಸಬೇಕು ಎಂದು ಅವರು ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಶಾಲೆಗಳಲ್ಲಿ ಹಿಜಾಬ್ ಧರಿಸುವ ವಿಚಾರವಾಗಿ ಪ್ರತಿಕ್ರಿಯಿಸಿದ ಮಾಯಾವತಿ, ಇಂತಹ ವಿಷಯಗಳಿಗೆ ಅನಗತ್ಯ ಪ್ರಾಮುಖ್ಯತೆ ನೀಡುವ ಬದಲು ಶಾಲಾ ಆಡಳಿತ ಮಂಡಳಿ, ಸರ್ಕಾರ ಮತ್ತು ಆಡಳಿತದ ನಡುವಿನ ಪರಸ್ಪರ ತಿಳುವಳಿಕೆ ಹಾಗೂ ವಿವೇಚನೆಯ ಮೂಲಕ ಸ್ಥಳೀಯ ಮಟ್ಟದಲ್ಲೇ ಪರಿಹರಿಸಬೇಕು ಎಂದು ಹೇಳಿದ್ದಾರೆ.

ಇಂತಹ ವಿವಾದಗಳನ್ನು ನ್ಯಾಯಾಲಯಗಳಲ್ಲಿ ಕಾನೂನು ಸಂಘರ್ಷಗಳಾಗಿ ಪರಿವರ್ತಿಸುವುದರಿಂದ ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳಬಹುದು. ಇಂತಹ ವಿವಾದಗಳ ನೆಪದಲ್ಲಿ ಯಾರಿಗೂ ಸಂಕುಚಿತ ರಾಜಕೀಯ ನಡೆಸಲು ಅವಕಾಶ ಸಿಗದಂತೆ ನೋಡಿಕೊಳ್ಳಬೇಕು ಎಂದು ಅವರು ಹೇಳಿದರು. ಬಿಎಸ್‌ಪಿ ಅಂಬೇಡ್ಕರ್‌ವಾದಿ ಪಕ್ಷವಾಗಿದ್ದು, ಸಮಾಜದ ಎಲ್ಲ ವರ್ಗಗಳಿಗೂ ಗೌರವ, ಅವರ ಜೀವನ, ಆಸ್ತಿ ಮತ್ತು ಧರ್ಮದ ಸುರಕ್ಷತೆಯನ್ನು ಖಾತರಿಪಡಿಸುವ ಬದ್ಧತೆ ಹೊಂದಿದೆ ಎಂದು ಮಾಯಾವತಿ ಹೇಳಿದ್ದಾರೆ.

ಯಾವುದೇ ಧರ್ಮ, ಧಾರ್ಮಿಕ ಗ್ರಂಥ ಅಥವಾ ನಂಬಿಕೆಗಳಿಗೆ ಸಂಬಂಧಿಸಿದ ಸೂಕ್ಷ್ಮ ವಿಷಯಗಳ ಕುರಿತು ಜನರು ಪ್ರಚೋದನಾತ್ಮಕವಾಗಿ ಪ್ರತಿಕ್ರಿಯಿಸುವುದನ್ನು ತಪ್ಪಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ. ಪ್ರಯಾಗ್‌ರಾಜ್‌ನ ಖಾಸಗಿ ಶಾಲೆಯೊಂದರ ಅಪ್ರಾಪ್ತ ವಿದ್ಯಾರ್ಥಿನಿಯೊಬ್ಬಳು ಶಾಲಾ ಸಮವಸ್ತ್ರದೊಂದಿಗೆ ಹಿಜಾಬ್ ಧರಿಸಲು ಅನುಮತಿ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಅಲಹಾಬಾದ್ ಹೈಕೋರ್ಟ್ ವಜಾಗೊಳಿಸಿದ ಕೆಲವೇ ದಿನಗಳ ಬಳಿಕ ಮಾಯಾವತಿ ಈ ಹೇಳಿಕೆ ನೀಡಿದ್ದಾರೆ.

# ನ್ಯೂಯಾರ್ಕ್‌ನಲ್ಲಿ ಆರ್‌ಎಸ್‌ಎಸ್ ಕಾರ್ಯಕ್ರಮಕ್ಕೆ ಬೆಂಬಲವಿಲ್ಲ :ಮೇಯರ್ ಜೋಹ್ರಾನ್ ಮಮ್ದಾನಿ





ವಿಜಯ ದುಂಬಿ ಸುದ್ದಿ....

**ನ್ಯೂಯಾರ್ಕ್: ನ್ಯೂಯಾರ್ಕ್ ನಗರದ ಮೇಯರ್ ಜೋಹ್ರಾನ್ ಮಮ್ದಾನಿ ಅವರು ಮ್ಯಾಡಿಸನ್ ಸ್ಕ್ವೇರ್ ಗಾರ್ಡನ್‌ನಲ್ಲಿ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಭಾರತೀಯ ವಲಸಿಗರನ್ನು ಉದ್ದೇಶಿಸಿ ಮಾತನಾಡಲಿರುವ ಕಾರ್ಯಕ್ರಮಕ್ಕೆ ತಾವು ಬೆಂಬಲ ನೀಡುವುದಿಲ್ಲ ಎಂದು ಹೇಳಿದ್ದಾರೆ.**

ಆದರೆ, ಆಗಸ್ಟ್ 29ರಂದು ನಿಗದಿಯಾಗಿರುವ ಖಾಸಗಿ ಕಾರ್ಯಕ್ರಮವನ್ನು ರದ್ದುಗೊಳಿಸುವ ಅಧಿಕಾರ ನಗರಾಡಳಿತಕ್ಕೆ ಇದೆಯೇ ಎಂಬುದು ಸ್ಪಷ್ಟವಿಲ್ಲ ಎಂದು ಅವರು ತಿಳಿಸಿದ್ದಾರೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ ಶತಮಾನೋತ್ಸವ ವರ್ಷದ ಜಾಗತಿಕ ಸಂಪರ್ಕ ಕಾರ್ಯಕ್ರಮದ ಭಾಗವಾಗಿ ಮೋಹನ್ ಭಾಗವತ್ ಅಮೆರಿಕಕ್ಕೆ ಆಗಮಿಸಿದ್ದಾರೆ. ನ್ಯೂಯಾರ್ಕ್ ವಾಸ್ತವ್ಯದ ವೇಳೆ ಅವರು 'ಯುನಿವರ್ಸಲ್ ಒನ್‌ನೆಸ್ ಸೆಲೆಬ್ರೇಷನ್' ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಶನಿವಾರ ಮ್ಯಾಡಿಸನ್ ಸ್ಕ್ವೇರ್ ಗಾರ್ಡನ್‌ನಲ್ಲಿ ಸುಮಾರು 5,000 ಜನರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

"ನಾನು ಈ ರ್ಯಾಲಿಯನ್ನು ಬೆಂಬಲಿಸುವುದಿಲ್ಲ. ಆದರೆ ಖಾಸಗಿ ಕಾರ್ಯಕ್ರಮವನ್ನು ರದ್ದುಗೊಳಿಸುವ ಅಧಿಕಾರ ನಗರಕ್ಕೆ ಇದೆಯೇ ಎಂಬುದು ನನಗೆ ತಿಳಿದಿಲ್ಲ" ಎಂದು ಮಮ್ದಾನಿ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದಾರೆ. ಮ್ಯಾಡಿಸನ್ ಸ್ಕ್ವೇರ್ ಗಾರ್ಡನ್‌ನಲ್ಲಿ ನಡೆಯಲಿರುವ ಕಾರ್ಯಕ್ರಮ ಹಾಗೂ ಅದರ ವಿರುದ್ಧ ನಡೆಯುತ್ತಿರುವ ಪ್ರತಿಭಟನೆಗಳ ಕುರಿತು ಪ್ರಶ್ನೆಗೆ ಉತ್ತರಿಸಿದ ಅವರು, "ನಮ್ಮ ನಗರದ ಇತಿಹಾಸದಲ್ಲಿ ನಾನು ಮೊದಲ ಭಾರತೀಯ–ಅಮೆರಿಕನ್ ಮೇಯರ್ ಆಗಿ ಇಲ್ಲಿ ನಿಂತಿದ್ದೇನೆ. ನನ್ನ ತಾಯಿಯ ಕುಟುಂಬ ಇನ್ನೂ ಭಾರತದಲ್ಲಿದೆ" ಎಂದು ಹೇಳಿದರು. ತಮ್ಮ ಕುಟುಂಬದಿಂದ ಕಲಿತ ಭಾರತದ ಕಲ್ಪನೆಯು ಬಹುತ್ವವಾದಿ ಸಮಾಜ ಮತ್ತು ಭಾರತದಿಂದ ಬಂದ ಪ್ರತಿಯೊಬ್ಬರ ಹಕ್ಕುಗಳನ್ನು ಗೌರವಿಸುವ ಜಾತ್ಯತೀತ ಗಣರಾಜ್ಯವಾಗಿದೆ ಎಂದು ಮಮ್ದಾನಿ ಹೇಳಿದರು.

ಯಾವುದೇ ದೇಶದ ಜನರನ್ನು ಹೊರಗಿಡುವ ದೃಷ್ಟಿಕೋನವನ್ನು ಆಧರಿಸಿದ ಚಳವಳಿಯ ಉದಯವನ್ನು ನೋಡುವುದು ಅತ್ಯಂತ ತೊಂದರೆದಾಯಕವಾಗಿದೆ. ಆದ್ದರಿಂದ ಭಾರತೀಯ–ಅಮೆರಿಕನ್ ಆಗಿ ಮಾತ್ರವಲ್ಲದೆ, ಪ್ರತಿಯೊಬ್ಬ ವ್ಯಕ್ತಿಯ ಬಣ್ಣ, ಧರ್ಮ, ನಂಬಿಕೆ ಮತ್ತು ಅವರು ಎಲ್ಲಿಂದ ಬಂದಿದ್ದಾರೆ ಎಂಬುದನ್ನು ಲೆಕ್ಕಿಸದೆ ಅವರ ಹಕ್ಕುಗಳನ್ನು ಗೌರವಿಸುವ ನಗರದ ಮೇಯರ್ ಆಗಿಯೂ ನಾನು ಇದನ್ನು ತೀವ್ರವಾಗಿ ವಿರೋಧಿಸುತ್ತೇನೆ" ಎಂದು ಅವರು ಹೇಳಿದರು. ಇದೇ ವೇಳೆ ನ್ಯೂಯಾರ್ಕ್ ಸಿಟಿ ಹಾಲ್ ಹೊರಗೆ ಹಲವು ಅಂತರ್ಧರ್ಮೀಯ ಹಾಗೂ ನಾಗರಿಕ ಹಕ್ಕುಗಳ ಸಂಘಟನೆಗಳು ಪತ್ರಿಕಾಗೋಷ್ಠಿ ನಡೆಸಿ, ಭಾಗವತ್ ಅವರು ಕಾರ್ಯಕ್ರಮದಲ್ಲಿ ಭಾಗವಹಿಸುವುದನ್ನು ವಿರೋಧಿಸಿವೆ.

ಮ್ಯಾಡಿಸನ್ ಸ್ಕ್ವೇರ್ ಗಾರ್ಡನ್‌ನಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ರದ್ದುಗೊಳಿಸುವಂತೆ ಸಂಘಟನೆಗಳು ಒತ್ತಾಯಿಸಿವೆ. ಹಿಂದೂಸ್ ಫಾರ್ ಹ್ಯೂಮನ್ ರೈಟ್ಸ್, ಇಂಡಿಯನ್ ಅಮೆರಿಕನ್ ಮುಸ್ಲಿಂ ಕೌನ್ಸಿಲ್ ಮತ್ತು ಇಂಟರ್‌ಫೇಯ್ತ್ ಸೆಂಟರ್ ಆಫ್ ನ್ಯೂಯಾರ್ಕ್ ಸೇರಿದಂತೆ ಹಲವು ಸಂಘಟನೆಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದವು. ಭಾಗವತ್ ಅವರನ್ನು ಆಯೋಜಿಸಿರುವ ವೇದಿಕೆ 'ಯುನಿವರ್ಸಲ್ ಒನ್‌ನೆಸ್ ಸೆಲೆಬ್ರೇಷನ್' ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರಕಟಣೆ ಹೊರಡಿಸಿದ್ದು, ಆರ್‌ಎಸ್‌ಎಸ್ ಮುಖ್ಯಸ್ಥರು ಆಗಸ್ಟ್ 29ರಂದು ನ್ಯೂಯಾರ್ಕ್‌ನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದೆ.

# ಸಚಿವ ನಾಗೇಂದ್ರ ರಾಜೀನಾಮೆ ವದಂತಿ; ರಾಜ್ಯ ರಾಜಕೀಯದಲ್ಲಿ ಸಂಚಲನ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರು ರಾಜೀನಾಮೆ ನೀಡಲು ಮುಂದಾಗಿದ್ದಾರೆ ಎಂಬ ವದಂತಿ ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿದೆ. ಆದರೆ, ಈ ವದಂತಿಯನ್ನು ಸಚಿವ ನಾಗೇಂದ್ರ ಅವರ ಕಚೇರಿ ಸ್ಪಷ್ಟವಾಗಿ ತಳ್ಳಿಹಾಕಿದ್ದು, ರಾಜೀನಾಮೆ ನೀಡುವ ಯಾವುದೇ ಪ್ರಸ್ತಾಪವಿಲ್ಲ ಎಂದು ತಿಳಿಸಿದೆ. ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ನಾಗೇಂದ್ರ ಅವರ ವಿರುದ್ಧ ಗಂಭೀರ ಆರೋಪಗಳು ಕೇಳಿಬಂದಿದ್ದವು.**



ರಾಜ್ಯ ಸರ್ಕಾರದ ಸಿಐಡಿ ಹಾಗೂ ಲೋಕಾಯುಕ್ತದ ವಿಶೇಷ ತನಿಖಾ ತಂಡ ನಡೆಸಿದ ತನಿಖೆಯಲ್ಲಿ ನಾಗೇಂದ್ರ ಅವರು ನೇರವಾಗಿ ತಪ್ಪಿತಸ್ಥರಲ್ಲ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ಆದರೆ, ಕೇಂದ್ರ ತನಿಖಾ ಸಂಸ್ಥೆಗಳಾದ ಸಿಬಿಐ ಮತ್ತು ಜಾರಿ ನಿರ್ದೇಶನಾಲಯ (ಇ.ಡಿ.) ತನಿಖೆಯಲ್ಲಿ ನಾಗೇಂದ್ರ ಅವರ ಪಾತ್ರದ ಕುರಿತು ಗಂಭೀರ ಅನುಮಾನಗಳು ವ್ಯಕ್ತವಾಗಿವೆ ಎಂದು ವರದಿಯಾಗಿದೆ. ಹಗರಣ ಬೆಳಕಿಗೆ ಬಂದ ಸಂದರ್ಭದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ, ಯುವಜನ ಸೇವೆ ಹಾಗೂ ಕ್ರೀಡಾ ಇಲಾಖೆ ಸಚಿವರಾಗಿದ್ದ ಬಿ. ನಾಗೇಂದ್ರ ಅವರು ಪಕ್ಷಕ್ಕೆ ಮುಜುಗರವಾಗಬಾರದು ಎಂಬ ಕಾರಣಕ್ಕೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಬಳಿಕ ಅವರ ರಾಜೀನಾಮೆ ಅಂಗೀಕಾರಗೊಂಡಿತ್ತು. ಇತ್ತೀಚೆಗೆ ನಡೆದ ಸಂಪುಟ ಪುನರ್‌ರಚನೆ ವೇಳೆ ತಾವು ನಿರ್ದೋಷಿ ಎಂಬುದನ್ನು ಪ್ರತಿಪಾದಿಸಿದ್ದ ನಾಗೇಂದ್ರ, ಮತ್ತೆ ಸಚಿವರಾಗಿ ಅವಕಾಶ ನೀಡಬೇಕು ಎಂದು ಪಕ್ಷದ ವರಿಷ್ಠರ ಮುಂದೆ ಒತ್ತಾಯಿಸಿದ್ದರು ಎನ್ನಲಾಗಿದೆ.

ಇದನ್ನು ಬಿಜೆಪಿ ವಿಭಿನ್ನವಾಗಿ ವ್ಯಾಖ್ಯಾನಿಸಿತ್ತು. ಸಚಿವ ಸ್ಥಾನ ನೀಡದಿದ್ದರೆ ಹಗರಣದಲ್ಲಿ ಪ್ರಮುಖ ನಾಯಕರ ಹೆಸರುಗಳನ್ನು ಬಹಿರಂಗಪಡಿಸುವುದಾಗಿ ನಾಗೇಂದ್ರ ಕಾಂಗ್ರೆಸ್ ನಾಯಕರ ಮೇಲೆ ಒತ್ತಡ ಹೇರಿದ್ದರು ಎಂಬ ಆರೋಪವನ್ನು ಬಿಜೆಪಿ ಮಾಡಿತ್ತು. ಇದೇ ವಿಚಾರವಾಗಿ ವಿಧಾನಮಂಡಲದ ಅಧಿವೇಶನದಲ್ಲೂ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ಸರ್ಕಾರದ ವಿರುದ್ಧ ತೀವ್ರ ಪ್ರತಿಭಟನೆ ನಡೆಸಿದ್ದರು. ನಾಗೇಂದ್ರ ಅವರನ್ನು ಮತ್ತೆ ಸಂಪುಟಕ್ಕೆ ಸೇರಿಸಿಕೊಂಡಿರುವುದರ ಹಿಂದೆ ದೊಡ್ಡ ಮಟ್ಟದ ಹಣಕಾಸಿನ ವ್ಯವಹಾರ ನಡೆದಿದೆ ಎಂಬ ಆರೋಪಗಳನ್ನೂ ಪ್ರತಿಪಕ್ಷಗಳು ಮಾಡಿದ್ದವು. ಮಳೆಗಾಲದ ವಿಧಾನಮಂಡಲ ಅಧಿವೇಶನದ ವೇಳೆ ನಾಗೇಂದ್ರ ಅವರ ವಿಚಾರವೇ ಪ್ರಮುಖವಾಗಿ ಚರ್ಚೆಯಾಗಿದ್ದು, ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ತೀವ್ರ ವಾಗ್ವಾದಕ್ಕೆ ಕಾರಣವಾಗಿತ್ತು. ಈ ವೇಳೆ ನಾಗೇಂದ್ರ ಅವರು, "ನಾನು ನಿರಪರಾಧಿ. ದಲಿತ ಎಂಬ ಕಾರಣಕ್ಕೆ ಬಿಜೆಪಿ ಮತ್ತು ಜೆಡಿಎಸ್ ನನ್ನನ್ನು ಗುರಿಯಾಗಿಸಿಕೊಂಡಿವೆ" ಎಂದು ಆರೋಪಿಸಿದ್ದರು.

ಈ ನಡುವೆ, ಸಿಬಿಐ ಮನವಿ ಆಧರಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ನಾಗೇಂದ್ರ ವಿರುದ್ಧ ಅಭಿಯೋಜನೆಗೆ ಅನುಮತಿ ನೀಡುವ ಕುರಿತು ರಾಜ್ಯ ಸರ್ಕಾರದ ಅಭಿಪ್ರಾಯ ಕೇಳಿದ್ದರು. ಇದೇ ವೇಳೆ ಬಿಜೆಪಿ ರಾಯಚೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ ನಡೆಸಿ ನಾಗೇಂದ್ರ ಅವರ ರಾಜೀನಾಮೆಗೆ ಒತ್ತಡ ಹೆಚ್ಚಿಸಲು ಮುಂದಾಗಿತ್ತು. ರಾಜೀನಾಮೆ ವದಂತಿಗೆ ಕಾರಣವಾದ ಕರೆ ಇದರ ಮಧ್ಯೆ, ನಾಗೇಂದ್ರ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮಂಗಳವಾರ ಕರೆ ಮಾಡಿ, "ನನ್ನಿಂದಾಗಿ ಪಕ್ಷಕ್ಕೆ ಮುಜುಗರವಾಗುವುದು ಬೇಡ. ನಾನು ರಾಜೀನಾಮೆ ನೀಡುತ್ತೇನೆ" ಎಂದು ಹೇಳಿದ್ದಾರೆ ಎಂಬ ಸುದ್ದಿ ಹರಡಿತ್ತು. ಈ ಬಗ್ಗೆ ನಾಗೇಂದ್ರ ಅವರಿಗೆ ಡಿ.ಕೆ. ಶಿವಕುಮಾರ್ ಪ್ರತಿಕ್ರಿಯಿಸಿ, ಹೈಕಮಾಂಡ್ ನಾಯಕರೊಂದಿಗೆ ಚರ್ಚಿಸಿ ನಿರ್ಧಾರ ತಿಳಿಸುವುದಾಗಿ ಹೇಳಿದ್ದಾರೆ ಎಂಬ ವರದಿಗಳೂ ಬಂದಿದ್ದವು.

ಆದರೆ ಕೆಲವೇ ಕ್ಷಣಗಳಲ್ಲಿ ನಾಗೇಂದ್ರ ಅವರ ಕಚೇರಿ ಈ ಸುದ್ದಿಯನ್ನು ಸಂಪೂರ್ಣವಾಗಿ ನಿರಾಕರಿಸಿತು. ಮುಖ್ಯಮಂತ್ರಿಯವರಿಂದ ರಾಜೀನಾಮೆ ವಿಚಾರವಾಗಿ ಯಾವುದೇ ಕರೆ ಬಂದಿಲ್ಲ. ರಾಜೀನಾಮೆಯ ಪ್ರಸ್ತಾಪವೂ ಇಲ್ಲ. ಅನಗತ್ಯ ವದಂತಿಗಳಿಗೆ ಕಿವಿಗೊಡಬೇಡಿ ಎಂದು ಸ್ಪಷ್ಟಪಡಿಸಿತು. ಮೂಲಗಳ ಪ್ರಕಾರ, ನಾಗೇಂದ್ರ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಕರೆ ಮಾಡಿರುವುದು ನಿಜ. ಆದರೆ ರಾಜೀನಾಮೆ ಕುರಿತು ಚರ್ಚಿಸಲು ಅಲ್ಲ. ಬಳ್ಳಾರಿಯಲ್ಲಿ ನಡೆದ ಪ್ರಮುಖ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕಾರಣ ಮುಖ್ಯಮಂತ್ರಿ ನೇತೃತ್ವದ ಸಭೆಗೆ ಹಾಜರಾಗಲು ಸಾಧ್ಯವಾಗುತ್ತಿಲ್ಲ ಎಂಬ ಮಾಹಿತಿಯನ್ನು ನೀಡಲು ಕರೆ ಮಾಡಿದ್ದರು ಎನ್ನಲಾಗಿದೆ.

ಬಳ್ಳಾರಿಯಲ್ಲಿ ನಡೆದ ಉದ್ಯಮದ ಉದ್ಘಾಟನಾ ಕಾರ್ಯಕ್ರಮದಲ್ಲಿ ಆಂಧ್ರಪ್ರದೇಶ ಮುಖ್ಯಮಂತ್ರಿ ಅವರ ಪುತ್ರ ಅತಿಥಿಯಾಗಿ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ನಾಗೇಂದ್ರ ಕೂಡ ಉಪಸ್ಥಿತರಿದ್ದರು. ಇದೇ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜ್ಯದ 27 ಜಿಲ್ಲೆಗಳ ಆಡಳಿತ ಪಕ್ಷದ ಶಾಸಕರು ಹಾಗೂ ಸಚಿವರೊಂದಿಗೆ ಮುಖ್ಯಮಂತ್ರಿಯವರ ಗೃಹ ಕಚೇರಿ ಕೃಷ್ಣಾದಲ್ಲಿ ಸಭೆ ನಡೆಸಿದ್ದರು. ಈ ಸಭೆಗೆ ಹಾಜರಾಗಲು ಸಾಧ್ಯವಾಗದಿರುವ ಬಗ್ಗೆ ನಾಗೇಂದ್ರ ಅವರು ಮುಖ್ಯಮಂತ್ರಿಗೆ ಮಾಹಿತಿ ನೀಡಿದ್ದರು ಎನ್ನಲಾಗಿದೆ. ಈ ಸಾಮಾನ್ಯ ದೂರವಾಣಿ ಕರೆಯನ್ನು ನಾಗೇಂದ್ರ ಅವರು ರಾಜೀನಾಮೆ ನೀಡಲು ಮುಂದಾಗಿದ್ದಾರೆ ಎಂಬ ವದಂತಿಯಾಗಿ ಬಿಂಬಿಸಲಾಗಿದೆ ಎಂಬ ಆಕ್ಷೇಪವನ್ನು ಸಚಿವರ ಕಚೇರಿ ವ್ಯಕ್ತಪಡಿಸಿದೆ. ವದಂತಿಗಳ ಮೂಲಕ ಪಕ್ಷದ ವರ್ಚಸ್ಸಿಗೆ ಧಕ್ಕೆ ತರುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂಬ ವಿಚಾರವಾಗಿಯೂ ನಾಗೇಂದ್ರ ಅವರು ಮುಖ್ಯಮಂತ್ರಿ ಜೊತೆ ಚರ್ಚಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಶಾಸಕ ಸುಬ್ಬಾರೆಡ್ಡಿ ರವರ ಸಮಾಜ ಸೇವೆ ಶ್ಲಾಘನೀಯ : ಡಿ ಕೆ ಸುರೇಶ್

ವಿಜಯ ದುಂಬಿ ಸುದ್ದಿ....

**ಬಾಗೇಪಲ್ಲಿ: ವಿಧಾನಸಭಾ ಕ್ಷೇತ್ರದ ಹೆಣ್ಣು ಮಕ್ಕಳಿಗೆ ಕಲ್ಯಾಣ ಕಾರ್ಯದ ಜತೆಗೆ ನವ ಜೋಡಿಗಳಿಗೆ ಗೋಮಾತೆಯನ್ನು ಧಾನ ಮಾಡುವುದರ ಮೂಲಕ ಬಡವರ ಬದುಕಿಗೆ ಆಸರೆಯಾಗಿ ನಿಂತಿ-ದ್ದಾರೆಂದು ಬಮುಲ್ ಅಧ್ಯಕ್ಷ ಡಿ.ಕೆ.ಸುರೇಶ್ ಶಾಸಕ ಸುಬ್ಬಾರೆಡ್ಡಿರವರ ಸಮಾಜ ಸೇವೆಯನ್ನು ಶ್ಲಾಘೀಸಿದರು.**



ಬಾಗೇಪಲ್ಲಿ ತಾಲೂಕಿನ ಗಡಿದಂ ಶ್ರೀ ಕ್ಷೇತ್ರ ಲಕ್ಷ್ಮೀ ವೆಂಕಟರಮಣಸ್ವಾಮಿ ಸನ್ನಿಧಾನದಲ್ಲಿ ಎಸ್.ಎನ್.ಸುಬ್ಬಾರೆಡ್ಡಿ ಚಾರಿಟಬಲ್ ಟ್ರಸ್ಟ್ವತಿಯಿಂದ ಅಯೋಜಿಸಿದ್ದ ಶ್ರೀ ಶ್ರೀನಿವಾಸ ಕಲ್ಯಾಣೋತ್ಸವ ಹಾಗೂ 23 ನೇ ವರ್ಷದ ಉಚಿತ ಸಾಮೂಹಿಕ ವಿವಾಹಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಸಮಾಜ ಸೇವೆಯಲ್ಲಿದ್ದ ಶಾಸಕ ಸುಬ್ಬಾರೆಡ್ಡಿ ರಾಜಕಾರಣಕ್ಕೆ ಬರುವ ನಿರೀಕ್ಷೆಯಲ್ಲಿ ಇರಲಿಲ್ಲ ಆದರೆ ಅನಿವಾರ್ಯ ಪರಿಸ್ಥಿತಿಯಲ್ಲಿ ರಾಜಕೀಯ ಪ್ರವೇಶ ಮಾಡಿ ಬಾಗೇಪಲ್ಲಿ ಕ್ಷೇತ್ರದಿಂದ ಸತತವಾಗಿ ಮೂರು ಬಾರಿ ಶಾಸಕರಾಗಿ ಜನಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ.

ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳು ಎರಡು ಕೆಲ ವರ್ಷಗಳ ಹಿಂದೆ ಬರದ ನಾಡು ಎಂಬ ಖ್ಯಾತಿ ಪಡೆದುಕೊಂಡಿತ್ತು, ಆದರೇ ಇಂದು ಎರಡು ಜಿಲ್ಲೆಗಳು ಅಭಿವೃದ್ದಿಯ ಹೆಬ್ಬಾಗಿಲು ಆಗಿ ಈ ಭಾಗದ ಕೆರೆ, ಕುಂಟೆಗಳಿಗೆ ಹೆಚ್.ಎನ್ ವ್ಯಾಲಿ ನೀರನ್ನು ಹರಿಸಿ ನೀರಾವರಿ ಯೋಜನೆಗಳನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡಿ ಯುವ ಜನತೆಗೆ ಉದ್ಯೋಗವಕಾಶ ಕಲ್ಪಿಸುವ ಯೋಜನೆ ಕು-ರಿತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಈಗಾಗಲೇ ಜಿಲ್ಲೆಯ ಶಾಸಕರ ಜತೆ ಚರ್ಚಿಸಿದ್ದು ಶೀಘ್ರವೇ ಕೈಗಾ-ರಿಕೆಗಳ ಸ್ಥಾಪನೆ ಆಗಿ ನಿರುದ್ಯೋಗ ಸಮಸ್ಯೆಗೆ ಪರಿಹಾರ ಸಿಗಲಿದ್ದು ಬಾಗೇಪಲ್ಲಿ ತಾಲೂಕಿನ ಅಭಿವೃದ್ದಿಗೆ ಹೆಚ್ಚು ಒತ್ತು ನೀಡುವ ನಿಟ್ಟಿನಲ್ಲಿ ಶ್ರಮಿಸುತ್ತಿರುವ ಶಾಸಕ ಸುಬ್ಬಾರೆಡ್ಡಿಗೆ ಜನರ ಅರ್ಶೀವಾದ ಸಿಗಲಿ ಎಂದರು.

ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಮಾತನಾಡಿ, ನಾನು ರಾಜಕೀಯಕ್ಕೆ ಬಂದು 15 ವರ್ಷಗಳು ಮಾತ್ರ ಆಗಿದೆ ಆದರೇ ರಾಜಕೀಯ ಪ್ರವೇಶಕ್ಕೂ ಮುನ್ನವೇ ಉಚಿತ ಸಾಮೂಹಿಕ ವಿವಾಹಗಳನ್ನು ಮಾಡಿಕೊಂಡು ಬಂದಿದ್ದು ಸತತ 23 ವರ್ಷಗಳಿಂದ ಬಡವರ ಸೇವೆ ಮಾಡುವ ಮೂಲಕ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದೇನೆ, ನನ್ನ ಸಮಾಜ ಸೇವೆ ರಾಜಕೀಯ ಉದ್ದೇಶಕ್ಕಾಗಿ ಮಾಡುತ್ತಿಲ್ಲ. ಕ್ಷೇತ್ರದ ಹಲವು ಬಡ ಕುಟುಂಬಗಳು ಹೆಣ್ಣು ಮಕ್ಕಳ ಮದುವೆಗಾಗಿ ಸಾಲ ಮಾಡಿ ಸಾಲ ತೀರಿಸಲು ಸಾಧ್ಯವಾದೆ ನೋವು ಅನುಭವಿಸುತ್ತಿದ್ದಾರೆ, ಆದ್ದೂರಿ ಮದುವೆ ಮಾಡುತ್ತಿರುವ ಬಡವರು ಸಾಲದ ಸುಳಿಗೆ ಸಿಲುಕಬಾರದು ಎಂಬ ಕಾರಣಕ್ಕಾಗಿ ಸುಬ್ಬಾರೆಡ್ಡಿ ಚಾರಿಟಬಲ್ ಟ್ರಸ್ಟ್ ಮೂಲಕ ಉಚಿತ ಸಮೂಹಿಕ ವಿವಾಹಗಳನ್ನು ವಿಜೃಂಭಣೆಯಿಂದ ನೇರವೇರಿಸಿ, ನವ ವಧು, ವರರ ದಾಂಪತ್ಯ ಜೀವನಕ್ಕೆ ಆಸರೆ ಆಗಲಿ ಎಂಬ ಸದುದ್ದೇಶದಿಂದ ಒಂದು ಜೋಡಿಗೆ ಒಂದು ಸೀಮೆ ಹಸುವನ್ನು ಸಹ ಕೊಡುಗೆಯಾಗಿ ನೀಡುತ್ತಿದ್ದೇವೆ.

ಉಚಿತ ಸಾಮೂಹಿಕ ವಿವಾಹಗಳಲ್ಲಿ ಮದುವೆ ಮಾಡಿಕೊಳ್ಳುವ ಎಸ್ಸಿ, ಎಸ್ಟಿ ಜನಾಂಗದ ಜೋಡಿಗಳಿಗೆ ಸರ್ಕಾರದವತಿಯಿಂದ 50 ಸಾವಿರ ರೂ ಸಹಾಯಧನ ಕೊಡಿಸುವ ವಿಶೇಷ ಯೋಜನೆಯ ಸೌಲಭ್ಯವನ್ನು ನೀಡುತ್ತಿದ್ದೇವೆ ಎಂದರು. ಎಸ್.ಎನ್.ಸುಬ್ಬಾರೆಡ್ಡಿ ಚಾರಿಟಬಲ್ ಟ್ರಸ್ಟ್ನ 23 ನೇ ವರ್ಷದ ಉಚಿತ ಸಾಮೂಹಿಕ ವಿವಾಹಗಳ ವೇದಿಕೆಯಲ್ಲಿ 103 ಜೋಡಿಗಳು ಹೊಸ ದಾಂಪತ್ಯ ಜೀವನಕ್ಕೆ ಕಾಲಿಟ್ಟದ್ದು, ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಮತ್ತು ಪತ್ನಿ ಶೀಲಾ ನವ ವಧು, ವರರಿಗೆ ತಾಳಿ ಮತ್ತು ಸೀಮೆ ಹಸುವನ್ನು ಕೊಡುಗೆಯಾಗಿ ನೀಡಿ ಆರ್ಶೀವಧಿಸಿದರು. ಉಚಿತ ವಿವಾಹಗಳ ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಾರ್ವಜನಿಕರಿಗೆ ಊಟದ ವ್ಯವಸ್ಥೆಯ ಜತೆಗೆ ಟಿಟಿಡಿಯ ಲಡ್ಡು ಪ್ರಸಾದವನ್ನು ವಿತರಿಸಿದರು. ಈ ಕಾರ್ಯಕ್ರಮದಲ್ಲಿ ಅಧಿಚುಂಚನಗಿರಿ ಚಿಕ್ಕಬಳ್ಳಾಪುರ ಶಾಖಾ ಮಠಾಧೀಶ ಮಂಗಳಾನಂದನಾಥ ಸ್ವಾಮೀಜೀ, ಸಚಿವ ಕೆ.ಹೆಚ್.ಮುನಿಯಪ್ಪ, ಕರ್ನಾಟಕ ರಾಜ್ಯ ಉಗ್ರಾಣ ನಿಗಮ ಅಧ್ಯಕ್ಷ ಎನ್.ಸಂಪಂಗಿ, ಶಾಸಕ ಎಸ್.ಎನ್.ನಾರಾಯಣಸ್ವಾಮಿ, ಮಾಜಿ ಸಚಿವ ಎನ್.ಹೆಚ್.ಶಿವಶಂಕರರೆಡ್ಡಿ, ಜಿಲ್ಲಾಧಿಕಾರಿ ಜಿ.ಪ್ರಭು, ಎಸಿ ಅಶ್ವಿನ್ ಕುಮಾರ್, ತಹಶೀಲ್ದಾರ್‌ಗಳಾದ ಸಿಗ್ಬತ್‌ವುಲ್ಲಾ, ಮನೀಷಾಪತ್ರಿ, ಬಿ.ಕೆ.ಶ್ವೇತ, ಕಾಂಗ್ರೆಸ್ ಮುಖಂಡರಾದ ಶಿಡ್ಲಘಟ್ಟ ರಾಜೀವ್‌ಗೌಡ, ಅಮರನಾಥರೆಡ್ಡಿ, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೆ.ಎನ್.ಕೇಶವರೆಡ್ಡಿ ಮತ್ತಿತರರು ಇದ್ದರು.

## ಹೊಟೇಲ್ ಇ-ಕಾಮರ್ಸ್ ನಕಲಿ ಔಷಧ ಜಾಲದ ವಿರುದ್ಧ ಕಠಿಣ ಕ್ರಮ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ರಾಜ್ಯದಲ್ಲಿ ಸಾರ್ವಜನಿಕ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಆಹಾರ ಸುರಕ್ಷತಾ ಇಲಾಖೆ ಸಮರೋಪಾದಿ ಕಾರ್ಯಾಚರಣೆ ಆರಂಭಿಸಿದ್ದು, ಕಟ್ಟುನಿಟ್ಟಿನ ನಿಯಮಗಳನ್ನು ಜಾ-ರಿಗೆ ತರಲು ಮುಂದಾಗಿದೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಆರೋಗ್ಯ ಸಚಿವ ಯು.ಟಿ. ಖಾದರ್, ಆಹಾರ ವ್ಯತ್ಯಯ ಹಾಗೂ ನಕಲಿ ಔಷಧ ಮಾರಾಟ ತಡೆಯಲು ಇಲಾಖೆ ಕೈಗೊಂಡಿರುವ ಹಲವು ಪ್ರಮುಖ ನಿರ್ಧಾರಗಳನ್ನು ಪ್ರಕಟಿಸಿದರು.**



ಕ್ಯೂಆರ್ ಕೋಡ್ ಜಾರಿ : ದೇಶದಲ್ಲೇ ಮೊದಲ ಪ್ರಯೋಗ ಆಹಾರ ಮತ್ತು ಔಷಧಗಳಲ್ಲಿ ಲೋಪದೋಷಗಳು ಕಂಡುಬಂದಲ್ಲಿ ಸಾರ್ವಜನಿಕರು ತಕ್ಷಣವೇ ದೂರು ನೀಡಲು ಅನುಕೂಲವಾಗುವಂತೆ ರಾಜ್ಯ ಸರ್ಕಾರ ದೇಶದಲ್ಲೇ ಮೊದಲ ಬಾರಿಗೆ 'ಕ್ಯೂಆರ್ ಕೋಡ್' ವ್ಯವಸ್ಥೆಯನ್ನು ಪರಿಚಯಿಸಿದೆ. ಗ್ರಾಹಕರು ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ನೇರವಾಗಿ ಇಲಾಖೆಗೆ ದೂರು ಸಲ್ಲಿಸಬಹುದು. ದೂರು ಬಂದ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಹೊಟೇಲ್ ಹಾಗೂ ಕ್ಲಬ್‌ಗಳ ಮಾಲೀಕರು ಗ್ರಾಹಕರ ಉಡುಪಿನ ಕಡೆಗೆ ಗಮನ ಕೊಡುವ ಬದಲು ತಮ್ಮ ಅಡುಗೆ ಮನೆ (ಕಿಚನ್) ನೈರ್ಮಲ್ಯದ ಕಡೆಗೆ ಹೆಚ್ಚಿನ ಗಮನ ಹರಿಸಬೇಕೆಂದು ಸಚಿವರ ಸ್ಪಷ್ಟ ಎಚ್ಚರಿಕೆ ನೀಡಿದ್ದಾರೆ. ಕಳೆದ 20 ದಿನಗಳಿಂದ ನಡೆಸಿದ ರಾಜ್ಯವ್ಯಾಪಿ ಪರಿಶೀಲನೆಯಲ್ಲಿ ಕಂಡುಬಂದ ಲೋಪದೋಷಗಳ ಕುರಿತು ಮುಂದಿನ 15 ದಿನಗಳ ಒಳಗಾಗಿ ಹೊಟೇಲ್ ಹಾಗೂ ರೆಸ್ಟೋರೆಂಟ್ ಅಸೋಸಿಯೇಷನ್ ಮತ್ತು ಇಂದಿರಾ ಕ್ಯಾಂಟಿನ್ ಅಧಿಕಾರಿಗಳೊಂದಿಗೆ ಪ್ರಮುಖ ಸಭೆ ನಡೆಸಲಾಗುವುದು. ಇಂದಿರಾ ಕ್ಯಾಂಟಿನ್‌ಗಳ ಸಮಸ್ಯೆಗಳನ್ನು ಸರಿಪಡಿಸಲು ಕಟ್ಟುನಿಟ್ಟಿನ ತೀರ್ಮಾನ ಕೈಗೊಳ್ಳಲಾಗುವುದು. ಸಿಬ್ಬಂದಿಗೆ 3 ದಿನಗಳ ವಿಶೇಷ ತರಬೇತಿ ಆಯೋಜಿಸ ಲಾಗುವುದು.ಬೀದಿ ಬದಿ ಆಹಾರ ಮಾರಾಟ ಮಾಡುವ 1,000 ವ್ಯಾಪಾರಿಗಳಿಗೆ ತರಬೇತಿ ನೀಡಲು 'ನೆಸ್ಲೆ' ಸಂಸ್ಥೆ ಮುಂದೆ ಬಂದಿದೆ ಎಂದು ತಿಳಿಸಿದರು. ಇ-ಕಾಮರ್ಸ್ ಕಂಪನಿಗಳ ವಿರುದ್ಧ ಸಮರ 'ದತ್ತೂರ' ಹಣ್ಣು ವಶ ಆನ್‌ಲೈನ್ ಇ-ಕಾಮರ್ಸ್ ಪ್ಲಾಟ್‌ಫಾರ್ಮ್‌ಗಳಲ್ಲಿ ವಿಷಕಾರಿ 'ದತ್ತೂರ' ಹಣ್ಣುಗಳನ್ನು ಸರಬರಾಜು ಮಾಡಿರುವ ಗಂಭೀರ ದೂರುಗಳು ಬಂದ ಹಿನ್ನೆಲೆಯಲ್ಲಿ ಕಾರ್ಯಾಚರಣೆ ನಡೆಸಿ 2,100 ದತ್ತೂರ ಹಣ್ಣುಗಳನ್ನು ವಶಪಡಿಸಿಕೊಳ್ಳಲಾಗಿದೆ. ನೋಟಿಸ್ ನೀಡಿದ್ದರೂ ಸೂಕ್ತ ಉತ್ತರ ನೀಡದ ಕಾರಣ 2-3 ಪ್ರಮುಖ ಇ-ಕಾಮರ್ಸ್ ಸಂಸ್ಥೆಗಳ ಲೈಸೆನ್ಸ್ ಅಮಾನತು ಮಾಡಲಾಗಿದೆ.ನೋಟಿಸ್ ನೀಡಿದರೂ ವ್ಯಾಪಾರ ಮುಂದುವರಿಸಿರುವ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮಕ್ಕಾಗಿ 24 ಗಂಟೆಗಳ ಕಾಲಾವಕಾಶ ನೀಡಿ ಕೇಂದ್ರ ಈಖ-ಖಂಖ ಸಂಸ್ಥೆಗೆ ಮನವಿ ಸಲ್ಲಿಸಲಾಗುತ್ತಿದೆ.ಈ ಸಂಸ್ಥೆಗಳ ಟ್ರೇಡ್ ಲೈಸೆನ್ಸ್ ಸಂಪೂರ್ಣವಾಗಿ ರದ್ದು ಮಾಡಲು ಕೇಂದ್ರ ಅನುಮತಿ ನೀಡುವುದು ಅಗತ್ಯವಾಗಿದೆ ಎಂದರು. ನಿಯಮ ಉಲ್ಲಂಘನೆ ಹಿನ್ನೆಲೆಯಲ್ಲಿ ಇತ್ತೀಚೆಗೆ ಸೀಝ್ ಮಾಡಲಾಗಿದ್ದ ಯುಬಿ ಸಿಟಿ ಕಿಚನ್ ಅನ್ನು 15 ದಿನಗಳ ಕಾಲ ಮುಚ್ಚಲಾಗಿತ್ತು. ಪ್ರಸ್ತುತ ಮರು ಪರಿಶೀ ನಡೆಸಿ, ನಿಯಮಗಳನ್ನು ಸರಿಯಾಗಿ ಪಾಲಿಸಿರುವುದು ಖಚಿತವಾದ ನಂತರವೇ ಮರುಆರಂಭಕ್ಕೆ ಅನುಮತಿ ನೀಡಲಾಗಿದೆ ಎಂದು ಹೇಳಿದರು. ಸರ್ಕಾರಿ ಹಾಸ್ಟೆಲ್‌ಗಳಲ್ಲಿ ಬಳಕೆಯಾಗುವ ಆಹಾರ ಪದಾರ್ಥಗಳ ಎಕ್ಸ್‌ಪೈರಿ ದಿನಾಂಕ ಮುಗಿಯುವ ಕನಿಷ್ಠ 3 ತಿಂಗಳು ಮುಂಚಿತವಾಗಿಯೇ ಅವುಗಳನ್ನು ಬಳಸಬೇಕು, ದಿನಾಂಕ ಮುಗಿಯುವ ಹಂತದಲ್ಲಿರುವ ಪದಾರ್ಥಗಳನ್ನು ಖರೀದಿಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ.ರಾಜ್ಯದಲ್ಲಿ ನಕಲಿ ಮೆಡಿಸಿನ್ ಸರಬರಾಜು ತಡೆಯಲು (ವಿಶೇಷ ತನಿಖಾ ತಂಡ) ರಚಿಸಲಾಗಿದೆ.ಈ ತಂಡದಲ್ಲಿ ಪೊಲೀಸ್ ಇಲಾಖೆ, ಡ್ರಗ್ ಕಂಟ್ರೋಲ್ ಅಧಿಕಾ-ರಿಗಳ ಜೊತೆಗೆ ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿಗಳನ್ನೂ ಸೇರಿಸಿಕೊಳ್ಳಲಾಗುತ್ತಿದೆ.ಪ್ರಕರಣದ ಪ್ರಮುಖ ಆರೋಪಿಯನ್ನು ಈಗಾಗಲೇ ಬಂಧಿಸಲಾಗಿದ್ದು, ಸರಬರಾಜು ಜಾಲದ ಕುರಿತು ತೀವ್ರ ತನಿಖೆ ನಡೆಯುತ್ತಿದೆ.ಸರ್ಕಾರಿ ಆಸ್ಪತ್ರೆಗಳಿಗೆ ಈ ನಕಲಿ ಔಷಧಗಳು ಪೂರೈಕೆಯಾಗಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ. ನಕಲಿ ಔಷಧ ಎಸ್‌ಐಟಿ ತನಿಖೆ: ನಕಲಿ ಔಷಧದ ತನಿಖೆಗಾಗಿ ಎಸ್‌ಐಟಿ ರಚನೆ ಮಾಡಿದ್ದೇವೆ. ಪೊಲೀಸರು, ಔಷಧ ನಿಯಂತ್ರಣ ಇಲಾಖೆ ಅಧಿಕಾ-ರಿಗಳ ತಂಡ ಕೆಲಸ ಮಾಡುತ್ತಿದೆ. ಈ ತಂಡದಲ್ಲಿ ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿಗಳನ್ನು ಸೇರ್ಪಡೆ ಮಾಡಲು ತಿಳಿಸಿದ್ದೇನೆ ಎಂದರು. ಈ ಪ್ರಕರಣದ ಪ್ರಮುಖ ಆರೋಪಿ ಬಂಧನವಾಗಿದೆ. ಎಲ್ಲೆಲ್ಲಿ ನಕಲಿ ಔಷಧ ಸರಬರಾಜು ಆಗಿದೆ ಎಂಬ ಬಗ್ಗೆ ತನಿಖೆ ನಡೆಯುತ್ತಿದೆ. ಸರ್ಕಾರಿ ಆಸ್ಪತ್ರೆಗೆ ನಕಲಿ ಔಷಧ ಸರಬರಾಜು ಆಗಿರುವ ಬಗ್ಗೆ ಮಾಹಿತಿಯಿಲ್ಲ ಎಂದು ಸಚಿವ ಖಾದರ್ ಹೇಳಿದರು.

# ಈದ್ ಮಿಲಾದ್ ಅಂಗವಾಗಿ ಸರಕಾರಿ ಆಸ್ಪತ್ರೆ ರೋಗಿಗಳಿಗೆ ಹಣ್ಣು, ಬ್ರೆಡ್ ವಿತರಣೆ

ವಿಜಯ ದುಂಬಿ ಸುದ್ದಿ....

**ಚಿಕ್ಕಬಳ್ಳಾಪುರ: ಈದ್ ಮಿಲಾದ್-ಉನ್ನಬಿ ಅಂಗವಾಗಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಫೌಂಡೇಶನ್ ವತಿಯಿಂದ ನಗರದ ಸರಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಮಾಡಿ, ಹಣ್ಣು, ಬ್ರೆಡ್ ಸೇರಿದಂತೆ ವಿವಿಧ ಆಹಾರ ಸಾಮಗ್ರಿಗಳನ್ನು ವಿತರಿಸಲಾಯಿತು.**



ಈ ಸಂದರ್ಭದಲ್ಲಿ ಮಾತನಾಡಿದ ಫೌಂಡೇಶನ್ ರಾಜ್ಯಾಧ್ಯಕ್ಷ ಹಾಗೂ ಚಿಕ್ಕಬಳ್ಳಾಪುರ ವಕ್ಫ್ ಮಂಡಳಿಯ ಮಾಜಿ ಅಧ್ಯಕ್ಷ ಡಾ. ನಂದಿ ಎಂ.ಎಂ.ಬಾಷಾ,ಪ್ರವಾದಿ ಮುಹಮ್ಮದ್ ಅವರನ್ನು ಇಡೀ ಮಾನವಕುಲದ ಪಾಲಿಗೆ ಕರುಣೆಯಾಗಿ ಕಳುಹಿಸಲಾಗಿದೆ. ಅವರ ಜೀವನವು ಶಾಂತಿ,ಪ್ರೀತಿ, ಸಹೋದರತ್ವ ಹಾಗೂ ಸೌಹಾರ್ದಯುತ ಬದುಕಿಗೆ ಅತ್ಯುತ್ತಮ ಮಾದರಿಯಾಗಿದೆ ಎಂದರು.

ಈದ್ ಮಿಲಾದ್ ಆಚರಣೆಯ ಉದ್ದೇಶ ಕೇವಲ ಸಂಭ್ರಮಿಸುವುದಲ್ಲ ಅಗತ್ಯವಿರುವವರಿಗೆ ನೆರವು ನೀಡುವುದು, ಸಮಾಜ ಸೇವೆಯ ಮೂಲಕ ಪ್ರವಾದಿಯವರ ಮಾನವೀಯ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಇಸ್ಲಾಂನ ಸೌಹಾರ್ದತೆ,ಸಹಿಷ್ಣುತೆ,ಶಾಂತಿ ಮತ್ತು ಸಹೋದರತ್ವದ ಸಂದೇಶವನ್ನು ತಲುಪಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಮೌಲಾನಾ ಇಕ್ರಾಮುಲ್ ಹಖ್ ಮಾತನಾಡಿ,ಪ್ರವಾದಿ ಮುಹಮ್ಮದ್ ಅವರನ್ನು ಇಡೀ ಜಗತ್ತಿಗೆ ಕರುಣೆಯಾಗಿ ಕಳುಹಿಸಲಾಗಿದೆ. ಅವರ ಬೋಧನೆಗಳು ಶಾಂತಿ,ಪ್ರೀತಿ ಮತ್ತು ಸಹೋದರತ್ವವನ್ನು ಸಾರುತ್ತವೆ.

ಪ್ರವಾದಿಯವರ ನಡತೆ,ಸೌಜನ್ಯ ಹಾಗೂ ಮಾನವೀಯ ಗುಣಗಳಿಂದಲೇ ಇಸ್ಲಾಂನ ಸಂದೇಶ ವ್ಯಾಪಕವಾಗಿ ಜನರನ್ನು ತಲುಪಿದೆ ಎಂದರು ತಮಗೆ ನೋವುಂಟು ಮಾಡಿದವರೊಂದಿಗೂ ಉತ್ತಮ ರೀತಿಯಲ್ಲಿ ನಡೆದುಕೊಳ್ಳಬೇಕು ಎಂಬುದು ಪ್ರವಾದಿಯವರ ಬೋಧನೆಯಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಫೌಂಡೇಶನ್ ರಾಜ್ಯ ಕಾರ್ಯದರ್ಶಿ ಹಾಶಿಂ ಬನೂರು, ಅಲ್ ಇಂಡಿಯಾ ಮಿಲ್ಲಿ ಕೌನ್ಸಿಲ್‌ನ ಸಯ್ಯದ್ ಅಮಾನುಲ್ಲಾ,ಅಬ್ದುಲ್ ರಹಮಾನ್,ಫಾದ ರ್ ಅರ್ಬಟ್, ಡಿಎಸ್-ಎಸ್ ಮುಖಂಡರಾದ ಬಿ.ಎನ್.ಗಂಗಾಧರಪ್ಪ, ಕೆ.ಎಂ ಫಜಲುಲ್ಲಾ,ಜಾವೇದ್ ಬೇಗ್,ಜರಾರ್ ಹುಸೇನ್, ಸಜ್ಜಾದ್,ಇಮ್ತಿಯಾಜ್,ಅಬ್ಬಾಸ್,ಅದ್ನಾನ್,ಹಸೀನಾ ಬೇಗಂ,ಇಬ್ರತ್ ಉನ್ನಿಸಾ,ನಶ್ರಾ ಬಾನು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಾದಕ ವ್ಯಸನದ ವಿರುದ್ಧ ಕೆಜಿಎಫ್ ಪೊಲೀಸರ ಕಲಾತ್ಮಕ ಸಮರ: ವೈರಲ್ ಆಯ್ತು 'ಒಂದು ತಪ್ಪು ಹೆಜ್ಜೆ' ಬೀದಿನಾಟಕ



ವಿಜಯ ದುಂಬಿ ಸುದ್ದಿ....

**ಕೆಜಿಎಫ್: ಕೇವಲ ಲಾಠಿ, ಕಠಿಣ ಕಾನೂನು ಕ್ರಮಗಳಿಂದಷ್ಟೇ ಅಪರಾಧಗಳನ್ನು ತಡೆಯಲು ಸಾಧ್ಯವಿಲ್ಲ; ಕಲೆಯ ಮೂಲಕ ಜಾಗೃತಿ ಮೂಡಿಸಿಯೂ ಸಮಾಜವನ್ನು ತಿದ್ದಬಹುದು ಎಂಬುದನ್ನು ಕೆಜಿಎಫ್ ಜಿಲ್ಲಾ ಪೊಲೀಸ್ ಇಲಾಖೆ ಸಾಬೀತುಪಡಿಸಿದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಅವರ ಮಾರ್ಗದರ್ಶನದಲ್ಲಿ ಮೂಡಿಬಂದ "ಒಂದು ತಪ್ಪು ಹೆಜ್ಜೆ" ಎಂಬ ವಿಶಿಷ್ಟ ಬೀದಿನಾಟಕವು ಈಗ ಸಾರ್ವಜನಿಕ ವಲಯ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಮೆಚ್ಚುಗೆಗೆ ಪಾತ್ರವಾಗಿದೆ.**

ಸ್ವಾತಂತ್ರ್ಯ ದಿನಾಚರಣೆಯಂದು ನಗರಸಭೆ ಕ್ರೀಡಾಂಗಣದಲ್ಲಿ ಶಾಸಕಿ ರೂಪಕಲಾ ಹಾಗೂ ಗಣ್ಯರ ಸಮ್ಮುಖದಲ್ಲಿ ಪ್ರದರ್ಶನಗೊಂಡ ಈ ನಾಟಕ, ಯುವಜನತೆ ಮಾದಕ ವಸ್ತುಗಳ ವ್ಯಸನಕ್ಕೆ ಬಲಿಯಾದರೆ ಒಂದು ಸುಖೀ ಕುಟುಂಬ ಹೇಗೆ ನಾಶವಾಗುತ್ತದೆ ಎಂಬುದನ್ನು ಎಳೆ-ಎಳೆಯಾಗಿ ಬಿಂಬಿಸಿದೆ. ಪ್ರತಿಭಾವಂತ ವಿದ್ಯಾರ್ಥಿ ಗೌತಮ್, ಸ್ನೇಹಿತರ ಒತ್ತಡಕ್ಕೆ ಮಣಿದು ಕುತೂಹಲಕ್ಕಾಗಿ ಇಡುವ ಒಂದು ತಪ್ಪು ಹೆಜ್ಜೆ ಆತನನ್ನು ಪೂರ್ಣಪ್ರಮಾಣದ ವ್ಯಸನಿಯನ್ನಾಗಿ ಮಾಡುತ್ತದೆ. ನಂತರ ಡ್ರಗ್ಸ್ ಖರೀದಿಸಲು ಹಣವಿಲ್ಲದೆ ಕಳ್ಳತನದ ಹಾದಿ ಹಿಡಿದು, ಮನೆಯ ನೆಮ್ಮದಿಯನ್ನೇ ಹಾಳುಮಾಡುತ್ತಾನೆ.

ಆಸ್ಪತ್ರೆ ವಾಸದ ಬಳಿಕ ಆತ ಬದಲಾಗಲು ಯತ್ನಿಸಿದರೂ, ತಂಗಿಯ ಮದುವೆ ನಿಶ್ಚಯವಾದ ಸಂದರ್ಭದಲ್ಲೇ ಆತನ ಹಳೆಯ ಕಳ್ಳತನದ ಪ್ರಕರಣ-ಕ್ಕಾಗಿ ಪೊಲೀಸರು ಬಂಧಿಸುತ್ತಾರೆ. ಕಾನೂನು ಯಾರನ್ನೂ ಬಿಡುವುದಿಲ್ಲ ಎಂಬ ಕಟು ಸಂದೇಶದೊಂದಿಗೆ ನಾಟಕ ಮುಕ್ತಾಯವಾಗಿ ನೆರೆದಿದ್ದವರ ಕಣ್ಣಂಚಲ್ಲಿ ನೀರು ತರಿಸಿತು. ಉರಿಗಾಂ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಹರೀಶ್ ಅವರ ಕಥೆ, ಚಿತ್ರಕಥೆ, ನಿರ್ದೇಶನ ಹಾಗೂ ನಟನೆಯಲ್ಲಿ ಈ ನಾಟಕ ಮೂಡಿಬಂದಿದೆ. ಸೈಬರ್ ಕ್ರೈಂ ಠಾಣೆಯ ಮಣಿಕಂಠ ತಂದೆಯಾಗಿ, ಆಂಡರ್ಸನ್ ಪೇಟೆ ಠಾಣೆಯ ನಂದಿತಾ ತಾಯಿಯಾಗಿ ಅತ್ಯಂತ ನೈಜವಾಗಿ ಅಭಿನಯಿಸಿದ್ದಾರೆ. ಜೊತೆಗೆ ಡಾ. ಟಿ. ತಿಮ್ಮಯ್ಯ ಇಂಜಿನಿಯ-ರಿಂಗ್ ಕಾಲೇಜಿನ ವಿದ್ಯಾರ್ಥಿಗಳು ಗೌತಮ್ ಹಾಗೂ ತಂಗಿಯ ಪಾತ್ರಕ್ಕೆ ಜೀವ ತುಂಬಿದ್ದಾರೆ.

ಈ ನಾಟಕದ ವಿಡಿಯೋ ಈಗ ಇಲಾಖೆಯ ವಾಟ್ಸಾಪ್ ಗ್ರೂಪ್ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿದ್ದು, ಸಾರ್ವಜನಿಕರಲ್ಲಿ ದೊಡ್ಡ ಮಟ್ಟದ ಜಾಗೃತಿ ಮೂಡಿಸುತ್ತಿದೆ. ಈ ಕುರಿತು ಪ್ರತಿಕ್ರಿಯಿಸಿದ ಎಸ್ಪಿ ಶಿವಾಂಶು ರಜಪೂತ್, ಡ್ರಗ್ಸ್ ಮುಕ್ತ ಕೆಜಿಎಫ್ ನಿರ್ಮಾಣವೇ ತಮ್ಮ ಇಲಾಖೆಯ ಮುಖ್ಯ ಗುರಿಯಾಗಿದ್ದು, ಹರೀಶ್ ಹಾಗೂ ಅವರ ತಂಡದ ಈ ವಿನೂತನ ಪ್ರಯತ್ನಕ್ಕೆ ಅಭಿನಂದನೆ ಸಲ್ಲುವುದಾಗಿ ತಿಳಿಸಿದ್ದಾರೆ. ಯುವಜನ-ರಿಗೆ ನೇರವಾಗಿ ತಲುಪುವ ಉದ್ದೇಶದಿಂದ ಕೇವಲ ಎರಡೇ ಮೂರು ದಿನಗಳಲ್ಲಿ ಎಸ್ಪಿ ಅವರ ಮಾರ್ಗದರ್ಶನ ಹಾಗೂ ಕಾಲೇಜು ವಿದ್ಯಾರ್ಥಿಗಳ ಸಹಕಾರದಿಂದ ಈ ನಾಟಕ ರೂಪಿಸಲು ಸಾಧ್ಯವಾಯಿತು ಎಂದು ಇನ್‌ಸ್ಪೆಕ್ಟರ್ ಹರೀಶ್ ಹರ್ಷ ವ್ಯಕ್ತಪಡಿಸಿದ್ದಾರೆ.

# ಈದ್ ಮಿಲಾದ್ ಅಂಗವಾಗಿ ಸರ್ಕಾರಿ ಆಸ್ಪತ್ರೆ ರೋಗಿಗಳಿಗೆ ಹಾಲು, ಹಣ್ಣು ವಿತರಣೆ

ವಿಜಯ ದುಂಬಿ ಸುದ್ದಿ....

**ಮುದಗಲ್: ಪವಿತ್ರ ಈದ್ ಮಿಲಾದ್ ಅಂಗವಾಗಿ ಮುದಗಲ್ ಪಟ್ಟಣದಲ್ಲಿ ಮುಸ್ಲಿಂ ಸಮುದಾಯದವರು ಸೌಹಾರ್ದತೆ ಹಾಗೂ ಸಂಭ್ರಮದಿಂದ ಹಬ್ಬ ಆಚರಿಸುವ ಮೂಲಕ ಭಾವೈಕ್ಯತೆಯ ಸಂದೇಶ ಸಾರಿದರು. ಈದ್ ಮಿಲಾದ್ ಪ್ರಯುಕ್ತ ಜುನೈದಿ ವೆಲ್ಫೇರ್ ಟ್ರಸ್ಟ್ ನೇತೃತ್ವದಲ್ಲಿ ಪಟ್ಟಣದ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆಗೆ ದಾಖಲಾಗಿದ್ದ ರೋಗಿಗಳಿಗೆ ಹಾಲು ಹಾಗೂ ಹಣ್ಣುಗಳನ್ನು ವಿತರಿಸುವ ಮೂಲಕ ಮಾನವೀಯ ಸೇವೆ ಸಲ್ಲಿಸಲಾಯಿತು.**



ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ವಿಶೇಷ ಕಾರ್ಯದರ್ಶಿ ಚಂದ್ರಶೇಖರ ಎಂ. ಗಂಗಣ್ಣ ಮಾತನಾಡಿ, ಮುದಗಲ್ ಪಟ್ಟಣವು ಹಿಂದಿನಿಂದಲೂ ಭಾವೈಕ್ಯತೆ ಮತ್ತು ಸೌಹಾರ್ದತೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು. ಹಿಂದೂ-ಮುಸ್ಲಿಂ ಸೇರಿದಂತೆ ವಿವಿಧ ಸಮುದಾಯದವರು ಮೊಹರಂ ಹಾಗೂ ಇತರ ಹಬ್ಬಗಳನ್ನು ಪರಸ್ಪರ ಸಹಕಾರ ಮತ್ತು ಒಗ್ಗಟ್ಟಿನಿಂದ ಆಚರಿಸುತ್ತಿರುವುದು ಮಾದರಿಯಾಗಿದೆ.

ಪ್ರವಾದಿ ಮಹಮ್ಮದ್ ಅವರ ಜನ್ಮದಿನದ ಅಂಗವಾಗಿ ಆಸ್ಪತ್ರೆಯ ರೋಗಿಗಳಿಗೆ ಹಾಲು, ಹಣ್ಣು ವಿತರಿಸುವ ಮೂಲಕ ಮುಸ್ಲಿಂ ಸಮುದಾಯದವರು ಸಹೋದರತ್ವ, ಸೇವಾ ಮನೋಭಾವ ಹಾಗೂ ಮಾನವೀಯತೆಯ ಸಂದೇಶ ಸಾರಿದ್ದಾರೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ಮುಖಂಡರಾದ ಗುರುಬಸಪ್ಪ ಸಜ್ಜನ್ ಹಾಗೂ ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಎಸ್.ಎ. ನಯಿಂ ಮಾತನಾಡಿ, ಧರ್ಮ ಯಾವುದೇ ಆಗಿರಲಿ, ಮಾನವೀಯತೆಯೇ ಎಲ್ಲಕ್ಕಿಂತ ಮುಖ್ಯ. ಸಂಕಷ್ಟದಲ್ಲಿರುವವರ ನೋವಿಗೆ ಸ್ಪಂದಿಸುವುದು ಹಾಗೂ ಪರಸ್ಪರ ಸಹಕಾರದಿಂದ ಬದುಕುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಪ್ರವಾದಿಯವರು ತೋ-ರಿದ ಸನ್ಮಾರ್ಗದಲ್ಲಿ ನಡೆದು ಸಮಾಜದಲ್ಲಿ ಶಾಂತಿ, ಸಹಬಾಳ್ವೆ ಮತ್ತು ಸಹೋದರತ್ವವನ್ನು ಬೆಳೆಸುವ ಅಗತ್ಯವಿದೆ. ಮುದಗಲ್‌ನಲ್ಲಿ ಎಲ್ಲ ಸಮುದಾಯದವರು ಹಬ್ಬ-ಹ-ರಿದಿನಗಳನ್ನು ಸೌಹಾರ್ದತೆಯಿಂದ ಆಚ-ರಿಸುತ್ತಿರುವುದು ಭಾವೈಕ್ಯತೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ದೇವಿಂದ್ರ ವಕೀಲ್, ಎಸ್ಸೆಸ್ ಖಾದ್ರಿ, ಮಂಜುನಾಥ ಬನ್ನಿಗೋಳ್ಕರ್, ಮೈಬೂಬು ಕಡ್ಡಿಪುಡಿ, ಹುಸೇನ್ ಪಾಶಾ, ಮಾಬು ಹುಸೇನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ರಾಜ್ಯದಲ್ಲಿ 6 ವರ್ಷಗಳಲ್ಲಿ 98 ಕಳಪೆ ಗುಣಮಟ್ಟದ ಔಷಧ ಪತ್ತೆ

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ರಾಜ್ಯದಲ್ಲಿ ರೋಗಿಗಳ ಜೀವದೊಂದಿಗೆ ಚೆಲ್ಲಾಟವಾಡುತ್ತಿರುವ ನಕಲಿ ಹಾಗೂ ಕಳಪೆ ಗುಣಮಟ್ಟದ ಔಷಧಗಳ ಆತಂಕ ಮುಂದುವರಿದಿದ್ದು, ಕಳೆದ ಆರು ವರ್ಷಗಳಲ್ಲಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಪ್ರಯೋಗಾಲಯದಲ್ಲಿ 98 ಕಡಿಮೆ ಗುಣಮಟ್ಟದ (ಎನ್‌ಎಸ್‌ಕ್ಯೂ) ಔಷಧಗಳು ಪತ್ತೆಯಾಗಿವೆ. 2021ರಿಂದ 2026ರ ಆಗಸ್ಟ್ 18ರವರೆಗೆ ಪತ್ತೆಯಾದ 98 ಎನ್‌ಎಸ್‌ಕ್ಯೂ ಔಷಧಗಳ ಪೈಕಿ ಹೆಚ್ಚಿನವು ಮಾತ್ರೆಗಳು ಹಾಗೂ ಸಿರಪ್‌ಗಳಾಗಿವೆ.**

2021ರಿಂದ 2025ರವರೆಗೆ 15 ಕಳಪೆ ಗುಣಮಟ್ಟದ ಔಷಧಗಳನ್ನು ಕಪ್ಪುಪಟ್ಟಿಗೆ ಸೇರಿಸಲಾಗಿದೆ. ನಕಲಿ ಅಥವಾ ಕಳಪೆ ಗುಣಮಟ್ಟದ ಔಷಧಗಳನ್ನು ಪೂರೈಸಿದ 26 ಕಂಪನಿಗಳ ಪೈಕಿ ಕೇವಲ ಆರು ಕಂಪನಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಅನುಮತಿ ದೊರೆತಿದೆ. ಉಳಿದ ಕಂಪನಿಗಳ ವಿರುದ್ಧ ತನಿಖೆಗೆ ಅನುಮತಿ ದೊರೆಯದಿರುವುದು ಕಳಪೆ ಔಷಧ ಪೂರೈಕೆದಾರರ ವಿರುದ್ಧ ಪರಿಣಾಮಕಾರಿ ಕ್ರಮಕ್ಕೆ ಹಿನ್ನಡೆಯಾಗಿದೆ.



ಹರಿಯಾಣ, ಹಿಮಾಚಲ ಪ್ರದೇಶ, ಉತ್ತರಾಖಂಡ, ಮಹಾರಾಷ್ಟ್ರ, ಪಂಜಾಬ್, ತೆಲಂಗಾಣ ಹಾಗೂ ಕರ್ನಾಟಕ ಮೂಲದ ಕಂಪನಿಗಳು ಪೂರೈಸಿದ ವಿವಿಧ ಔಷಧಗಳು ಪ್ರಯೋಗಾಲಯದ ಪರೀಕ್ಷೆಯಲ್ಲಿ ನಿಗದಿತ ಗುಣಮಟ್ಟದ ಮಾನದಂಡಗಳನ್ನು ಪೂರೈಸದಿರುವುದು ಪತ್ತೆಯಾಗಿದೆ. ಈ ಪೈಕಿ ಕಳಪೆ ಔಷಧ ಪೂರೈಕೆಯಲ್ಲಿ ಹೆಚ್ಚಿನ ಕಂಪನಿಗಳು ಹಿಮಾಚಲ ಪ್ರದೇಶ ಮೂಲದವು ಎಂಬುದು ಸರ್ಕಾರದ ದಾಖಲೆಗಳಿಂದ ತಿಳಿದುಬಂದಿದೆ.

ಕೋಟ್ಯಂತರ ರೂ. ಮೌಲ್ಯದ ಔಷಧ ಖರೀದಿ ಆರೋಗ್ಯ ಇಲಾಖೆಯ ಅಧೀನದಲ್ಲಿರುವ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ (ಕೆಎಸ್‌ಎಂಎಸ್‌ಸಿಎಲ್) ಪ್ರತಿವರ್ಷ ನೂರಾರು ಕೋಟಿ ರೂಪಾಯಿ ಮೌಲ್ಯದ ಬ್ಯಾಂಡೇಜ್ ಕ್ಲಾತ್, ಕಾಟನ್, ಸರ್ಜಿಕಲ್ ಗ್ಲೌಸ್, ಗ್ಲೂಕೋಸ್ ಬಾಟಲ್, ಆ?ಯಂಟಿಬಯೋಟಿಕ್ ಮಾತ್ರೆಗಳು ಸೇರಿದಂತೆ ವಿವಿಧ ಔಷಧ ಹಾಗೂ ವೈದ್ಯಕೀಯ ಪರಿಕರಗಳನ್ನು ಖರೀದಿಸುತ್ತದೆ. ಟೆಂಡರ್ ಪ್ರಕ್ರಿಯೆಯಲ್ಲಿ ಎಲ್–1 ಸ್ಥಾನ ಪಡೆದ ಕಂಪನಿಗಳಿಗೆ ಔಷಧ ಪೂರೈಕೆಯ ಕಾರ್ಯಾದೇಶ ನೀಡಲಾಗುತ್ತದೆ. ಈ ಕಂಪನಿಗಳು ನಿಗಮದ ಔಷಧ ಉಗ್ರಾಣಗಳಿಗೆ ಔಷಧಗಳನ್ನು ಪೂರೈಸುತ್ತವೆ. ಅಲ್ಲಿಂದ ಜಿಲ್ಲಾ ಹಾಗೂ ತಾಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ನಗರ ಆರೋಗ್ಯ ಕೇಂದ್ರಗಳಿಗೆ ಬೇಡಿಕೆಯ ಆಧಾರದ ಮೇಲೆ ಔಷಧಗಳನ್ನು ವಿತರಿಸಲಾಗುತ್ತದೆ.

ನಿಗಮಕ್ಕೆ ಪೂರೈಕೆಯಾದ ವಿವಿಧ ಔಷಧಗಳ ಬ್ಯಾಚ್‌ಗಳನ್ನು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಧಿಕಾರಿಗಳು ಪ್ರಯೋಗಾಲಯದಲ್ಲಿ ಪರೀಕ್ಷಿಸಿದಾಗ ಹಲವು ಔಷಧಗಳು ಗುಣಮಟ್ಟದ ಮಾನದಂಡಗಳನ್ನು ಪೂರೈಸದಿರುವುದು ಪತ್ತೆಯಾಗಿದೆ. ಮಾರುಕಟ್ಟೆಯಲ್ಲಿ ಮಾರಾಟವಾಗುವ ಔಷಧಗಳ ಮಾದರಿಗಳನ್ನು ಪರೀಕ್ಷಿಸಿದಾಗಲೂ ಕೆಲವು ಔಷಧಗಳು ಕಳಪೆ ಗುಣಮಟ್ಟ ಹೊಂದಿರುವುದು ಬೆಳಕಿಗೆ ಬಂದಿದೆ. ಹೆಚ್ಚು ಮಾದರಿ ಸಂಗ್ರಹಿಸಿ ಪರೀಕ್ಷೆ ಅಗತ್ಯ ರಾಜ್ಯದಲ್ಲಿ ಮೆಡಿಕಲ್ ಡಿಸ್ಟ್ರಿಬ್ಯೂಟರ್‌ಗಳ ಸಂಖ್ಯೆ ಹೆಚ್ಚುತ್ತಿದ್ದು, ಕೆಲವರು ನಿಯಮಗಳನ್ನು ಪಾಲಿಸುತ್ತಿದ್ದರೆ, ಇನ್ನೂ ಕೆಲವರು ನಿಯಮ ಉಲ್ಲಂಘಿಸುತ್ತಿದ್ದಾರೆ. ಪ್ರತಿಷ್ಠಿತ ಕಂಪನಿಗಳ ಹೆಸರಿನ ಲೇಬಲ್‌ಗಳನ್ನು ನಕಲಿಸಿ ಬಾಟಲ್ ಹಾಗೂ ಪ್ಯಾಕೆಟ್‌ಗಳ ಮೇಲೆ ಅಂಟಿಸಿ ಔಷಧಗಳನ್ನು ಮಾರಾಟ ಮಾಡುವ ದಂಧೆಯೂ ನಡೆಯುತ್ತಿದೆ ಎಂಬ ಆರೋಪಗಳಿವೆ.

ಔಷಧಗಳು ಮತ್ತು ಸೌಂದರ್ಯವರ್ಧಕಗಳ ಕಾಯ್ದೆಯನ್ನು ಉಲ್ಲಂಘಿಸಿ ಕೆಲವು ಫಾರ್ಮಸಿಗಳು ಹಾಗೂ ಕ್ವಿಕ್ ಕಾಮರ್ಸ್ ಔಷಧ ವಿತರಣಾ ಆ?ಯಪ್‌ಗಳು ಔಷಧ ಮಾರಾಟ ಮಾಡುತ್ತಿರುವ ಆರೋಪಗಳೂ ಕೇಳಿಬರುತ್ತಿವೆ. ಆನ್‌ಲೈನ್‌ನಲ್ಲಿ ಮಾರಾಟವಾಗುವ ಕೆಲವು ಜೀವರಕ್ಷಕ ಔಷಧಗಳ ಗುಣಮಟ್ಟದ ಬಗ್ಗೆಯೂ ಅನುಮಾನಗಳು ವ್ಯಕ್ತವಾಗಿವೆ. ನಕಲಿ ಔಷಧಗಳ ವಿರುದ್ಧ ಕ್ರಮ ಕೈಗೊಳ್ಳುತ್ತಿರುವ ಔಷಧ ಆಡಳಿತ ಇಲಾಖೆಯ ಪ್ರಯೋಗಾಲಯವನ್ನು ಮತ್ತಷ್ಟು ಉನ್ನತೀಕರಿಸುವ ಅಗತ್ಯವಿದೆ. ಅತ್ಯಾಧುನಿಕ ಉಪಕರಣಗಳನ್ನು ಅಳವಡಿಸುವುದರ ಜತೆಗೆ ಔಷಧಗಳ ವಿಶ್ಲೇಷಣೆ ನಡೆಸುವ ಸಿಬ್ಬಂದಿಗೆ ಸೂಕ್ತ ತರಬೇತಿ ನೀಡಬೇಕು. ಮಾರುಕಟ್ಟೆಯಲ್ಲಿ ಸರಬರಾಜಾಗುವ ಔಷಧಗಳ ಮಾದರಿಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಸಂಗ್ರಹಿಸಿ ಪರಿಣಾಮಕಾರಿಯಾಗಿ ಪರೀಕ್ಷಿಸಿದರೆ ಇನ್ನಷ್ಟು ಕಳಪೆ ಹಾಗೂ ನಕಲಿ ಔಷಧಗಳನ್ನು ಪತ್ತೆಹಚ್ಚಲು ಸಾಧ್ಯವಾಗಲಿದೆ.

1ನೇ ಪುಟದಿಂದ....

ಮೊದಲ ಎರಡು ಚರಣಗಳನ್ನು ಮಾತ್ರ ಹಾಡಬೇಕು ಎಂಬ 1937ರ ಐತಿಹಾಸಿಕ ನಿರ್ಣಯವನ್ನು ಪುನರುಚ್ಚರಿಸಿತ್ತು. ಇದೇ ವೇಳೆ ಹೊಸ ವಂದೇ ಮಾತರಂ ಮಸೂದೆಯಲ್ಲಿ ಎಲ್ಲಾ ಚರಣಗಳನ್ನು ಹಾಡುವುದನ್ನು ಕಡ್ಡಾಯಗೊಳಿಸುವ ಪ್ರಸ್ತಾವನೆ ರಾಜಕೀಯ ಚರ್ಚೆಗೆ ಕಾರಣವಾಗಿದೆ. ತುಷ್ಟೀಕರಣ ರಾಜಕೀಯದ ಆರೋಪ ದೇಶದಲ್ಲಿ ನಡೆಯುತ್ತಿರುವ ತುಷ್ಟೀಕರಣ ರಾಜಕೀಯದ ಬಗ್ಗೆಯೂ ಶಿವಕುಮಾರ್ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. ಕಾಂಗ್ರೆಸ್ ಪಕ್ಷವು ಯಾವಾಗಲೂ ವೈವಿಧ್ಯತೆಯಲ್ಲಿ ನಂಬಿಕೆ ಇಟ್ಟಿದೆ. ಭಾರತ ವೈವಿಧ್ಯಮಯ ಸಮುದಾಯಗಳ ದೇಶ. ಬಿಜೆಪಿ ತುಷ್ಟೀಕರಣ ರಾಜಕೀಯವನ್ನು ಅನುಸರಿಸುತ್ತಿದೆ. ಆದರೆ ಕಾಂಗ್ರೆಸ್ ಸಮಾಜದ ಪ್ರತಿಯೊಂದು ವರ್ಗವನ್ನೂ ತನ್ನೊಂದಿಗೆ ಕರೆದೊಯ್ಯುವುದರಲ್ಲಿ ನಂಬಿಕೆ ಹೊಂದಿದೆ ಎಂದು ಅವರು ಹೇಳಿದರು. ಕ್ಷೇತ್ರ ಪುನರ್ವಿಂಗಡಣೆಗೂ ವಿರೋಧ ವಂದೇ ಮಾತರಂ ವಿಚಾರದ ಜತೆಗೆ ಜನಸಂಖ್ಯೆ ಆಧಾರಿತ ಲೋಕಸಭಾ ಕ್ಷೇತ್ರಗಳ ಪುನರ್ವಿಂಗಡಣೆ ಕುರಿತ ತಮ್ಮ ನಿಲುವನ್ನೂ ಶಿವಕುಮಾರ್ ಸ್ಪಷ್ಟಪಡಿಸಿದರು. ಜನಸಂಖ್ಯಾ ನಿಯಂತ್ರಣ ನೀತಿಯನ್ನು ಯಶಸ್ವಿಯಾಗಿ ಜಾರಿಗೊಳಿಸಿರುವ ದಕ್ಷಿಣ ರಾಜ್ಯಗಳಿಗೆ ಕ್ಷೇತ್ರ ಪುನರ್ವಿಂಗಡಣೆಯ ಮೂಲಕ ರಾಜಕೀಯವಾಗಿ ಅನ್ಯಾಯವಾಗಬಾರದು ಎಂಬುದು ಅವರ ವಾದವಾಗಿದೆ. ಪ್ರಸ್ತುತ ಲೋಕಸಭೆಯಲ್ಲಿ 543 ಸ್ಥಾನಗಳಿವೆ. 2026ರ ನಂತರ ನಡೆಯುವ ಮೊದಲ ಜನಗಣತಿಯ ಅಂಕಿ–ಅಂಶಗಳು ಪ್ರಕಟವಾಗುವವರೆಗೆ ಕ್ಷೇತ್ರಗಳ ಮರುಹೊಂದಾಣಿಕೆಗೆ ಸಂವಿಧಾನಾತ್ಮಕ ನಿರ್ಬಂಧವಿದೆ. ಹೀಗಾಗಿ ಮುಂದಿನ ಕ್ಷೇತ್ರ ಪುನರ್ವಿಂಗಡಣೆ ದೇಶದ ರಾಜಕೀಯ ಸಮೀಕರಣದಲ್ಲಿ ಮಹತ್ವದ ವಿಚಾರವಾಗಿದೆ. ಮುಂದಿನ 25 ವರ್ಷಗಳವರೆಗೆ ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು 543ರಲ್ಲೇ ಉಳಿಸಬೇಕು ಹಾಗೂ ಇದೇ ಸಂಖ್ಯೆಯೊಳಗೆ ಮಹಿಳಾ ಮೀಸಲಾತಿಯನ್ನು ಜಾರಿಗೊಳಿಸಬೇಕು ಎಂದು ಶಿವಕುಮಾರ್ ಪ್ರತಿಪಾದಿಸಿದ್ದಾರೆ. ಕ್ಷೇತ್ರ ಪುನರ್ವಿಂಗಡಣೆಗೆ 1971ರ ಜನಗಣತಿಯನ್ನೇ ಆಧಾರವಾಗಿ ಮುಂದುವರಿಸುವಂತೆ ದಕ್ಷಿಣ ವಲಯ ಮಂಡಳಿ ಮೂಲಕ ಕೇಂದ್ರ ಸರ್ಕಾರವನ್ನು ಒತ್ತಾಯಿಸುವ ಆಲೋಚನೆಯನ್ನೂ ಅವರು ಮುಂದಿಟ್ಟಿದ್ದಾರೆ. ಕೇಂದ್ರದ ಅಂದಾಜಿನ ಪ್ರಕಾರ, ಜನಸಂಖ್ಯೆ ಆಧಾರದ ಮೇಲೆ ಕ್ಷೇತ್ರ ಪುನರ್ವಿಂಗಡಣೆ ನಡೆದರೆ ಕರ್ನಾಟಕದ ಲೋಕಸಭಾ ಸ್ಥಾನಗಳು 28ರಿಂದ 42ಕ್ಕೆ, ತಮಿಳುನಾಡಿನವು 39ರಿಂದ 59ಕ್ಕೆ, ಕೇರಳದವು 20ರಿಂದ 30ಕ್ಕೆ, ಆಂಧ್ರಪ್ರದೇಶದವು 25ರಿಂದ 38ಕ್ಕೆ ಹಾಗೂ ತೆಲಂಗಾಣದವು 17ರಿಂದ 26ಕ್ಕೆ ಏರಿಕೆಯಾಗುವ ಸಾಧ್ಯತೆಯಿದೆ. ಆದರೆ, ಒಟ್ಟು ಸ್ಥಾನಗಳ ಸಂಖ್ಯೆ ಹೆಚ್ಚಾದರೂ ಸಂಸತ್ತಿನಲ್ಲಿ ದಕ್ಷಿಣ ಭಾರತದ ಒಟ್ಟಾರೆ ರಾಜಕೀಯ ಪಾಲು ಸುಮಾರು ಶೇ.24ರಷ್ಟೇ ಉಳಿಯಬಹುದು ಎಂಬುದು ಕೇಂದ್ರದ ವಾದವಾಗಿದೆ. ದಶಕಗಳಿಂದ ಜನಸಂಖ್ಯಾ ನಿಯಂತ್ರಣ ನೀತಿಗಳನ್ನು ಅನುಸರಿಸಿರುವ ದಕ್ಷಿಣ ರಾಜ್ಯಗಳ ಸಂಸದೀಯ ಪ್ರಾತಿನಿಧ್ಯಕ್ಕೆ ಧಕ್ಕೆಯಾಗುವ ರೀತಿಯಲ್ಲಿ ಕ್ಷೇತ್ರ ಪುನರ್ವಿಂಗಡಣೆ ನಡೆಯುವುದು ನ್ಯಾಯಸಮ್ಮತವಲ್ಲ. ಆದ್ದರಿಂದ ಪ್ರಸ್ತುತ ಸ್ಥಾನಗಳನ್ನು ಉಳಿಸಿಕೊಂಡು, ಮಹಿಳಾ ಮೀಸಲಾತಿ ಸೇರಿದಂತೆ ಹೊಸ ಪ್ರತಿನಿಧಿತ್ವ ವ್ಯವಸ್ಥೆಗಳನ್ನು ಇದೇ ಸಂಖ್ಯೆಯೊಳಗೆ ಜಾರಿಗೊಳಿಸಬೇಕು ಎಂಬುದು ಶಿವಕುಮಾರ್ ಅವರ ಸಲಹೆಯಾಗಿದೆ.

## ಉತ್ತರ ಪ್ರದೇಶದಲ್ಲಿ ಪ್ರವಾಹದ ನೀರಿನಲ್ಲಿ ಕೊಚ್ಚಿಹೋಗುತ್ತಿದ್ದ ಐದು ಕಾಡಾನೆಗಳ ರಕ್ಷಣೆ

**ವಿಜಯ ದುಂಬಿ ಸುದ್ದಿ....**

**ಬಹ್ರೈಚ್: ಉತ್ತರ ಪ್ರದೇಶದ ಬಹ್ರೈಚ್ ಜಿಲ್ಲೆಯ ಕತಾರ್ನಿಯಾಘಾಟ್ ಅರಣ್ಯ ಪ್ರದೇಶದಲ್ಲಿ ಕೌಡಿಯಾಲಾ ನದಿಯ ಬಿರುಸಿನ ಪ್ರವಾಹದಲ್ಲಿ ಗಿರ್ಜಾಪುರಿ ಬ್ಯಾರೇಜ್‌ನತ್ತ ಕೊಚ್ಚಿಹೋಗುತ್ತಿದ್ದ ಎರಡು ಮರಿಯಾನೆಗಳು ಸೇರಿದಂತೆ ಐದು ಕಾಡಾನೆಗಳನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ. ಮೂರು ವಯಸ್ಕ ಆನೆಗಳು ಹಾಗೂ ಎರಡು ಮರಿಯಾನೆಗಳನ್ನು ಒಳಗೊಂಡ ಹಿಂಡು ನದಿಯ ಭಾರಿ ಪ್ರವಾಹಕ್ಕೆ ಸಿಲುಕಿ ಗಿರ್ಜಾಪುರಿ ಬ್ಯಾರೇಜ್‌ನತ್ತ ಕೊಚ್ಚಿಹೋಗುತ್ತಿತ್ತು.**

ನಿನ್ನೆ ಬೆಳಿಗ್ಗೆ 10.20ರ ಸುಮಾರಿಗೆ ಕೈಲಾಶ್‌ಪುರಿ ಬ್ಯಾರಿಯರ್ ಮೂಲಕ ಕತಾರ್ನಿಯಾಘಾಟ್ ರೇಂಜ್ ಕಚೇರಿಗೆ ಆನೆಗಳು ಬಿರುಸಿನ ಪ್ರವಾಹದಲ್ಲಿ ಬ್ಯಾರೇಜ್‌ನತ್ತ ಕೊಚ್ಚಿಹೋಗುತ್ತಿರುವ ಮಾಹಿತಿ ಲಭ್ಯವಾಗಿತ್ತು ಎಂದು ವಿಭಾಗೀಯ ಅರಣ್ಯಾಧಿಕಾರಿ (ಡಿಎಫ್‌ಒ)



ಅಪೂರ್ವ ದೀಕ್ಷಿತ್ ಸುದ್ದಿಗಾರರಿಗೆ ತಿಳಿಸಿದ್ದಾರೆ. ಬಿರುಸಿನ ನೀರಿನ ಹರಿವಿನಿಂದ ಎರಡು ಮರಿಯಾನೆಗಳು ನಿಯಂತ್ರಣ ಕಳೆದುಕೊಳ್ಳುತ್ತಿದ್ದವು. ಅವುಗಳನ್ನು ರಕ್ಷಿಸಲು ಮುಂದಾದ ವಯಸ್ಕ ಆನೆಗಳೂ ನೀರಿನ ಸೆಳೆತಕ್ಕೆ ಸಿಲುಕಿ ಕೊಚ್ಚಿಹೋಗುವ ಅಪಾಯ ಎದುರಾಗಿತ್ತು ಎಂದು ಅವರು ಹೇಳಿದರು.

ಮಾಹಿತಿ ಲಭ್ಯವಾದ ಕೂಡಲೇ ಕತಾರ್ನಿಯಾಘಾಟ್ ರೇಂಜ್ ಅಧಿಕಾರಿ ಹಾಗೂ ಸಿಬ್ಬಂದಿ ಗಿರ್ಜಾಪುರಿ ಬ್ಯಾರೇಜ್‌ಗೆ ಧಾವಿಸಿ ನೀರಾವರಿ ಇಲಾಖೆಯ ನೆರವು ಕೋರಿದರು. ನದಿಯ ನೀರಿನ ಹರಿವಿನ ವೇಗವನ್ನು ಕಡಿಮೆ ಮಾಡುವ ಉದ್ದೇಶದಿಂದ ನೀರಾವರಿ ಇಲಾಖೆ ಬ್ಯಾರೇಜ್‌ನ ಗೇಟ್‌ಗಳನ್ನು ಮುಚ್ಚಿತು. ಇದರಿಂದ ವಯಸ್ಕ ಆನೆಗಳಿಗೆ ಮತ್ತೆ ನೆಲದ ಮೇಲೆ ಕಾಲೂರಲು ಸಾಧ್ಯವಾಯಿತು. ಬಳಿಕ ಅವು ಮರಿಯಾನೆಗಳನ್ನು ಸ್ಥಿರಗೊಳಿಸಿ ಸುರಕ್ಷಿತ ಸ್ಥಳದತ್ತ ಕರೆದೊಯ್ದವು. ನಂತರ ಅರಣ್ಯ ಸಿಬ್ಬಂದಿ ಶಬ್ದ ಮಾಡುತ್ತಾ ಆನೆಗಳನ್ನು ಅರಣ್ಯದತ್ತ ತೆರಳುವಂತೆ ಮಾಡಿದರು. ಅಂತಿಮವಾಗಿ ಐದು ಆನೆಗಳೂ ಸುರಕ್ಷಿತವಾಗಿ ಅರಣ್ಯ ಪ್ರದೇಶಕ್ಕೆ ಮರಳಿದವು.

ಹಿರಿಯ ಐಎಫ್‌ಎಸ್ ಅಧಿಕಾರಿ ಹಾಗೂ ವನ್ಯಜೀವಿ ತಜ್ಞ ಡಾ. ರಮೇಶ್ ಪಾಂಡೆ ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡುವ ಮೂಲಕ ಅರಣ್ಯ ಮತ್ತು ನೀರಾವರಿ ಇಲಾಖೆಗಳ ತ್ವರಿತ ಕಾರ್ಯಾಚರಣೆಯನ್ನು ಶ್ಲಾಘಿಸಿದ್ದಾರೆ. ಎರಡೂ ಇಲಾಖೆಗಳ ನಡುವಿನ ಸಮಯೋಚಿತ ಸಮನ್ವಯ ಹಾಗೂ ರೇಂಜ್ ಸಿಬ್ಬಂದಿಯ ತಕ್ಷಣದ ಸ್ಪಂದನೆಯಿಂದ ದೊಡ್ಡ ವನ್ಯಜೀವಿ ದುರಂತವೊಂದು ತಪ್ಪಿದೆ ಎಂದು ಅವರು ಹೇಳಿದ್ದಾರೆ.

## ಆಹಾರ, ಇಂಧನ ಸಾಗಣೆಗೆ ನಿರ್ಣಾಯಕ ಸಮುದ್ರ ಮಾರ್ಗಗಳ ರಕ್ಷಣೆಗೆ ಸಾಮೂಹಿಕ ಕ್ರಮ ಅಗತ್ಯ: ಭಾರತ




**ವಿಜಯ ದುಂಬಿ ಸುದ್ದಿ....**

**ವಿಶ್ವಸಂಸ್ಥೆ: ಆಹಾರ, ರಸಗೊಬ್ಬರ ಹಾಗೂ ಇಂಧನದ ನಿರಂತರ ಸಾಗಣೆಗೆ ಸುರಕ್ಷಿತ ಮತ್ತು ಊಹಿಸಬಹುದಾದ ಕಡಲ ವ್ಯಾಪಾರ ಮಾರ್ಗಗಳು ಅತ್ಯಗತ್ಯವಾಗಿದ್ದು, ನಿರ್ಣಾಯಕ ಸಮುದ್ರ ಮಾರ್ಗಗಳು ಹಾಗೂ ಕಡಲ ಮೂಲಸೌಕರ್ಯವನ್ನು ರಕ್ಷಿಸಲು ಅಂತರರಾಷ್ಟ್ರೀಯ ಸಮುದಾಯ ಸಾಮೂಹಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಭಾರತ ಕರೆ ನೀಡಿದೆ.**

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಉನ್ನತ ಮಟ್ಟದ ಮುಕ್ತ ಚರ್ಚೆಯಲ್ಲಿ ಮಾತನಾಡಿದ ವಿಶ್ವಸಂಸ್ಥೆಯಲ್ಲಿನ ಭಾರತದ ಖಾಯಂ ಪ್ರತಿನಿಧಿ ಹರೀಶ್ ಪರ್ವತನೇನಿ, "ಆಹಾರ ಅಭದ್ರತೆಯು ಸಶಸ್ತ್ರ ಸಂಘರ್ಷದ ಅತ್ಯಂತ ಗಂಭೀರ ಮಾನವೀಯ ಪರಿಣಾಮಗಳಲ್ಲಿ ಒಂದಾಗಿದೆ. ಇಂದಿನ ಸಂಘರ್ಷಗಳು ಹಗೆತನ ನಡೆಯುವ ತಕ್ಷಣದ ಪ್ರದೇಶವನ್ನು ಮೀರಿಯೂ ಪರಿಣಾಮ ಬೀರುತ್ತಿವೆ" ಎಂದು ಹೇಳಿದರು. 'ಬೆಂಕಿಯಡಿಯಲ್ಲಿ ಆಹಾರ: ಜಾಗತಿಕ ಮತ್ತು ಸ್ಥಳೀಯ ಆಹಾರ ಬಿಕ್ಕಟ್ಟುಗಳನ್ನು ತಗ್ಗಿಸುವಲ್ಲಿ ಭದ್ರತಾ ಮಂಡಳಿಯ ಪಾತ್ರ' ಎಂಬ ವಿಷಯದ ಕುರಿತು ನಡೆದ ಚರ್ಚೆಯಲ್ಲಿ ಅವರು ಮಾತನಾಡಿದರು.

ಇಂಧನ ಮಾರುಕಟ್ಟೆಗಳು, ರಸಗೊಬ್ಬರ ಪೂರೈಕೆ, ಕಡಲ ಸಾರಿಗೆ, ಮಾನವೀಯ ಲಾಜಿಸ್ಟಿಕ್ಸ್ ಮತ್ತು ಕೃಷಿ ವ್ಯಾಪಾರಕ್ಕೆ ಉಂಟಾಗುವ ಅಡಚಣೆಗಳು ಪ್ರಾದೇಶಿಕ ಸಂಘರ್ಷಗಳು ಜಾಗತಿಕ ಆಹಾರ ಭದ್ರತೆಗೆ ಹೇಗೆ ಬೆದರಿಕೆಯೊಡ್ಡುತ್ತವೆ ಎಂಬುದನ್ನು ತೋರಿಸಿವೆ. ಇದರ ಹೊರೆ ಆಮದು ಅವಲಂಬಿತ ಅಭಿವೃದ್ಧಿಶೀಲ ರಾಷ್ಟ್ರಗಳ ಮೇಲೆ ಅಸಮಾನವಾಗಿ ಬೀಳುತ್ತಿದೆ ಎಂದು ಅವರು ಹೇಳಿದರು. ಸಂಘರ್ಷಗಳ ಮಾನವೀಯ ಪರಿಣಾಮಗಳನ್ನು ತಗ್ಗಿಸುವುದು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ತಕ್ಷಣದ ಆದ್ಯತೆಯಾಗಬೇಕು ಎಂದು ಭಾರತ ಒತ್ತಿ ಹೇಳಿದೆ. ಇದಕ್ಕಾಗಿ ಸುರಕ್ಷಿತ, ತ್ವರಿತ ಮತ್ತು ಅಡೆತಡೆಯಿಲ್ಲದ ಮಾನವೀಯ ನೆರವಿಗೆ ಅವಕಾಶ ಕಲ್ಪಿಸುವುದು, ಅಗತ್ಯವಿರುವ ಕಡೆ ಸಂಘರ್ಷ ನಿವಾರಣಾ ವ್ಯವಸ್ಥೆಗಳನ್ನು ಬೆಂಬಲಿಸುವುದು ಹಾಗೂ ನಿರ್ಬಂಧಗಳ ಆಡಳಿತ ಸೇರಿದಂತೆ ಭದ್ರತಾ ಮಂಡಳಿಯ ಕ್ರಮಗಳಿಂದ ಮಾನವೀಯ ನೆರವು ಅಥವಾ ಕಾನೂನುಬದ್ಧ ಆಹಾರ ಮತ್ತು ಕೃಷಿ ವ್ಯಾಪಾರಕ್ಕೆ ಅಜಾಗರೂಕತೆಯಿಂದ ಅಡ್ಡಿಯಾಗದಂತೆ ನೋಡಿಕೊಳ್ಳುವುದು ಅಗತ್ಯ ಎಂದು ಪರ್ವತನೇನಿ ಹೇಳಿದರು.

ಅಂತರರಾಷ್ಟ್ರೀಯ ಕಾನೂನಿಗೆ ಅನುಗುಣವಾಗಿ ವಾಣಿಜ್ಯ ಸಾಗಣೆಯ ಸುರಕ್ಷತೆ ಹಾಗೂ ಸಂಚಾರ ಸ್ವಾತಂತ್ರ್ಯವನ್ನು ಸಂರಕ್ಷಿಸುವ ಅಗತ್ಯವನ್ನು ಅವರು ಒತ್ತಿಹೇಳಿದರು. "ಆಹಾರ, ರಸಗೊಬ್ಬರ, ಇಂಧನ ಮತ್ತು ಇತರ ಅಗತ್ಯ ಸರಕುಗಳ ಅಡೆತಡೆಯಿಲ್ಲದ ಸಾಗಣೆಗೆ ಸುರಕ್ಷಿತ ಮತ್ತು ಊಹಿಸಬಹುದಾದ ಸಮುದ್ರ ವ್ಯಾಪಾರ ಮಾರ್ಗಗಳು ಅನಿವಾರ್ಯ. ಸಂಘರ್ಷದ ಸಂದರ್ಭದಲ್ಲಿ ವಾಣಿಜ್ಯ ಸಾಗಣೆಗೆ ಉಂಟಾಗುವ ಅಡಚಣೆಗಳು ತಕ್ಷಣದ ಪ್ರದೇಶವನ್ನು ಮೀರಿ ಪರಿಣಾಮ ಬೀರಬಹುದು. ಇದರಿಂದ ಆಹಾರ ಆಮದು ಮಾಡಿಕೊಳ್ಳುವ ಅಭಿವೃದ್ಧಿಶೀಲ ರಾಷ್ಟ್ರಗಳು ಮತ್ತು ಮಾನವೀಯ ಕಾರ್ಯಾಚರಣೆಗಳು ಅಸಮಾನವಾಗಿ ಬಾಧಿತವಾಗುತ್ತವೆ" ಎಂದು ಅವರು ಹೇಳಿದರು.

ಆದ್ದರಿಂದ ನಿರ್ಣಾಯಕ ಸಮುದ್ರ ಮಾರ್ಗಗಳು ಮತ್ತು ಕಡಲ ಮೂಲಸೌಕರ್ಯವನ್ನು ರಕ್ಷಿಸಲು ಅಂತರರಾಷ್ಟ್ರೀಯ ಸಮುದಾಯ ಸಾಮೂಹಿಕವಾಗಿ ಕಾರ್ಯನಿರ್ವಹಿಸಬೇಕು. ಕಾನೂನುಬದ್ಧ ವಾಣಿಜ್ಯ ಹಾಗೂ ಮಾನವೀಯ ಸಾಗಣೆಗಳು ಅನಗತ್ಯ ಅಡಚಣೆಗಳಿಲ್ಲದೆ ಮುಂದುವರಿಯುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು. ಚರ್ಚೆಯಲ್ಲಿ ಮಾತನಾಡಿದ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್, 2025ರಲ್ಲಿ ಎರಡನೇ ಮಹಾಯುದ್ಧದ ನಂತರದ ಅತ್ಯಧಿಕ ಸಂಖ್ಯೆಯ ಸಶಸ್ತ್ರ ಸಂಘರ್ಷಗಳು ನಡೆದಿದ್ದು, ಕನಿಷ್ಠ 266 ಮಿಲಿಯನ್ ಜನರು ತೀವ್ರ ಆಹಾರ ಅಭದ್ರತೆಯನ್ನು ಎದುರಿಸಿದ್ದರು ಎಂದು ಹೇಳಿದರು. 2025ರಲ್ಲಿ ಈ ಶತಮಾನದಲ್ಲೇ ಮೊದಲ ಬಾರಿಗೆ ಸುಡಾನ್ ಮತ್ತು ಗಾಜಾದಲ್ಲಿ ಎರಡು ಕ್ಷಾಮಗಳು ಏಕಕಾಲದಲ್ಲಿ ದೃಢಪಟ್ಟಿದ್ದು, ಇದನ್ನು "ನಾಚಿಕೆಗೇಡಿನ ಮೈಲಿಗಲ್ಲು" ಎಂದು ಗುಟೆರೆಸ್ ಬಣ್ಣಿಸಿದರು.

ವಿಶ್ವಸಂಸ್ಥೆಯ ಇತ್ತೀಚಿನ 'ಹಸಿವಿನ ಹಾಟ್‌ಸ್ಪಾಟ್' ವರದಿಯ ಪ್ರಕಾರ, 13 ಹಸಿವಿನ ಹಾಟ್‌ಸ್ಪಾಟ್‌ಗಳ ಪೈಕಿ 12ರಲ್ಲಿ ಸಂಘರ್ಷ ಮತ್ತು ಹಿಂಸಾಚಾರವೇ ಪ್ರಮುಖ ಕಾರಣಗಳಾಗಿವೆ ಎಂದು ಅವರು ತಿಳಿಸಿದರು. ಇರಾನ್ ವಿರುದ್ಧದ ಅಮೆರಿಕ–ಇಸ್ರೇಲ್ ಯುದ್ಧ ಮುಂದುವರಿದಿರುವ ಹಿನ್ನೆಲೆಯಲ್ಲಿ ಹಾರ್ಮುಜ್ ಜಲಸಂಧಿಯ ಮಹತ್ವವನ್ನು ಉಲ್ಲೇಖಿಸಿದ ಗುಟೆರೆಸ್, ಜಾಗತಿಕ ತೈಲ ಪೂರೈಕೆಯ ಸುಮಾರು ಐದನೇ ಒಂದು ಭಾಗ ಹಾಗೂ ಜಾಗತಿಕ ರಸಗೊಬ್ಬರ ವ್ಯಾಪಾರದ ಮೂರನೇ ಒಂದು ಭಾಗ ಈ ಮಾರ್ಗದ ಮೂಲಕ ಸಾಗುತ್ತದೆ ಎಂದು ಹೇಳಿದರು. ನಿರ್ಬಂಧಗಳು ಮತ್ತು ಮಾರ್ಗಗಳ ಮುಚ್ಚುವಿಕೆಯಿಂದ ಸರಕುಗಳ ಬೆಲೆ ಏರಿಕೆಯಾಗಿದ್ದು, ಲಭ್ಯತೆ ಕುಸಿದಿದೆ. ಕೆಂಪು ಸಮುದ್ರದಲ್ಲಿ ವಾಣಿಜ್ಯ ಹಡಗುಗಳ ಮೇಲಿನ ದಾಳಿಗಳು ಆಹಾರ ಸೇರಿದಂತೆ ಇತರ ಸರಕುಗಳ ಪೂರೈಕೆ ಸರಪಳಿಗೆ ಮತ್ತಷ್ಟು ಬೆದರಿಕೆಯೊಡ್ಡುತ್ತಿವೆ ಎಂದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಹೇಳಿದರು.

# ಗುಜರಾತ್‌ನ ಕಛ್‌ನಲ್ಲಿ ನಕಲಿ ಮದ್ಯ ಕಾರ್ಖಾನೆ ಪತ್ತೆ

**ವಿಜಯ ದುಂಬಿ ಸುದ್ದಿ....**

**ಭುಜ್: ಗುಜರಾತ್‌ನ ಭಾವನಗರದಲ್ಲಿ ಕಳ್ಳಭಟ್ಟಿ ಮದ್ಯ ಸೇವಿಸಿ 13 ಮಂದಿ ಮೃತಪಟ್ಟ ಘಟನೆ ನಡೆದ ಕೆಲವೇ ದಿನಗಳ ಬಳಿಕ, ಕಛ್ ಜಿಲ್ಲೆಯಲ್ಲಿ ಪೊಲೀಸರು ನಕಲಿ ಮದ್ಯ ತಯಾರಿಕಾ ಘಟಕವೊಂದನ್ನು ಪತ್ತೆಹಚ್ಚಿದ್ದಾರೆ. ಕಾರ್ಯಾಚರಣೆ ವೇಳೆ ಜನಪ್ರಿಯ ಭಾರತೀಯ ನಿರ್ಮಿತ ವಿದೇಶಿ ಮದ್ಯ (ಐಎಂಎಫ್‌ಎಲ್) ಬ್ರ್ಯಾಂಡ್‌ಗಳ ಹೆಸರಿರುವ ಸುಮಾರು 10 ಸಾವಿರ ಖಾಲಿ ಹಾಗೂ ತುಂಬಿದ ಬಾಟಲಿಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.**

ಬಂಧಿತರನ್ನು ಮುಂಬೈ ನಿವಾಸಿ ಹಿತೇಶ್ ಬಮಣಿಯಾ ಹಾಗೂ ಉತ್ತರ ಪ್ರದೇಶದ ಮಥುರಾ ನಿವಾಸಿ ವಿಜೇಂದ್ರ ಜಾಟ್ ಎಂದು ಗುರುತಿಸಲಾಗಿದೆ. ಗುಜರಾತ್ ಮದ್ಯ ನಿಷೇಧಿತ ರಾಜ್ಯವಾಗಿದ್ದು, ಇಲ್ಲಿ ಮದ್ಯದ ತಯಾರಿಕೆ, ಮಾರಾಟ ಮತ್ತು



ಸೇವನೆಯನ್ನು ಕಾನೂನುಬದ್ಧವಾಗಿ ನಿಷೇಧಿಸಲಾಗಿದೆ. ಕಾರ್ಯಾಚರಣೆ ಕುರಿತು ಬಾರ್ಡರ್ ರೇಂಜ್ ಪೊಲೀಸ್ ಮಹಾನಿರೀಕ್ಷಕ ಚಿರಾಗ್ ಕೊರಾಡಿಯಾ ಮಾತನಾಡಿ, ಕಛ್ ಜಿಲ್ಲೆಯ ಆದಿಪುರದಲ್ಲಿರುವ ತಾತ್ಕಾಲಿಕ ಕಾರ್ಖಾನೆಯ ಮೇಲೆ ದಾಳಿ ನಡೆಸಿ ಸುಮಾರು 9,400 ಖಾಲಿ ಬಾಟಲಿಗಳು ಹಾಗೂ 180 ಮಿಲಿ ಮದ್ಯ ತುಂಬಿದ್ದ 600 ಬಾಟಲಿಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಇದರ ಜೊತೆಗೆ ಸುಮಾರು 600 ಲೀಟರ್ ರಾಸಾಯನಿಕಗಳನ್ನೂ ವಶಪಡಿಸಿಕೊಳ್ಳಲಾಗಿದೆ. ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದುಕೊಂಡಿದ್ದು, ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ಹೇಳಿದ್ದಾರೆ. ಇದೇ ವೇಳೆ, ಭಾವನಗರ ಜಿಲ್ಲೆಯಲ್ಲಿ ಜನಪ್ರಿಯ ಐಎಂಎಫ್‌ಎಲ್ ಬ್ರ್ಯಾಂಡ್‌ನ ಹೆಸರಿರುವ ಬಾಟಲಿಗಳಲ್ಲಿ ತುಂಬಿದ್ದ ನಕಲಿ ಮದ್ಯ ಸೇವಿಸಿ 13 ಮಂದಿ ಮೃತಪಟ್ಟಿದ್ದರು. ಮೆಥನಾಲ್ ಎಂಬ ಅತ್ಯಂತ ವಿಷಕಾರಿ ರಾಸಾಯನಿಕ ಹೊಂದಿದ್ದ ಮದ್ಯವನ್ನು ಬ್ರ್ಯಾಂಡೆಡ್ ಮದ್ಯದ ಬಾಟಲಿಗಳಲ್ಲಿ ತುಂಬಿ ಮಾರಾಟ ಮಾಡಲಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಮದ್ಯವನ್ನು ಒಟ್ಟು 67 ಮಂದಿ ಸೇವಿಸಿದ್ದರು ಎನ್ನಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇದುವರೆಗೆ 27 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. ಕಳ್ಳಭಟ್ಟಿ ಮದ್ಯ ಹಾಗೂ ಜೂಜಾಟ ಸೇರಿದಂತೆ ಅಕ್ರಮ ಚಟುವಟಿಕೆಗಳ ಮೇಲೆ ರಾಜ್ಯಾದ್ಯಂತ ನಿಗಾ ವಹಿಸುವ ಗುಜರಾತ್ ಪೊಲೀಸರ ವಿಶೇಷ ಘಟಕವಾದ ಸ್ಟೇಟ್ ಮಾನಿಟರಿಂಗ್ ಸೆಲ್ (ಎಸ್‌–ಎಂಸಿ), ಭಾವನಗರ ಕಳ್ಳಭಟ್ಟಿ ಮದ್ಯ ದುರಂತದ ಕುರಿತು ಹಲವು ರಾಜ್ಯಗಳನ್ನು ಒಳಗೊಂಡ ತನಿಖೆ ನಡೆಸುತ್ತಿದೆ. ಮೆಥನಾಲ್ ಹಾಗೂ ಇತರ ರಾಸಾಯನಿಕಗಳ ಮೂಲ, ಅವುಗಳನ್ನು ಸಾಗಿಸಿದವರು ಹಾಗೂ ನಕಲಿ ಮದ್ಯ ತಯಾರಿಕೆಗೆ ಅಗತ್ಯವಾದ ಕಚ್ಚಾ ವಸ್ತುಗಳನ್ನು ಖರೀದಿಸಿ ಸಾಗಿಸುವಲ್ಲಿ ಭಾಗಿಯಾಗಿರುವವರ ಬಗ್ಗೆಯೂ ಎಸ್‌ಎಂಸಿ ತನಿಖೆ ನಡೆಸುತ್ತಿದೆ.

VIJYA DUMBI KANNADA DAILY EDITED,PUBLISHED AND OWNED BY,VIJYA PRiNTED AT MANJESHA,U#74,4TH,MAIN,7TH,CROSS,NEARCHOWDESHARI TEMPALE KAVERINAGARA,MAHADEVAPURA,POST BANGALORU KARNATAKAPUBLISHED Hosapalya Byrasandra Modalakote Po , Nelamangala to bengaluru rurala Karnataka 562123 EDITOR VIJYA